₹ 4 ಪುಟ: 4 ಸಂಪುಟ: 4 ಸಂಚಿಕೆ 63 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 63 Saturday, 22, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಪ್ರಜಾಪ್ರಭುತ್ವಕ್ಕೆ ಇಂದು ಕರಾಳ ದಿನ, ಪ್ರಧಾನಿ ಮೋದಿ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

ಬೆಂಗಳೂರು: ಭಾರತೀಯ ಪ್ರಜಾಪ್ರಭುತ್ವಕ್ಕೆ ಇಂದು ಅತ್ಯಂತ ಕರಾಳ ದಿನ, ಪ್ರಧಾನಿ ಮೋದಿ ಅವರ ಕಚೇರಿ ದೇಶಕ್ಕೆ ಅಪಮಾನ ಮಾಡಿದೆ. ಪ್ರಧಾನಿ ಮೋದಿ ಅವರು ಅವರು ಅಪರಾಧ ಕೃತ್ಯವನ್ನು ಎಸಗಿದ್ದಾರೆ. ಕರ್ನಾಟಕದ ಇತಿಹಾಸದಲ್ಲಿ ಈ ದಿನ ಪ್ರಧಾನಿ ನರೇಂದ್ರ ಮೋದಿ ಅವರು 40% ಕಮಿಷನ್ ಭ್ರಷ್ಟಾಚಾರಕ್ಕೆ ಅಂಕಿತ ಹಾಕಿದ ದಿನವಾಗಿ ಉಳಿಯಲಿದೆ. ಈ ದಿನ ಮೋದಿ ಅವರು ಕರ್ನಾಟಕದ ಬಿಜೆಪಿ ಕಾರ್ಯಕರ್ತರ ಜೀವಕ್ಕೆ ಬೆಲೆ ಇಲ್ಲ ಎಂದು ಹೇಳಿದ ದಿನ. ಮೋದಿ ಅವರು ರಾಜಕೀಯ ಲಾಭ ಹಾಗೂ ಮತ ಗಳಿಕೆಗೆ ಮೋದಿ ಹಾಗೂ ಬಿಜೆಪಿ ಯಾವುದೇ ಹಂತಕ್ಕೆ ಬೇಕಾದರೂ ಹೋಗುತ್ತಾರೆ ಎಂದು ಸಾಬೀತಾಗಿರುವ ದಿನ. ಇಂದು ಮೋದಿ ಅವರು ಸತ್ಯಪಾಲ್ ಮಲಿಕ್ ಅವರ ಪ್ರಧಾನಿಗೆ ಭ್ರಷ್ಟಾಚಾರದ ಮೇಲೆ ದ್ವೇಷವಿಲ್ಲ ಎಂಬ ಹೇಳಿಕೆಯನ್ನು ಸಾಬೀತು ಮಾಡಿರುವ ದಿನ ಎಂದರು.

ಪ್ರಧಾನಿ ಮೋದಿ ಅವರು ಬಿಜೆಪಿ ಕಾರ್ಯಕರ್ತ ಸಂತೋಷ್ ಪಾಟೀಲ್ ಅವರ ಸಾವಿಗೆ ಕಾರಣಕರ್ತರಾದ ಮಾಜಿ ಸಚಿವ ಈಶ್ವರಪ್ಪ ಅವರಿಗೆ ಕರೆ ಮಾಡಿ ಪ್ರಶಂಸೆ ವ್ಯಕ್ತಪಡಿಸಿರುವ ವಿಡಿಯೋ ನಾವೆಲ್ಲರೂ ನೋಡಿದ್ದೇವೆ.



ಭಾರತದ ಪ್ರಜೆಯಾಗಿ ನಾವು ಪ್ರಧಾನಿಗೆ ಪ್ರಶ್ನೆ ಕೇಳಬಯಸುತ್ತೇವೆ. ಈಶ್ವರಪ್ಪ ಅವ–ರಿಗೆ 40% ಕಮಿಷನ್ ನೀಡಲಾಗದೇ ಆತ್ಮಹತ್ಯೆ ಮಾಡಿಕೊಳ್ಳಲಾಗುತ್ತಿದೆ ಎಂದು ಬಿಜೆಪಿ ಕ್ರಾಯಕರ್ತ ಸಂತೋಷ್ ಪಾಟೀಲ್ ಆತ್ಮಹತ್ಯೆ ಪತ್ರ ಬರೆದು ಪ್ರಾಣ ಕಳೆದುಕೊಳ್ಳಲಿಲ್ಲವೇ? ಈ ಬಗ್ಗೆ ಮೋದಿ ಅವರು ಸಂತೋಷ್ ಪಾಟೀಲ್ ಅವರ ಕುಟುಂಬದ ಮನೆಯವರ ಜತೆ ಮಾತನಾಡಿ ಸಂತಾಪ ಸೂಚಿಸಿದ್ದಾರಾ? ಮೋದಿ ಅವರು ಬೆಳಗಾವಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಂತೋಷ್ ಪಾಟೀಲ್ ಅವರ ಮನೆಗೆ ಭೇಟಿ ನೀಡ್ದದರೇ? ಡಬಲ್ ಇಂಜಿನ್ ಸರ್ಕಾರದಿಂದ ಡಬಲ್ ದ್ರೋಹ ಬಗೆಯಲಾಗಿದೆ ಎಂಬುದು ಸಾಬೀತಾಗಿದೆ ಎಂದು ಹೇಳಿದರು.

ಈಶ್ವರಪ್ಪ ಬಿಜೆಪಿ ನಾಯಕರಾಗಿರಬಹುದು, ಆದರೆ ಅವರನ್ನು ಭ್ರಷ್ಟಾಚಾರ ಆರೋಪದ ಮೇರೆಗೆ ಸಚಿವಸ್ಥಾನದಿಂದ ಕೆಳಗಿಳಿಸಲಾಗಿ–ತ್ತು. ಇವರ ಮೇಲಿನ ಆರೋಪ ಕಾಂಗ್ರೆಸ್ ಪಕ್ಷ ಮಾಡಿಲ್ಲ, ಪ್ರಾಣ ಬಿಟ್ಟ ಸಂತೋಷ್ ಪಾಟೀಲ್ ತನ್ನ ಆತ್ಮಹತ್ಯೆ ಪತ್ರದಲ್ಲಿ ಆರೋಪ ಮಾಡಲಾಗಿದೆ. ಸಂತೋಷ್ ಪಾಟೀಲ್ ಅವರ ಸಾವಿಗೆ ಈಶ್ವರಪ್ಪ ಕಾರಣವಲ್ಲದಿದ್ದರೆ,

ಅವರನ್ನು ಸಚಿವಸ್ಥಾನದಿಂದ ಕೆಳಗೆ ಇಳಿಸಿದ್ದು ಯಾಕೆ? ಅವರಿಗೆ ಟಿಕೆಟ್ ಯಾಕೆ ನೀಡಲಿಲ್ಲ? ಮೋದಿ ಅವರು ಈಶ್ವರಪ್ಪ ಅವರಿಗೆ ಕರೆ ಮಾಡಿ ಪ್ರಶಂಸೆ ಮಾಡುವ ಮೂಲಕ ರಾಜ್ಯದಲ್ಲಿ 40% ಕಮಿಷನ್ ಭ್ರಷ್ಟಾಚಾರಕ್ಕೆ ಅನುಮೋದನೆ ನೀಡಿದ್ದಾರೆ. ಪ್ರಧಾನಿ ಅವರ ಈ ನಡೆ ನೋಡಿ ದೇಶದ ಪ್ರಜೆಯಾಗಿ ನನಗೆ ನಾಚಿಕೆಯಾಗುತ್ತಿದೆ. ಪ್ರಧಾನಿ ಮೋದಿ ಅವರು ರೌಡಿ ಶೀಟರ್ ಫೈಟರ್ ರವಿ ಅವರಿಗೆ ತಲೆ ಬಾಗಿ ನಮಸ್ಕ–ರಿಸುತ್ತಾರೆ ಎಂದು ತಿಳಿಸಿದರು.

ಜಮ್ಮು ಕಾಶ್ಮೀರ ಹಾಗೂ ಗೋವಾ ರಾಜ್ಯಪಾಲ ಸ್ಥಾನಕ್ಕೆ ನರೇಂದ್ರ ಮೋದಿ ಅವರೇ ನೇಮಿಸಿದ ಸತ್ಯಪಾಲ ಮಲಿಕ್ ಅವರು ತಮ್ಮ ಸಂದರ್ಶನದಲ್ಲಿ ಗೋವಾದಲ್ಲಿ ಮುಖ್ಯಮಂತ್ರಿಗಳ ಮನೆಯಲ್ಲೇ ಲಂಚ ಪಡೆದು ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ ಪ್ರಧಾನಿಗೆ ಕರೆ ಮಾಡಿದಾಗ ಪ್ರಧಾನಮಂತ್ರಿಗಳು ಯಾವುದೇ ಕ್ರಮ ಕೈಗೊಳ್ಳಿಲ್ಲ.

ಸತ್ಯಪಾಲ್ ಮಲಿಕ್ ಅವರು ಜಮ್ಮು ಕಾಶ್ಮೀರ ರಾಜ್ಯಪಾಲರಾಗಿದ್ದ ಸಂದರ್ಭದಲ್ಲಿ ರಾಮ್ ಮಾದವ್ ಅವರು ಬಂದು 300 ಕೋಟಿಯ ಡೀಲ್ ತೆಗೆದುಕೊಂಡು ಬಂದಿದ್ದರು.

ಈ ಬಗ್ಗೆ ಮೋದಿ ಅವರ ಗಮನಕ್ಕೆ ತರಲಾಯಿತಾದರೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಆಮೂಲಕ ಈ ಸರ್ಕಾರ ನಾ ಖಾವೂಂಗಾ ನಾ ಖಾನೇದೂಂಗಾ ಸರ್ಕಾರವಲ್ಲ, ಇದು 40% ಕಮಿಷನ್ ಭ್ರಷ್ಟಾಚಾರವನ್ನು ಪೋಷಿಸುತ್ತಿರುವ ಸರ್ಕಾರವಾಗಿದೆ. ಇದೇ ಕಾರಣ–ಕ್ಕೆ ಗುತ್ತಿಗೆದಾರರ ಸಂಘ, ರುಪ್ಸಾ, ಲಿಂಗಾಯತ ಸಮುದಾಯದ ಸ್ವಾಮೀಜಿಗಳ ಭ್ರಷ್ಟಾಚಾರದ ಆರೋಪದ ಬಗ್ಗೆ ಮೋದಿ ಅವರು ಯಾವುದೇ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಮೋದಿ ಅವರು ಇಂದು ಭ್ರಷ್ಟಾಚಾರದ ಕಳಂಕ ಹೊತ್ತಿರುವ ಈಶ್ವರಪ್ಪ ಅವರಿಗೆ ಕರೆ ಮಾಡಿ ಪ್ರಶಂಸೆ ಮಾಡಿರುವುದು ಬಿಜೆಪಿ ಸರ್ಕಾರ ಭ್ರಷ್ಟಾಚಾರವನ್ನು ಬೆಂಬಲಿಸಲಿದೆ ಎಂಬುದಕ್ಕೆ ಸಾಕ್ಷಿ. ರಾಜ್ಯದ ಜನ ಇದನ್ನು ಕ್ಷಮಿಸುವುದಿಲ್ಲ.

}2ನೇ ಪುಟಕ್ಕೆ

## ಪಿಯು ಫಲಿತಾಂಶ ಪ್ರಕಟ

### ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ, ಯಾದಗಿರಿಗೆ ಕೊನೇ ಸ್ಥಾನ

### ■ ಶೇ.74.67 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ



ಬೆಂಗಳೂರು: ಬಹು ನಿರೀಕ್ಷಿತ ದ್ವಿತೀಯ ಪಿಯುಸಿ ಅಂತಿಮ ಪರೀಕ್ಷಾ ಫಲಿತಾಂಗಳು ಪ್ರಕಟವಾಗಿದ್ದು, ರಾಜ್ಯಾದ್ಯಂತ 5.24 ಲಕ್ಷ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಮಾಹಿತಿ ನೀಡಿದೆ.

ಸಾಮಾನ್ಯ ವಿದ್ಯಾರ್ಥಿಗಳು, ಪುನರಾವರ್ತಿತರು ಮತ್ತು ಖಾಸಗಿ ಅಭ್ಯರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿ ಪ್ರಕಾರಗಳಿಗೆ ಫಲಿತಾಂಶಗಳನ್ನು ಬಿಡುಗಡೆ ಮಾಡಲಾಗಿದೆ. ಇಂದು ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಅಧಿಕಾರಿಗಳು ಫಲಿತಾಂಶ ಪ್ರಕಟ ಮಾಡಿದ್ದು, ಪರೀಕ್ಷೆಯಲ್ಲಿ ಒಟ್ಟು 5,24,209 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಶಾಲಾ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೀಶ್ ಸಿಂಗ್ ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಿದರು. 7,02,067 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದು 5,24,209 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು ಈ ಬಾರಿ 74.67% ಫಲಿತಾಂಶ ದಾಖಲಾಗಿದೆ. ದಕ್ಷಿಣ ಕನ್ನಡ ಮೊದಲ ಸ್ಥಾನ (95.33%) ಉಡುಪಿಗೆ ಎರಡನೇ ಸ್ಥಾನ( 95.24%) ಕೊಡಗಿಗೆ 3ನೇ ಸ್ಥಾನ (90.55%) ಸಿಕ್ಕಿದರೆ ಯಾದಗಿರಿಗೆ (78.97%) ಕೊನೆಯ ಸ್ಥಾನ ಸಿಕ್ಕಿದೆ. ಎಂದಿನಂತೆ ಬಾಲಕೀಯರೇ ಮೇಲುಗೈ ಸಾಧಿಸಿದ್ದು 80.25% ಪಾಸ್ ಆಗಿದ್ದರೆ ಬಾಲಕರು 69.05% ಪಾಸ್ ಆಗಿದ್ದಾರೆ. ಗ್ರಾಮೀಣ ಭಾಗದ 74.79% ಮಕ್ಕಳು ತೇರ್ಗಡೆಯಾಗಿದ್ದರೆ 74.63% ನಗರ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಪರೀಕ್ಷೆಗೆ 727,923 ವಿದ್ಯಾರ್ಥಿಗಳು ನೋಂದಾಯಿಸಿದ್ದು, ಈ ಪೈಕಿ 725,821 ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಹರಾಗಿದ್ದಾರೆ. 23,754 ಮಂದಿ ವಿದ್ಯಾರ್ಥಿಗಳು ಎಲ್ಲ ವಿಷಯಗಳ ಪರೀಕ್ಷೆಗೆ ಗೈರಾಗಿದ್ದಾರೆ. 702,067 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಈ ಪೈಕಿ 524,209 ಮಂದಿ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂದು ತಿಳಿದುಬಂದಿದೆ. 2023 ಕರ್ನಾಟಕ ದ್ವಿತೀಯ ಪಿಯುಸಿ ಪರೀಕ್ಷೆಗೆ ಒಟ್ಟು 7,02,067 ವಿದ್ಯಾರ್ಥಿಗಳು ಹಾಜರಾಗಿದ್ದರು. ಒಟ್ಟು 61 ಕೇಂದ್ರದಲ್ಲಿ ಮೌಲ್ಯಮಾಪನ ಮಾಡಲಾಗಿತ್ತು.

## ಕೆಎಸ್ ಈಶ್ವರಪ್ಪಗೆ ಪ್ರಧಾನಿ ಮೋದಿ ಕರೆ: ಪಕ್ಷಕ್ಕೆ ಬದ್ಧತೆ ಬಗ್ಗೆ ಮೆಚ್ಚುಗೆ



ಶಿವಮೊಗ್ಗ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶುಕ್ರವಾರ ಮುಂಜಾನೆ ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರಿಗೆ ದೂರವಾಣಿ ಕರೆ ಮಾಡಿ ಕುಶಲೋಪರಿ ವಿಚಾರಿಸಿದ್ದಾರೆ.

ಕೆಎಸ್ ಈಶ್ವರಪ್ಪ ಅವರು ಚುನಾವಣಾ ರಾಜಕೀಯದಿಂದ ನಿವೃತ್ತಿ ತೆಗೆದುಕೊಳ್ಳಲು ಪಕ್ಷ ಸೂಚಿಸುತ್ತಿದ್ದಂತೆ ಪಕ್ಷದ ಆದೇಶವನ್ನು ಈಶ್ವರಪ್ಪ ಪಾಲನೆ ಮಾಡಿದ್ದರು. ರಾಜಕೀಯ ನಿವೃತ್ತಿ ಘೋಷಣೆ ಮಾಡಿದರು. ಈ ಬಾರಿ ಶಿವಮೊಗ್ಗ ನಗರ ಕ್ಷೇತ್ರದಿಂದ ತಮ್ಮ ಪುತ್ರ ಕಾಂತೇಶ್ಗೆ ಟಿಕೆಟ್ ಬಯಸಿದ್ದರು. ಆದರೆ ಪುತ್ರನಿಗೆ ಟಿಕೆಟ್ ಸಿಗಲಿಲ್ಲ.

ಹೀಗಾಗಿ ಈಶ್ವರಪ್ಪ ಅಸಮಾಧಾನಗೊಳ್ಳಬಹುದು ಎಂಬ ಭಾವನೆ ಎಲ್ಲರಲ್ಲಿತ್ತು. ಆದರೆ ಈಶ್ವರಪ್ಪ ಇದು ಯಾವುದಕ್ಕು ತಲೆ ಕೆಡಿಸಿಕೊಳ್ಳದೇ ಪಕ್ಷ ನಿಷ್ಠೆ ಮೆರೆದಿದ್ದು, ಇದೇ ಕಾರಣಕ್ಕೆ ಸ್ವತಃ ಪ್ರಧಾನಿ ಮೋದಿ ಅವ–ರಿಗೆ ಕರೆ ಮಾಡಿದ್ದಾರೆ ಎನ್ನಲಾಗಿದೆ.

ಈಶ್ವರಪ್ಪ ಅವರ ಪಕ್ಷ ನಿಷ್ಠೆ ಮೆಚ್ಚಿ ಸ್ವತಃ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೇ ದೂರವಾಣಿ ಕರೆ ಮಾಡಿ ಪ್ರಶಂಸೆ ವ್ಯಕ್ತಪಡಿಸಿದರು. ಈ ವೇಳೆ ಶಿವಮೊಗ್ಗ ವಿಧಾನಸಭಾ ಚುನಾವಣೆಯ ಬಗ್ಗೆ ಚರ್ಚೆ ನಡೆಸಿದ್ದು, ಈ ವೇಳೆ ಈಶ್ವರಪ್ಪ ಮಾತನಾಡಿ, ಸಾಮಾನ್ಯ ಕಾರ್ಯಕರ್ತರೊಂದಿಗೆ ಈ ರೀತಿ ಮಾತನಾಡುತ್ತಿರುವುದು ಸಂತೋಷ ತಂದಿದೆ. ಸಂಘಟನೆ ಹಾಗೂ ನಿಮ್ಮನೊಂದಿಗೆ ಸದಾ ನಾನು ಇರುತ್ತೇನೆ ಎಂದು ಈಶ್ವರಪ್ಪ ತಿಳಿಸಿದರು.

## ಪ್ರಧಾನಿ ಮೋದಿ ಶೇ 40 ಕಮಿಷನ್ ಆರೋಪ ಅನುಮೋದಿಸಿದ್ದಾರೆ: ರಣದೀಪ್ ಸಿಂಗ್ ಸುರ್ಜೇವಾಲ ವಾಗ್ದಾಳಿ

ಬೆಂಗಳೂರು: ಕಮಿಷನ್ ಆರೋಪದಿಂದ ಸಚಿವ ಸ್ಥಾನ ಕಳೆದುಕೊಂಡ ಕೆ ಎಸ್ ಈಶ್ವರಪ್ಪಗೆ ಕರೆ ಮಾಡಿ ಪ್ರಧಾನಿ ನರೇಂದ್ರ ಮೋದಿ 40 ಕಮಿಷನ್ ಆರೋಪವನ್ನು ಅನುಮೋದಿಸಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ವಾಗ್ದಾಳಿ ನಡೆಸಿದರು.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ಕಚೇರಿ ದೊಡ್ಡ ಅಪರಾಧ ಎಸಗಿದೆ. ಭ್ರಷ್ಟಾಚಾರ ಆರೋಪ ಎದು–ರಿಸುತ್ತಿರುವ ಕೆ ಎಸ್ ಈಶ್ವರಪ್ಪಗೆ ಕರೆ ಮಾಡಿದ್ದಾರೆ. ಇದು ಭಾರತ ಇತಿಹಾಸ, ಕರ್ನಾಟಕದ ಇತಿಹಾಸದಲ್ಲಿ ನೆನಪಿನಲ್ಲಿ ಉಳಿಯಲಿದೆ.

ಕರೆ ಮಾಡುವ ಮೂಲಕ ಪಿಎಂ ಶೇ 40ರಷ್ಟು ಭ್ರಷ್ಟಾಚಾರಕ್ಕೆ ಅನುಮೋದನೆ ನೀಡಿದ್ದಾರೆ. ಪಿಎಂ ಮೋದಿ ರಾಜಕೀಯ ಲಾಭಕ್ಕಾಗಿ ಯಾವುದೇ ಹಂತಕ್ಕೂ ಇಳಿಯಬಹುದು. ಕೆ ಎಸ್ ಈಶ್ವರಪ್ಪ ಅವರಿಗೆ ಕರೆ ಮಾಡಿ ಅದನ್ನು ಸಾಬೀತು ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಕೆ ಎಸ್ ಈಶ್ವರಪ್ಪ ಜೊತೆ ಮೋದಿ ಮಾತನಾಡಿದ್ದಾರೆ: ಈಶ್ವರಪ್ಪ ಜೊತೆ ಕರೆ ಮಾಡಿ, ನಗು ನಗುತ್ತಾ ಮಾತನಾಡಿದ್ದಾರೆ. ಈಶ್ವರಪ್ಪ



ಕಮಿಷನ್ ಆರೋಪದಲ್ಲಿ ಮಂತ್ರಿಗಿರಿಯಿಂದ ವಜಾ ಮಾಡಿಲ್ಲವೇ?. ಆತ್ಮಹತ್ಯೆ ಮಾಡಿಕೊಂಡ ಸಂತೋಷ್ ಪಾಟೀಲ್ ಪತ್ನಿ ಜೊತೆ ಮಾತನಾಡಿದ್ದಾರಾ?. ಅವರ ತಂದೆ ತಾಯಿ ಜೊತೆ ಮಾತನಾಡಿದ್ದಾರಾ?.

ಪ್ರಧಾನಿ ಅವರ ಮನೆಗೆ ಹೋಗಿದ್ದಾರಾ?. ಈಶ್ವರಪ್ಪ ಬಿಜೆಪಿ ಮುಖಂಡರಾಗಿರಬಹುದು, ಪ್ರಕರಣ ಕೋರ್ಟ್ನಲ್ಲಿದೆ. ಆದರೆ, ಗುತ್ತಿಗೆದಾರ ಸಂತೋಷ್, ಈಶ್ವರಪ್ಪ ಅವರ ಹೆಸರು ಹೇಳಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಅದಕ್ಕಾಗಿ ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರ ಜೊತೆ ಮೋದಿ ಮಾತನಾಡಿದ್ದಾರೆ ಎಂದು ಕಿಡಿ ಕಾರಿದರು.

## BJP ಸರಕಾರದಲ್ಲಿ ಭ್ರಷ್ಟಾಚಾರ ಇದ್ದದ್ದು ನಿಜ: ಜಗದೀಶ ಶೆಟ್ಟರ್

ಹುಬ್ಬಳ್ಳಿ: ಬಿಜೆಪಿ ಸರಕಾರದಲ್ಲಿ ಶೇ.40 ಪರ್ಸಂಟೇಜ್ ಕಮಿಷನ್ ಇತ್ತೋ ಇಲ್ಲವೋ ಗೊತ್ತಿಲ್ಲ. ಆದರೆ ಭ್ರಷ್ಟಾಚಾರ ಇದ್ದದ್ದು ನಿಜ. ಆರೋಗ್ಯ ಇಲಾಖೆ ಕಾರ್ಯ ವೈಖರಿ ಕು–ರಿತು ಸದನದಲ್ಲಿ ಮಾತನಾಡುವಾಗ ಪ್ರಸ್ತಾವಿಸಿದ್ದೆ ಎಂದು ಜಗದೀಶ ಶೆಟ್ಟರ್ ತಿಳಿಸಿದರು. ಮಾಧ್ಯಮ ಸಂವಹನ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇಲ್ಲಿನ ಕಿಮ್ಸ್‌ನಲ್ಲಿ 30 ವೈದ್ಯರು ಹಾಗೂ ಹಾವೇರಿ ವೈದ್ಯಕೀಯ ಕಾಲೇಜಿಗೆ 70 ವೈದ್ಯರ ನೇಮಕಾತಿಗೆ ಸಂದರ್ಶನ ಮುಗಿದು ಒಂದು ವರ್ಷವಾದರೂ ನೇಮ ಕಾತಿ



ಆದೇಶ ನೀಡಿರಲಿಲ್ಲ. ಈ ಕು–ರಿತು ಸದನದಲ್ಲಿ ಆರೋಗ್ಯ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರನ್ನು ನೇರವಾಗಿ ಪ್ರಶ್ನಿಸಿದ್ದೆ.ಈ ಸಂದರ್ಭದಲ್ಲಿ ಭ್ರಷ್ಟಾಚಾರದ ಹಿನ್ನೆಲೆಯಲ್ಲಿ ಪ್ರಕ್ರಿಯೆ ಪೂರ್ಣಗೊಂಡಿಲ್ಲ ಎಂದು ಪ್ರಸ್ತಾವಿಸಿದ್ದೆ. ಇದರಿಂದಾಗಿ ಕಿಮ್ಸ್‌ನಲ್ಲಿ ಒಂದಿಷ್ಟು ವೈದ್ಯರ ನೇಮಕಾತಿ ಆದೇಶ ನೀಡಲಾಯಿತು. ಆದರೆ ಮುಖ್ಯಮಂತ್ರಿ ಪ್ರತಿನಿಧಿಸುವ ಜಿಲ್ಲೆಯಲ್ಲಿ ಕಾರ್ಯಗತಗೊಳ್ಳಲಿಲ್ಲ. ಈಶ್ವರಪ್ಪ ಅವರ ಮೇಲೆ ಪಕ್ಷ ಒತ್ತಡ ತಂದು ನನ್ನಂಥವರ ಬಗ್ಗೆ ಮಾತನಾಡಿಸಿದ್ದಾರೆ ಎಂದರು.

## 6.93 ಕೋಟಿ ಮೌಲ್ಯದ ಆಭರಣ ಸೀಜ್

ಹಾವೇರಿ: ಜಿಲ್ಲೆಯ ಹೊರವಲಯದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಅಪಾರ ಪ್ರಮಾಣದ ಬಂಗಾರ ಮತ್ತು ಬೆಳ್ಳಿಯ ಆಭರಣಗಳನ್ನು ಸೀಜ್ ಮಾಡಲಾಗಿದೆ. ಒಟ್ಟು 11 ಕೆ.ಜಿ ಚಿನ್ನ, 74 ಕೆ.ಜಿ ಬೆಳ್ಳಿ ಹಾಗೂ ತಟ್ಟೆ, ಲೋಟ, ಪೂಜಾ ಸಾಮಗ್ರಿಗಳನ್ನು ವಶಕ್ಕೆ ಪಡೆಯಲಾಗಿದೆ. ಇವುಗಳ ಒಟ್ಟು ಮೌಲ್ಯ 6.93 ಕೋಟಿ ರೂಪಾಯಿ ಎಂದು ಹೇಳಲಾಗಿದೆ.

ಹಾವೇರಿ ಹೊರವಲಯದ ಅಜ್ಜಯ್ಯನ ಪ್ರದೇಶದ ಬಳಿ ಇರುವ ಚೆಕ್ಪೋಸ್ಟ್‌ನಲ್ಲಿ ಚಿನ್ನ, ಬೆಳ್ಳಿ ತುಂಬಿದ ವಾಹನವು ಹುಬ್ಬಳ್ಳಿಯಿಂದ ದಾವಣಗೆರೆಗೆ ತೆರಳುತ್ತಿದ್ದಾಗ ಪರಿಶೀಲಿಸಲಾಯಿತು.

ಈ ವೇಳೆ ವಾಹನದಲ್ಲಿ ಅಕ್ರಮವಾಗಿ 11 ಕೆ.ಜಿ ಚಿನ್ನ, 74 ಕೆ.ಜಿ ಬೆಳ್ಳಿ ಹಾಗೂ ತಟ್ಟೆ, ಲೋಟ, ಪೂಜಾ ಸಾಮಗ್ರಿಗಳನ್ನು ಸಾಗಣೆ ಮಾಡುತ್ತಿರುವುದು ಪತ್ತೆಯಾಗಿದೆ.



ಈ ವಾಹನವು ಕಳೆದ 2 ದಿನಗಳ ಹಿಂದೆ ಸಿಕ್ಕಿ ಬಿದ್ದಿತ್ತು.

ವಾಹನದಲ್ಲಿರುವ ವಸ್ತುಗಳು ಪರಿಶೀಲನೆ ಮಾಡಿದಾಗ ಚಿನ್ನದ ಸರ, ಉಂಗುರು, ಬಳೆ, ಓಲೆ ಹಾಗೂ ಬೆಳ್ಳಿಯ ಪರಿಕರಗಳು ಸೇರಿದಂತೆ ಇತರೆ ಆಭರಣಗಳು ಪತ್ತೆಯಾಗಿವೆ. ಇವುಗಳ ಸಾಗಾಟ ಮಾಡುವುದಕ್ಕೆ ಯಾವುದೇ ಅನುಮತಿ ಇರಲಿಲ್ಲ. ಹೀಗಾಗಿ ಹಾವೇರಿ ತಹಶೀಲ್ದಾರ್ ಗಿರೀಶ್ ಸ್ವಾದಿ ನೇತೃತ್ವದಲ್ಲಿ ಎಲ್ಲಾ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

## ಶಿಕ್ಷಣ ಸಚಿವ ನಾಗೇಶ್ ವಿರುದ್ಧ ಪ್ರಕರಣ ದಾಖಲು



ತುಮಕೂರು: ತುಮಕೂರು ಜಿಲ್ಲೆ ತಿಪಟೂರು ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸಚಿವ ಬಿ.ಸಿ. ನಾಗೇಶ್ ಅವರ ವಿರುದ್ಧ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ದಾಖಲಾಗಿದೆ.

ನಾಗೇಶ್ ಅವರು ಬುಧವಾರ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಚುನಾವಣಾ ಅಧಿಕಾರಿ ಕಚೇರಿಯ 100 ಮೀಟರ್ ವ್ಯಾಪ್ತಿಯೊಳಗೆ ನಾಲ್ಕು ಖಾಸಗಿ ಕಾರ್, ಒಂದು ಬೆಂಗಾವಲು ವಾಹನ ತಂದಿದ್ದರು. ಇದು ನೀತಿ ಸಂಹಿತೆ ಉಲ್ಲಂಘನೆಯಾಗಿದ್ದು, ನಾಮಪತ್ರ ಸಲ್ಲಿಕೆಗೆ ಬರುವ ಅಭ್ಯರ್ಥಿಗಳಿಗೆ ಚುನಾವಣಾ ಅಧಿಕಾರಿ ಕಚೇರಿಯ 100 ಮೀಟ–ರ್ ವ್ಯಾಪ್ತಿಯಲ್ಲಿ ಮೂರು ವಾಹನ ತರಲು ಮಾತ್ರ ಅವಕಾಶವಿದೆ. ಅದಕ್ಕಿಂತ ಹೆಚ್ಚಿನ ವಾಹನ ತಂದ ಬಗ್ಗೆ ಮಾಹಿತಿ ಪಡೆದ ಚುನಾವಣಾ ಅಧಿಕಾರಿಗಳು ಸಚಿವರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಅಪಾರ ಜನಬೆಂಬಲವೇ ವಿಜಯಕ್ಕೆ ವರದಾನ



ಬೆಳಗಾವಿ: ವಿಧಾನಸಭೆಯ ಚುನಾವಣೆಯ ಹಿನ್ನೆಲೆಯಲ್ಲಿ ಶಾಸಕಿ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭ್ಯರ್ಥಿ ಲಕ್ಷ್ಮೀ ಹೆಬ್ಬಾಳಕರ ಅವರು ಕುಮಾರಸ್ವಾಮಿ ಲೇಔಟ್, ಪೋಲಿಸ್ ಕಾಲೋನಿ, ಆಶ್ರಯ ಕಾಲೋನಿ ಹಾಗೂ ವಿವಿಧೆಡೆ ಪ್ರಚಾರ ಕೈಗೊಂಡು, ಜನರ ಬೆಂಬಲಕ್ಕೆ ಸಾಕ್ಷಿಯಾದರು.

ಈ ಸಂದರ್ಭದಲ್ಲಿ ಮತದಾರರನ್ನು ಉದ್ದೇಶಿಸಿ ಮಾತನಾಡಿದ ಅವರು, "ಕಳೆದ 5 ವರ್ಷಗಳ ಕಾಲ ಕ್ಷೇತ್ರಾದ್ಯಂತ ನೀವೆಲ್ಲರೂ ನನ್ನನ್ನು ಮನೆಯ ಮಗಳಂತೆ ಕಂಡಿದ್ದಿರಿ, ಪ್ರೀತಿ, ವಾತ್ಸಲ್ಯಗಳಿಂದ ಬರಮಾಡಿಕೊಂಡು, ಪ್ರತಿಯೊಂದು ಅಭಿವೃದ್ಧಿ ಕೆಲಸಗಳಲ್ಲಿ ಭಾಗಿಯಾಗಿ ನನ್ನನ್ನು ಹರಸಿ, ಆಶೀರ್ವದಿಸಿದ್ದಿರಿ. ನಿಮ್ಮ ಪ್ರೀತಿ, ಪ್ರೋತ್ಸಾಹಕ್ಕೆ ಬೆಲೆ ಕಟ್ಟಲಾಗದು" ಎಂದರು.

ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲು, ನಿಮ್ಮ ಆಶೀರ್ವಾದ ಅತ್ಯಗತ್ಯವಾಗಿದೆ. ಇನ್ನೇನು ಚುನಾವಣೆ ಹತ್ತಿರದಲ್ಲಿದೆ. ನಿಮ್ಮ ಬೆಂಬಲ ಯಾವತ್ತಿಗೂ ಕಾಂಗ್ರೆಸ್ ಪಕ್ಷದ ಮೇಲಿರಲಿ" ಎಂದು ವಿನಂತಿಸಿದರು.

ಸ್ಥಳೀಯ ಪ್ರಮುಖರು, ನಾಗರಿಕರು ಹಾಜರಿದ್ದರು.

## ಕಾಂಗ್ರೆಸ್ ನೆಲಸಮವಾಗುತ್ತೆ: ಯಡಿಯೂರಪ್ಪ



ಬೆಂಗಳೂರು: ಈ ಬಾರಿ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಸಂಪೂರ್ಣ ನೆಲಸಮ ವಾಗಲಿದೆ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ,

ಈ ಚುನಾವಣೆಯಲ್ಲಿ ಬಿಜೆಪಿ 135–140 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದರು.

ನಾಳೆ ಅಥವಾ ನಾಡಿದ್ದು ನಮ್ಮ ಪ್ರಚಾರ ಕಾರ್ಯ ಆರಂಭವಾಗಲಿದೆ. ರಾಜ್ಯದಲ್ಲಿ ಪ್ರಧಾನಿ ಮೋದಿ, ಅಮಿತ್ ಶಾ ಚುನಾವಣಾ ಪ್ರಚಾರ ನಡೆಸಲಿದ್ದಾರೆ. ಪಕ್ಷದ ಸಿದ್ಧಾಂತ ಒಪ್ಪಿ ಬಂದವರಿಗೆ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುತ್ತೇವೆ ಎಂದು ಹೇಳಿದರು.

## ಡಿ.ಕೆ.ಶಿ ನಾಮಪತ್ರ ಅಂಗೀಕಾರ



ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಲ್ಲಿಸಿದ್ದ ನಾಮಪತ್ರ ಅಂಗಿಕಾರವಾಗಿದೆ.

ವಿಧಾನ ಸಭಾ ಚುನಾವಣೆಗೆ ರಾಮನಗರ ಜಿಲ್ಲೆ ಕನಕಪುರ ವಿಧಾನಸಭಾ ಕ್ಷೇತ್ರದಿಂದ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಕನಕಪುರ ಕ್ಷೇತ್ರದಿಂದ ಅವರು ಸಲ್ಲಿಸಿದ್ದ ನಾಮಪತ್ರ ತಿರಸ್ಕೃತವಾಗುವ ಆತಂಕ ಎದುರಾಗಿತ್ತು.

ಆದರೆ ಡಿ.ಕೆ.ಶಿವಕುಮಾರ್ ನಾಮಪತ್ರ ಅಂಗೀಕಾರವಾಗಿದೆ ಎಂದು ತಿಳಿದುಬಂದಿದೆ.

ಡಿ.ಕೆ.ಶಿವಕುಮಾರ್ ನಾಮಪತ್ರ ತಿರಸ್ಕೃತವಾಗುವ ಭೀತಿ ಹಿನ್ನೆಲೆಯಲ್ಲಿ ವರಿಷ್ಠರ ಸೂಚನೆ ಮೇರೆಗೆ ಮುಂಜಾಗೃತಾ ಕ್ರಮವಾಗಿ ಸಂಸದ ಡಿ.ಕೆ.ಸುರೇಶ್ ಕೂಡ ನಾಮಪತ್ರ ಸಲ್ಲಿಸಿದ್ದರು.

ಈಗ ಡಿ.ಕೆ.ಶಿವಕುಮಾರ್ ನಾಮಪತ್ರ ಅಂಗೀಕಾರವಾಗಿರುವ ಹಿನ್ನೆಲೆಯಲ್ಲಿ ಇಬ್ಬರಲ್ಲಿ ಯಾರು ನಾಮಪತ್ರ ಹಿಂಪಡೆಯಲಿದ್ದಾರೆ? ಚುನವಣಾ ಸ್ಪರ್ಧೆಯ ಕಣದಲ್ಲಿ ಯಾರು ಮುಂದುವರೆಯಲಿದ್ದಾರೆ ಎಂಬ ಕುತೂಹಲ ಇಮ್ಮಡಿಗೊಂಡಿದೆ.

## ಯಾವ ಮೀಸಲಾತಿ ತೆಗೆಯುತ್ತೀರಿ?: ಕಾಂಗ್ರೆಸ್‌ಗೆ ಬಿಜೆಪಿ ಪ್ರಶ್ನೆ

ಬೆಂಗಳೂರು: ವಿವಿಧ ವರ್ಗಗಳಿಗೆ ನೀಡಿರುವ ಮೀಸಲಾತಿಯನ್ನು ವಾಪಸ್ ಪಡೆಯುತ್ತೇವೆ ಎನ್ನುತ್ತಿರುವ ಕಾಂಗ್ರೆಸ್, ಯಾವ ಮೀಸಲಾತಿಯನ್ನು ತೆಗೆಯಲಿದೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಅವರು ಆಗ್ರಹಿಸಿದರು.

ನಗರದ ಬಿಜೆಪಿ ರಾಜ್ಯ ಮಾಧ್ಯಮ ಕೇಂದ್ರದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆ ವೇಳೆ ಮೀಸಲಾತಿ ರದ್ದು ಪಡಿಸುವುದಾಗಿ, ಅಲ್ಪಸಂಖ್ಯಾತರಿಗೆ ಮೀಸಲಾತಿ ಒದಗಿಸುವುದಾಗಿ ಕಾಂಗ್ರೆಸ್ ಹೇಳುತ್ತಿದೆ. ಬಿಜೆಪಿ ಸರ್ಕಾರ,ಢ ಪರಿಶಿಷ್ಟ ಪಂಗಡಕ್ಕೆ ಶೇಕಡ 3ರಿಂದ 7ಕ್ಕೆ, ಪರಿಶಿಷ್ಟ ಜಾತಿಗೆ ಶೇಕಡ 15ರಿಂದ 17ಕ್ಕೆ ಹೆಚ್ಚಿಸಿ ಆದೇಶ ಜಾರಿ ಮಾಡಿದೆ. ಶಿಕ್ಷಣ ಮತ್ತು ಉದ್ಯೋಗದಲ್ಲಿ ಈ ಆದ–ೕಶ ಪಾಲನೆಯಾಗುತ್ತಿದೆ. ಇದೀಗ ಮೀಸಲಾತಿ ತೆಗೆಯುವುದಾಗಿ ಹೇಳುತ್ತಿರುವ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕರು ವೀರಶೈವರಿಗೆ, ಒಕ್ಕಲಿಗರಿಗೆ ಇಲ್ಲವೇ ಇತರ ಯಾವ ವರ್ಗಕ್ಕೆ ನೀಡಿರುವ ಮೀಸಲಾತಿ ರದ್ದು ಮಾಡಲಾಗುವುದು ಎಂಬುದನ್ನು ಸ್ಪಷ್ಟವಾಗಿ ಹೇಳಬೇಕು ಎಂದು ಒತ್ತಾಯಿಸಿದರು.

ಹೆಚ್ಚುವರಿ ಮೀಸಲಾತಿ ಕು–ರಿತು ಪರಿಶಿಷ್ಟ ಪಂಗಡ ಸಮುದಾಯದ ಸ್ವಾಮೀಜಿ ಹೋರಾಟ ಮಾಡುತ್ತಿದ್ದರೂ ಕಾಂಗ್ರೆಸ್ ಅವರ ಬಳಿ ಚರ್ಚೆ ಮಾಡಿಲ್ಲ. ಒಳ ಮೀಸಲಾತಿ ಕುರಿತು ಹೋರಾಟ ನಡೆಸುತ್ತಿದ್ದ ಬಂಜಾರ ಸಮುದಾಯಕ್ಕೆ ಒಮ್ಮೆಯೂ ಭರವಸೆ ನೀಡಿಲ್ಲ.



ಬೋವಿ, ಲಂಬಾಣಿ ಸಮುದಾಯಗಳಿಗೆ ನೀಡಿರುವ ಮೀಸಲಾತಿಯನ್ನು ಬಿಜೆಪಿ ಕೈಬಿಡುವುದಿಲ್ಲ. ಯಾವ ಆದ–ಾರದಲ್ಲಿ ಮೀಸಲಾತಿ ನೀಡಬೇಕೋ ಅದರಂತೆ ಬಿಜೆಪಿ ಮೀಸಲಾತಿ ಕಲ್ಪಿಸಲಿದೆ.

ಪರಿಶಿಷ್ಟ ಜಾತಿಯ ಉಪ ಜಾತಿಯಾದ ಅಲೆಮಾರಿಗಳಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಶೇಕಡ 1 ರಷ್ಟು ಮೀಸಲಾತಿ ಒದಗಿಸಲಾಗಿದೆ. ಸಾಮಾಜಿ–ಕ ನ್ಯಾಯ ಒದಗಿಸುವುದಕ್ಕೆ ಬಿಜೆಪಿ ಬದ್ಧವಾಗಿದೆ ಎಂದು ಅವರು ಪ್ರತಿಪಾದಿಸಿದರು.

ವಿಧಾನಸಭಾ ಚುನಾವಣೆ ಗೆಲ್ಲಬೇಕು ಮತ್ತು ಮತ್ತೊಮ್ಮೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಬೇಕು ಎಂಬ ಅಭಿಲಾಷೆಯೊಂದಿಗೆ ನರೇಂದ್ರ ಮೋದಿಯವರ ಮತ್ತು ಬೊಮ್ಮಾಯಿಯವರ ಸಾಧನೆಗಳನ್ನು ಮುಂದಿಟ್ಟು ಎಲ್ಲ 224 ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಪರಿಶಿಷ್ಟ ಜಾತಿಗೆ 37, ಪರಿಶಿಷ್ಟ ಪಂಗಡಕ್ಕೆ 17 ಸ್ಥಾನಗಳನ್ನು ನೀಡಲಾಗಿದ್ದು, ಎಲ್ಲ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸಲಾಗಿದೆ ಎಂದರು.

ವೀರಶೈವರು ಬಿಜೆಪಿಯಲ್ಲಿ ಹೆಚ್ಚು ತೊಡಗಿಸಿಕೊಂಡಿರುವುದ–ರಿಂದ ಈ ಸಮುದಾಯದ 68 ಮಂದಿಗೆ ಅವಕಾಶ ನೀಡಿ ಹೆಚ್ಚು ಪ್ರಾತಿನಿಧ್ಯ ನೀಡಲಾಗಿದೆ.

ಹಾಗೆಯೇ ಒಕ್ಕಲಿಗ ಸಮುದಾಯದ 41 ಮಂದಿಗೆ ಅವಕಾಶ ನೀಡಲಾಗಿದೆ. ಈಡಿಗ, ಕುರುಬ, ರೆಡ್ಡಿ, ತಿಗಳ ಸೇ–ರಿದಂತೆ ಎಲ್ಲ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿಸಲಾಗಿದೆ ಎಂದು ಹೇಳಿದರು.

ಡಬಲ್ ಇಂಜಿನ್ ಸರ್ಕಾರ ಮುಂದಿನ ಐದು ವರ್ಷ ಮುಂದುವರೆಯಲು ಈ ಚುನಾವಣೆಯಲ್ಲಿ ಕಾರ್ಯಕರ್ತರು ಹೆಚ್ಚು ತೊಡಗಿಸಿಕೊಳ್ಳಬೇಕು. ಕಾಂಗ್ರೆಸ್ ದಿಕ್ಕು ತಪ್ಪಿಸುವ ಹೇಳಿಕೆಗಳನ್ನು ನೀಡುತ್ತಿದ್ದು, ಪಕ್ಷದ ಕಾರ್ಯಕರ್ತರು ಇದಕ್ಕೆ ಕಿವಿಗೊಡಬಾರದು. ಬಿಜೆಪಿ ಸರ್ಕಾರದ ಕಾರ್ಯವೈಖರಿ ಮತ್ತು ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಬೇಕು ಎಂದು ಅವರು ಕರೆ ನೀಡಿದರು.

ಮತಾಂತರ ಗೊಂಡವರಿಗೆ ಮೀಸಲಾತಿ ಮುಂದವರಿಸುವ ಕು–ರಿತಂತೆ ಕೇಂದ್ರ ಸರ್ಕಾರ ಆಯೋಗ ರಚನೆ ಮಾಡಿದೆ. ಆದರೆ, ನಿನ್ನೆ ತಮಿಳುನಾಡು ವಿಧಾನಸಭೆಯಲ್ಲಿ ಮತಾಂತರಗೊಂಡ ಆದಿದ್ರಾವಿಡ–ರಿಗೆ ಮೀಸಲಾತಿ ಮುಂದುವ–ರಿಸುವ ಆತುರದ ನಿರ್ಣಯ ಅಂಗೀಕರಿಸಲಾಗಿದೆ ಎಂದು ಎ.ನಾರಾಯಣಸ್ವಾಮಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಷ್ಟ್ರೀಯ ಮಾಧ್ಯಮ ಸಹ ಸಂಚಾಲಕ ಸಂಜಯ್ ಮಯೂಕ್, ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಎಂ.ಜಿ. ಮಹೇಶ್, ಮಾಜಿ ಶಾಸಕ ಎಂ.ಡಿ.ಲಕ್ಷ್ಮೀನಾರಾಯಣ್ ಅವರು ಉಪಸ್ಥಿತರಿದ್ದರು.

ಬೆಳಗಾವಿ ವರದಿ

ಶನಿವಾರ, 22–ಏಪ್ರಿಲ್–2023

# ಪ್ರಜಾಪ್ರಭುತ್ವಕ್ಕೆ ಇಂದು ಕರಾಳ ದಿನ, ಪ್ರಧಾನಿ ಮೋದಿ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

}ಮೊದಲನೇ ಪುಟದಿಂದ

ಬಿಜೆಪಿ ಮಾಜಿ ನಾಯಕ ಆಯನೂರು ಮಂಜುನಾಥ್ ಅವರು ಈಶ್ವರಪ್ಪ ಅವರ ಮಾಡಿದ್ದ ಆರೋಪಗಳ ಬಗ್ಗೆ ಕೇಳಿದಾಗ, 'ಆಯನೂರು ಮಂಜುನಾಥ್ ಅವರಾಗಲಿ, ಜಗದೀಶ್ ಶೆಟ್ಟರ್, ಸವದಿ ಅವರಾಗಲಿ, ಅನೇಕ ಬಿಜೆಪಿ ನಾಯಕರು ಬಿಜೆಪಿ ಸರ್ಕಾರ ಅಡಿಯಿಂದ ಮುಡಿಯವರೆಗೂ ಭ್ರಷ್ಟಾಚಾರದಿಂದ ತುಂಬಿದೆ ಎಂದು ಹೇಳಿದ್ದಾರೆ. ಅವರ ನಾಯಕ ನೆಹರೂ ಓಲೇಕರ್ ಅವರು ಮುಖ್ಯಮಂತ್ರಿ ಬೊಮ್ಮಾಯಿ ಅವರನ್ನು 40% ಕಮಿಷನ್ ಭ್ರಷ್ಟಾಚಾರದ ಏಜೆಂಟ್ ಎಂದು ಕರೆದರು. ಇದಕ್ಕೆ ಬೊಮ್ಮಾಯಿ ಅವರು ಮಾತಾಡಲಿಲ್ಲ. ಅವರ ಚರಿತ್ರೆ ಸ್ವಚ್ಛವಾಗಿದ್ದರೆ ಇಷ್ಟು ಹೊತ್ತಿಗೆ ಮಾನನಷ್ಟ ಮೊಕದ್ದಮೆ ಹಾಕುತ್ತಿದ್ದರು. ಅವರ ಮೌನ ಈ ಆರೋಪವನ್ನು ಒಪ್ಪಿಕೊಂಡಿದ್ದಾರೆ.

ಹೀಗಾಗಿ ಕರ್ನಾಟಕದ ಪುಣ್ಯಭೂಮಿಯಿಂದ ಭ್ರಷ್ಟ ಬಿಜೆಪಿ ಸರ್ಕಾರವನ್ನು ಎಷ್ಟು ಬೇಗ ಸಾಧ್ಯವೋ ಅಷ್ಟು ಬೇಗ ಕಿತ್ತೊಗೆಯಬೇಕು' ಎಂದು ತಿಳಿಸಿದರು.

ಶಿವಕುಮಾರ್ ಅವರ ನಾಮಪತ್ರ ತಿರಸ್ಕೃತವಾಗುವ ಭೀತಿಯಿಂದ ಡಿ.ಕೆ. ಸುರೇಶ್ ಅವರ ನಾಮಪತ್ರ ಸಲ್ಲಿಕೆ ಮಾಡಲಾಗಿದೆಯಾ ಎಂಬ ಪ್ರಶ್ನೆಗೆ, 'ಈ ಚುನಾವಮೆಯಲ್ಲಿ ಭೀತಿ, ಆತಂಕ ಎಲ್ಲವೂ ಎದುರಾಳಿ ಪಕ್ಷದಲ್ಲಿದೆ. ಪ್ರತಿಯೊಬ್ಬರು ಬೆಂಬಲಿತ ಅಭ್ಯರ್ಥಿಯನ್ನು ಹೊಂದುವುದು ಸಾಮಾನ್ಯ. ಕೆಲವೊಮ್ಮೆ ಪತ್ನಿ, ಸಹೋದರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಎರಡನೇ ನಮಪತ್ರ ಸಲ್ಲಿಸುತ್ತಾರೆ' ಎಂದು ತಿಳಿಸಿದರು.

ಕಾಂಗ್ರೆಸ್ ತಾರಾ ಪ್ರಚಾರಕರಲ್ಲಿ ಕ್ರಿಮಿಲ್ ಗಳ ಜತೆ ನಂಟು ಹೊಂದಿರುವವರನ್ನು ಒಳಗೊಳ್ಳಲಾಗಿದೆ ಎಂಬ ಬಿಡಜೆಪಿ ಆರೋಪದ ಬಗ್ಗೆ ಪ್ರಶ್ನಿಸಿದಾಗ, 'ರಾಜ್ಯದಲ್ಲಿ ಹಿಂದೂ ಮುಸಲ್ಮಾನರ ನಡುವಣ ಸಂಘರ್ಷ ಹಾಗೂ ಕೋಮುವಾದದ ರಾಜಕಾರಣ ಯಶಸ್ವಿಯಾಗುವುದಿಲ್ಲ. ಬಿಜೆಪಿ ಅವರು ಈ ವಿಚಾರವಾಗಿ ಜನರನ್ನು ಮೂರ್ಖರನ್ನಾಗಿಸುವ ಪ್ರಯತ್ನ ಮಾಡುತ್ತಾರೆ ಎಂದು ಜನರಿಗೆ ಅರಿವಾಗಿದೆ. ಬಿಜೆಪಿ ಮೀಸಲಾತಿ, ಕೋಮುವಾದ, ಜಾತಿಗಳ ವಿಚಾರಗಳ ಮೂಲಕ ಜನರನ್ನು ತಪ್ಪುದಾರಿಗೆ ಎಳೆಯುವ ಪ್ರಯತ್ನ ಮಾಡುತ್ತದೆ.

ಈಗ ಅವ್ಯಾವು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಬಿಜೆಪಿಯ ಈ ಕುತಂತ್ರವನ್ನು ಜನ ನಿರ್ಲಕ್ಷಿಸಬೇಕು. ಅವರು 5 ಸಾವಿರ ವರ್ಷಗಳ ಹಿಂದಿನ ವಿಚಾರ ಇಟ್ಟುಕೊಂಡು ಮಾತನಾಡುತ್ತಾರೆ.

ರಾಜ್ಯ ಈ ಚುನಾವಣೆಯಲ್ಲಿ ಬಿಜೆಪಿ ಸರ್ಕಾರ ತನ್ನ ಸಾಧನೆ ಏನು ಎಂದು ಹೇಳಬೇಕು. ಐದು ವರ್ಷಗಳ ಹಿಂದೆ ಪರೇಶ್ ಮೇಸ್ತಾ ಅವರ ಸಾವಿನ ವಿಚಾರವಾಗಿ ಇದೇ ಶೋಭಾ ಕರಂದ್ಲಾಜೆ, ಸಿ.ಟಿ ರವಿ ಅವರು ಮಾನಸಿಕ ಅಸ್ವಸ್ಥರಂತೆ ಮಾತನಾಡುತ್ತಿದ್ದರು. ಅವರು ಈ ಸಾವಿನ ಪ್ರಕರಣದಲ್ಲಿ ಸಾಕಷ್ಟು ಅರಚಾಡಿದ್ದರು, ಆದರೆ ಆ ಪ್ರಕರಣ ತನಿಖೆ ಮಾಡಿದ ಸಿಬಿಐ ವರದಿಯಲ್ಲಿ ಏನು ಹೇಳಿತು? ಈ ನಾಯಕರ ಆರೋಪಗಳು ಶುದ್ಧ ಸುಳ್ಳು ಎಂದು ಹೇಳಿದೆ. ಬಿಜೆಪಿ ನಾಯಕರು ಇಂತಹ ಸುಳ್ಳನ್ನು ಹೇಳುತ್ತಲೇ ಇರುತ್ತಾರೆ' ಎಂದು ತಿಳಿಸಿದರು.

# ಸಿಎಂ ಬೊಮ್ಮಾಯಿ ಪರವಾಗಿ ಪ್ರಚಾರಕ್ಕೆ ಮುಂದಾದ ಪತ್ನಿ



ಹಾವೇರಿ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಗೆಲುವಿಗೆ ಅವರ ಪತ್ನಿ ಚನ್ನಮ್ಮ ಬಸವರಾಜ ಬೊಮ್ಮಾಯಿ ಅಖಾಡಕ್ಕೆ ಇಳಿದಿದ್ದಾರೆ. ಹಾವೇರಿ ಜಿಲ್ಲೆಯ ಶಿಗ್ಗಾಂವಿಯಲ್ಲಿ ನಾಮಪತ್ರ

ಸಲ್ಲಿಸಿರುವ ಮುಖ್ಯಮಂತ್ರಿ ಬೊಮ್ಮಾಯಿ ಅವರು ರಾಜ್ಯ ಪ್ರವಾಸದಲ್ಲಿ ನಿರತರಾಗಿದ್ದಾರೆ. ಹಾಗಾಗಿ ಶಿಗ್ಗಾಂವಿ ಕ್ಷೇತ್ರದ ಜವಾಬ್ಧಾರಿಯನ್ನು ಪತ್ನಿ ನಿರ್ವಹಿಸುತ್ತಿದ್ದಾರೆ. ಅವರು ಶಿಗ್ಗಾಂವಿಯಲ್ಲೇ ಬೀಡು ಬಿಟ್ಟು ಪ್ರಚಾರ ನಡೆಸುತ್ತಿದ್ದಾರೆ.

ಕಳೆದ ಕೆಲವು ದಿನಗಳಿಂದ ಚನ್ನಮ್ಮ ಬಸವರಾಜ ಬೊಮ್ಮಾಯಿ ಅವರು ಕ್ಷೇತ್ರದಲ್ಲಿ ಓಡಾಡುತ್ತಿದ್ದಾರೆ. ಅಲ್ಲಿನ ನಗರ ಭಾಗದ ಮನೆಗಳು ಮಾತ್ರವಲ್ಲದೆ, ಅಂಗಡಿ ಮುಂಗಟ್ಟುಗಳಿಗೆ ಹೋಗಿಯೂ ಪ್ರಚಾರ ಮಾಡುತ್ತಿದ್ದಾರೆ. ಕೆಲವು ಕಡೆ ಒಂದೇ ಮನೆಯಲ್ಲಿ ಜನರನ್ನು ಸೇರಿಸಿ ಸಣ್ಣ ಸಭೆಗಳನ್ನು ಮಾಡುತ್ತಿದ್ದಾರೆ.

ಚನ್ನಮ್ಮ ಬಸವರಾಜ ಬೊಮ್ಮಾಯಿ ಅವರು ಈಗಾಗಲೇ ಸವೂರು, ಮಾವೂರು, ಚಳ್ಳಾಳ ಮೊದಲಾದ. ಗ್ರಾಮಗಳನ್ನು ಸುತ್ತಿದ್ದಾರೆ. ಪ್ರಮುಖವಾಗಿ. ಮಹಿಳೆಯರನ್ನೇ ಟಾರ್ಗೆಟ್ ಮಾಡಿಕೊಂಡು ಪ್ರಚಾರ ಮಾಡುತ್ತಿರುವ ಅವರು, ರಾಜ್ಯ ಮತ್ತು ಕೇಂದ್ರ.ಸರ್ಕಾರಗಳು ಮಹಿಳೆಯರ ಸಬಲೀಕರಣಕ್ಕೆ ಮಾಡಿರುವ.

ಕೆಲಸಗಳನ್ನು ವಿವರಿಸುತ್ತಾ ಮತ ಕೇಳುತ್ತಿದ್ದಾರೆ. ಈ ಬಾರಿ ಬಿಜೆಪಿ ಮಹಿಳೆಯರಿಗಾಗಿ ಘೋಷಿಸಿರುವ ಕಾರ್ಯ ಕ್ರಮಗಳನ್ನು ಮತದಾರರಿಗೆ ವಿವರಿಸುತ್ತಿದ್ದಾರೆ. ಬಸವರಾಜ ಬೊಮ್ಮಾಯಿ ಅವರ ಪತ್ನಿ ಚನ್ನಮ್ಮ ಅವರು.ಈಗ ಬೆಂಗಳೂರಿನಲ್ಲಿ ವಾಸಿಸುತ್ತಿದ್ದರೂ ಮದುವೆಯಾದ.

ಆರಂಭದಲ್ಲಿ ಶಿಗ್ಗಾಂವಿಯ ಮನೆಯಲ್ಲೇ ಇದ್ದರು..ಹೀಗಾಗಿ ಹಳ್ಳಿ ಬದುಕಿನ ಬಗ್ಗೆಯೂ ಅವರು ತಿಳಿದಿದ್ದರು. ಮಹಿಳಾ ಸಂಘಟನೆಗಳಲ್ಲೂ ಸಕ್ರಿಯರಾಗಿದ್ದರು.

ಆದರೆ, ಚನ್ನಮ್ಮ ಅವರಿಗೆ ಪತಿಯ ರಾಜಕೀಯ ಜೀವನ, ಮಂತ್ರಿಗಿರಿಯ ಬಗ್ಗೆ ಅಷ್ಟೇನೂ ಕುತೂಹಲಗಳು ಇರಲಿಲ್ಲ. ರಾಜಕೀಯದ ಮನೆಯಲ್ಲೇ ಬೆಳೆದು ಬಂದಿದ್ದರಿಂದ ಸ್ವಲ್ಪ ಮಟ್ಟಿಗೆ ವಿಷಯಗಳು ತಿಳಿದಿದ್ದರೂ ಗಂಡನ ಜತೆ ಅದರ ಚರ್ಚೆಗಳನ್ನು.

ಮಾಡುತ್ತಿರಲಿಲ್ಲ. ಎರಡು ವರ್ಷದ ಹಿಂದೆ ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಪಟ್ಟಕ್ಕೇರುವ ವಿಚಾರವೂ ದೊಡ್ಡ ಮಟ್ಟದಲ್ಲಿ ಮನೆಯಲ್ಲಿ ಚರ್ಚೆಯಾಗಿರಲಿಲ್ಲ ಎಂದು ಅವರೇ ಹೇಳಿಕೊಂಡಿದ್ದರು.

ಆದರೆ, ಈ ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿರುವ ಪತಿಯ ಕಾರ್ಯಭಾರವನ್ನು ಪ್ರಚಾರದ ಒತ್ತಡವನ್ನು ಕಡಿಮೆ ಮಾಡುವುದಕ್ಕಾಗಿ ತಾವೇ ಕಣ–ಕ್ಕೆ ಧುಮುಕಿದ್ದಾರೆ. ಅವರ ಪುತ್ರ ಮತ್ತು ಪುತ್ರಿ ಕೂಡಾ ಅಪ್ಪನ ಪರವಾಗಿ ಪ್ರಚಾರ ನಡೆಸಲಿದ್ದಾರೆ.

# ಕೋರ್ಟಿನ ಆವರಣದಲ್ಲೇ ಮಹಿಳೆ ಮೇಲೆ ಗುಂಡಿನ ದಾಳಿ



ನವದೆಹಲಿ: ದೆಹಲಿಯ ನ್ಯಾಯಾಲಯದ ಆವರಣದೊಳಗೆ ನಡೆದ ಗುಂಡಿನ ದಾಳಿಯಲ್ಲಿ ಮಹಿಳೆಯೊಬ್ಬಳು ಗಂಭೀರವಾಗಿ ಗಾಯಗೊಂಡ ಘಟನೆ ನಡೆದಿದೆ. ಸಾಕೇತ್ ಜಿಲ್ಲಾ ನ್ಯಾಯಾಲಯದಲ್ಲಿ ಈ ಘಟನೆ ನಡೆದಿದೆ. ಹಣಕಾಸಿನ ವಿವಾದಕ್ಕೆ ಸಂಬಂಧಿಸಿದ ಪ್ರಕರಣವೊಂದರ ವಿಚಾರಣೆಗೆ ನ್ಯಾಯಾಲಯಕ್ಕೆ ಮಹಿಳೆ ಹಾಜರಾಗಿದ್ದಳು. ಈ ವೇಳೆ ವಕೀಲರ ವೇಷದಲ್ಲಿದ್ದ ವ್ಯಕ್ತಿಯೊಬ್ಬ ಆಕೆಯ ಮೇಲೆ ಗುಂಡು ಹಾ–ರಿಸಿದ್ದಾನೆ. ಘಟನೆಯಲ್ಲಿ ಗಂಭೀರ ಗಾಯಗೊಂಡಿದ್ದ ಮಹಿಳೆಯನ್ನು ಅಲ್ಲಿದ್ದ ಪೊಲೀಸರು ತಕ್ಷಣ ಆಸ್ಪತ್ರೆಗೆ ದಾಖಲಿಸಿದ್ದಾರೆ. ಮಹಿಳೆಯ ಸ್ಥಿತಿ ಚಿಂತಾಜನಕವಾಗಿದೆ. ಘಟನೆಗೆ ಸಂಬಂಧಿಸಿ 4 ಸುತ್ತಿನ ಗುಂಡು ಹಾ–ರಿಸಲಾಗಿದೆ. ಗುಂಡಿನ ದಾಳಿಯ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ರಂಜಾನ ಹಬ್ಬ ಅನಧಿಕೃತವಾಗಿ ಗೋವು, ಕರು ಇತರೆ ಪ್ರಾಣಿ ವಧೆ, ಸಾಗಾಣಿಕೆ ನಿಷೇಧ

ಧಾರವಾಡ: ಧಾರವಾಡ ಜಿಲ್ಲೆಯಲ್ಲಿ ಏ.22 ರಂದು ಜಿಲ್ಲಾದ್ಯಂತ ರಂಜಾನ ಹಬ್ಬದ ಆಚರಣೆ ಸಂದರ್ಭದಲ್ಲಿ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟುವ ಕು–ರಿತಂತೆ ಅನಧೀಕೃತವಾಗಿ ಗೋವು, ಕರುಗಳು, ಒಂಟೆಗಳು ಮತ್ತು ಇತರೆ ಜಾನುವಾರುಗಳ ಅಕ್ರಮವಾಗಿ ಸಾಗಾಣಿಕೆ ಹಾಗೂ ವಧೆ ಮಾಡುವುದನ್ನು ನಿಷೇಧಿಸಿದೆ ಎಂದು ಜಿಲ್ಲಾ ಪ್ರಾಣಿ ದಯಾ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಲಿಂಗಾಯಿತ ಡ್ಯಾಂ ಒಡೆದಿದೆ; ಹರಿಯುವ ನೀರು ಕಾಂಗ್ರೆಸ್ ಎಂಬ ಸಮುದ್ರ ಸೇರಲೇಬೇಕು: ಡಿ.ಕೆ.ಶಿ

ಬೆಂಗಳೂರು: ಕಾಂಗ್ರೆಸ್ ಸಮುದ್ರವಿದ್ದಂತೆ. ಬಿಜೆಪಿಯ ಅಣೆಕಟ್ಟು ಒಡೆದು ಹೋಗಿದ್ದು, ನದಿಯಾಗಿ ಹ–ರಿಯುತ್ತಿರುವ ನೀರು ಕಾಂಗ್ರೆಸ್ ಎಂಬ ಸಮುದ್ರ ಸೇರಲೇಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಟಾಂಗ್ ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಯಡಿಯೂರಪ್ಪ ಅವರ ನಿವಾಸದಲ್ಲಿ ಲಿಂಗಾಯತ ನಾಯಕರ ಸಭೆ ಹಾಗೂ ಲಿಂಗಾಯತ ಸಿಎಂ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ಆಣೆಕಟ್ಟು ಒಡೆದ ನಂತರ ನೀರನ್ನು ನಿಲ್ಲಿಸಲು ಸಾಧ್ಯವಿಲ್ಲ. ಈ ನೀರು ಸಮುದ್ರ ಸೇರಬೇಕು. ಕಾಂಗ್ರೆಸ್ ಸಮುದ್ರ ಇದ್ದಂತೆ ಬಿಜೆಪಿಯಿಂದ ಹೊರ ಬಂದವರು ಕಾಂಗ್ರೆಸ್ ಸಮುದ್ರಕ್ಕೆ ಎಲ್ಲರೂ ಬಂದು ಸೇರಬೇಕು. ಬಿಜೆಪಿ ಹೊಸದಾಗಿ ಅಣೆಕಟ್ಟು ಕಟ್ಟುವ ಕೆಲಸ ಮಾಡಲಿ ಎಂದರು.

ಬಿಜೆಪಿಯ ಲಿಂಗಾಯಿತ ಡ್ಯಾಂ ಒಡೆದಿದೆ. ಡ್ಯಾಂ ಒಡೆದು ದೊಡ್ಡ ದೊಡ್ಡ ಕಲ್ಲುಗಳು ಹೊರ ಬಂದಿವೆ.

ಹರಿಯೋ ನೀರು ಸಮುದ್ರ ಸೇರಲೆಬೇಕಲ್ಲ. ಕಾಂಗ್ರೆಸ್ ಎಂಬ ಸಮುದ್ರವನ್ನು ಸೇರುತ್ತಿವೆ. ಹಳ್ಳಿ ಹಳ್ಳಿಗಳಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸೇರುತ್ತಿದ್ದಾರೆ ಎಂದು ಹೇಳಿದರು.

ಅನೇಕ ನಾಯಕರು ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿದ್ದಾರೆ.

ಸಾವಿರಾರು ಜನ ಕಾರ್ಯಕರ್ತರು ಜಿಲ್ಲಾ ಹಾಗೂ ತಾಲೂಕು ಘಟಕಗಳಲ್ಲಿ ಪಕ್ಷ ಸೇರ್ಪಡೆಗೆ ಅನುಮತಿ ನೀಡಿದ್ದೇವೆ ಎಂದರು.

ನಾಮಪತ್ರ ಸಲ್ಲಿಕೆಯಾಗಿದ್ದು, ಪರಿಶೀಲನೆ ನಡೆಯುತ್ತಿದೆ. ಮೇ 10ರಂದು



ಕೇವಲ ಮತದಾನ ದಿನವಲ್ಲ. ಭ್ರಷ್ಟಾಚಾರ ಬಡಿದೋಡಿಸುವ ದಿನ, ನಾಲ್ಕು ವರ್ಷಗಳಿಂದ ಈ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡಿರುವ ಹಿನ್ನೆಲೆಯಲ್ಲಿ ಬದಲಾವಣೆಗೆ ನಾಂದಿ ಹಾಡುವ ದಿನ, ಸಂವಿಧಾನ ಪ್ರಜಾಪ್ರಭುತ್ವ ಉಳಿಸಲು ದಕ್ಷಿಣ ಭಾರತದಿಂದ ಆರಂಭವಾಗುವ ದಿನ. ಇನ್ನು ಈ ಸಂದರ್ಭದಲ್ಲಿ ಬಿಜೆಪಿಯಲ್ಲಿ ಮುಂದುವರಿದರೆ ಆತ್ಮಗೌರವಕ್ಕೆ ಧಕ್ಕೆಯಾಗುತ್ತದೆ ಎಂದು ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿದ್ದಾರೆ.

ತುಮಕೂರಿನಲ್ಲಿ 20 ವರ್ಷಗಳಿಂದ ಬಿಜೆಪಿಯಲ್ಲಿ ಕೆಲಸ ಮಾಡಿದ್ದ ಮಾಜಿ ಶಾಸಕ ಗಂಗನುಮಯ್ಯ ಹಾಗೂ ಕಮಲಾ ಗಂಗನುಮಯ್ಯ ಅವರು ಇಂದು ಕಾಂಗ್ರೆಸ್ ಪಕ್ಷ ಸೇರಿ, ಪರಮೇಶ್ವರ್ ಅವರಿಗೆಬೆಂಬಲ ನೀಡುತ್ತಿದ್ದಾರೆ. ಇವರ ಜತೆಗೆ ಬಿಜೆಪಿ ಪ್ರಧಾನ ಕಾರ್ಯದರ್ಶಿಯಾಗಿದ್ದ ತಿಮ್ಮಜ್ಜ, ಎಸ್ ಸಿ ಘಟಕದ ಜಿಲ್ಲಾಧ್ಯಕ್ಷರಾಗಿದ್ದ ಮಾರುತಿ ಅವರು, ರಾಮಕೃಷ್ಣ, ತಿಮ್ಮಯ್ಯ, ಶಿವಕುಮಾರ್, ಸಿದ್ದಪ್ಪ ಸೇರಿದಂತೆ ಅನೇಕ ಬಿಜೆಪಿ ನಾಯಕರು ಪಕ್ಷ ಸೇರುತ್ತಿದ್ದಾರೆ. ನಿನ್ನೆ ಮಾಜಿ ಮೇಯರ್ ಆಗಿದ್ದ ಶಾಂತಕುಮಾರಿ ಅವರು ಪಕ್ಷ ಸೇರಲು ಮುಂದಾಗಿದ್ದಾರೆ. ಬಿ.ಆರ್ ನಂಜುಂಡಪ್ಪ ಅವರು ಹಿರಿಯ ನಾಯಕರು, ಅವರು ಹಿಂದೆಯೇ ಶಾಸಕರಾಗಬೇಕಿತ್ತು. ಅವರು ತಮ್ಮ ಅಭಿಮಾನಿ ಬಳಗದ ಜತೆ ಕಾಂಗ್ರೆಸ್ ಜತೆ ಸೇರಿದ್ದಾರೆ. ನಾರಾಯಣ ಸ್ವಾಮಿ ಅವರು ಸೇರಿದಂತೆ 9 ಮಾಜಿ ಕಾರ್ಪೊರೇಟರ್ ಅವರು ಕಾಂಗ್ರೆಸ್ ಪಕ್ಷ ಸೇರ್ಪಡೆ ಆಗುತ್ತಾರೆ.

ಕಾಂಗ್ರೆಸ್ ಸೇರಲು ಅನೇಕರು ಮುಂದಾಗಿದ್ದು, ಎಲ್ಲರಿಗೂ ಸ್ಥಾನಮಾನ ನೀಡಲು ಸಾಧ್ಯವಿಲ್ಲ. ನಮ್ಮ ಪಕ್ಷದ ಸಿದ್ಧಾಂತ ಒಪ್ಪಿ ಬರುವವರಿಗೆ ಅವಕಾಶ ಮಾಡಿಕೊಡಲಾಗುತ್ತಿದೆ.

ಬೆಳಕು ನಿಮ್ಮ ಮನೆ ಬಾಗಿಲಿಗೆ ಬಂದಿದ್ದು, ಅದನ್ನು ಗೌರವಯುತವಾಗಿ ಸ್ವಾಗತಿಸಿ. ಈ ಪಕ್ಷಕ್ಕೆ ಆಗಮನ ನಿಮಗೆ ಶಕ್ತಿ ತುಂಬುತ್ತದೆ.

ರಾಜ್ಯಕ್ಕೆ ಬದಲಾವಣೆ ತರಲಿದೆ. ನಿಮ್ಮನ್ನು ಗೌರವಯುತವಾಗಿ ನಡೆಸಿಕೊಳ್ಳಲಾಗುವುದು ಎಂದು ಹೇಳಿದರು.

# ಸೌಹಾರ್ದತೆ ಭಾವನೆ ಎಂಬುದು ಎಲ್ಲರಲ್ಲಿ ಮೂಡಿಬರಲಿ: ಮಂಟೂರ

ತಾಳಿಕೋಟೆ: ಯಾವುದೇ ಹಬ್ಬ ಹ–ರಿದಿನಗಳು ಈ ಹಿಂದಿನಿಂದಲೂ ಸಾಗಿ ಬಂದಿರುವುದು ಜನತೆಯಲ್ಲಿ ಒಳ್ಳೆಯ ಭಾವನೆ ಮೂಡಿಸುತ್ತಾ ಸಾಗಿ ಬರುವ ಮಹತ್ವದ ಕಾರ್ಯಕ್ರಮಗಳಾಗಿವೆ.

ಅಂತಹ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿರುವ ಎಲ್ಲರು ಅರ್ಥೈಸಿಕೊಂಡು ಆ ಕಾರ್ಯಕ್ರಮಕ್ಕೆ ಮೆರಗು ತರುವಂತಹ ಕಾರ್ಯ ಮಾಡಬೇಕೆಂದು ಸ್ಥಳೀಯ ಪೋಲಿಸ ಠಾಣೆಯ ಪಿ.ಎಸ್.ಆಯ್.ಸುರೇಶ ಮಂಟೂರವರು ನುಡಿದರು.

ಶುಕ್ರವಾರರಂದು ರಂಜಾನ ಹಬ್ಬ ಆಚರಣೆ ಕುರಿತು ಸ್ಥಳಿಯ ಪೋಲಿಸ್ ಠಾಣೆಯಲ್ಲಿ ಕರೆಯಲಾದ ಶಾಂತಿ ಸಮಿತಿಯ ಸದಸ್ಯರ ಹಾಗೂ ಹಿಂದೂ ಮುಸ್ಲಿಂ ಬಾಂಧವರ ಕುರಿತು ಏರ್ಪಡಿಸಲಾದ ಶಾಂತಿ ಪಾಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತಿದ್ದ ಅವರು ಶನಿವಾರರಂದು ಜರುಗಲಿರುವ ರಂಜಾನ



ಹಬ್ಬದಲ್ಲಿ ಶಾಂತತೆ ಕಾಪಾಡಿಕೊಂಡು ದೇವನ ನಾಮಸ್ಮರಣೆಯೊಂದಿಗೆ ಹಬ್ಬ ಆಚರಣೆಯಾಗಲಿ ಹಿಂದೂ ಮುಸ್ಲಿಂ ಭಾವೈಕ್ಯತೆಯೊಂದಿಗೆ ಸಾಗಿ ಬಂದ ಜನತೆ ಎಂದಿನಂತೆ ಪ್ರೀತಿ ಪ್ರೇಮದೊಂದಿಗೆ ಮುಂದುವರೆಯಲಿ ಎಂದು ಹೇಳಿದ ಅಧಿಕಾರಿ ಮಂಟೂರವರು ಯಾವುದೇ ತರಹದ ತೊಂದರೆ ಕಂಡುಬಂದಲ್ಲಿ ನಮಗೆ ತಿಳಿಸಿದಲ್ಲಿ ಅದಕ್ಕೆ ಕಾರ್ಯೋನ್ಮುಕರಾಗಿ ಸುವ್ಯವಸ್ಥೆ ಕಲ್ಪಿಸುತ್ತೆವೆ ಪೋಲಿಸ ಇಲಾಖೆ ತನ್ನ ದಕ್ಷ ಕಾರ್ಯಆಡಳಿತದೊಂದಿಗೆ ಎಂದಿನಂತೆ ಮುನ್ನುಗ್ಗುತ್ತಾ ಸಾಗಲಿದೆ ಎಂದ ಅವರು ಒಟ್ಟಿನಲ್ಲಿ ಹಬ್ಬ ಆಚರಣೆಯಲ್ಲಿ ಪ್ರೀತಿ ಪ್ರೇಮದೊಂದಿಗೆ ಬೆರೆತು ಸಾಗಿರಿ ಎಂದು ಉಪಸ್ಥಿತರೆಲ್ಲರಿಗೆ ಸಲಹೆ ನೀಡಿದರು.

ಇನ್ನೋರ್ವ ಜಾಮಿಯಾ ಮಸಿದ ಅಧ್ಯಕ್ಷ ಅಲ್ಲಾಭಕ್ಷ ನಮಾಜಕಟ್ಟಿ ಅವರು ಮಾತನಾಡಿ ಪ್ರತಿವರ್ಷದಂತೆ ಈ ಸಲವು ರಂಜಾನ ಹಬ್ಬವನ್ನು ಪ್ರೀತಿ ವಿಶ್ವಾಸ ಆಚರಿಸಲಾಗುತ್ತದೆ. ತಿಂಗಳಪರಿಯಂತ ಮಾಡುತ್ತಾ ಸಾಗಿಬಂದ ಉಪವಾಸವನ್ನು ಶನಿವಾರರಂದು ಇದಗಾ ಮೈದಾನದಲ್ಲಿ ನಮಾಜ ಮಾಡುವ ಮೂಲಕ ದೇವನ ನಾಮಸ್ಮರಣೆ ಮಾಡಿಕೊಂಡು ದೇವನಿಗಾಗಿ ಮಾಡಿಕೊಂಡು ಬರಲಾದ ಉಪವಾಸವನ್ನು ಮುಕ್ತಾಯಗೊಳಿಸಲಾಗುತ್ತದೆ ಈ ಪದ್ಧತಿ ಹಿಂದಿನಿಂದ ಸಾಗಿಬಂದಂತಹ ಮುಸ್ಲಿಂ ಧರ್ಮದ ಪದ್ಧತಿ ಇದಾಗಿದೆ.

ರಾಜ್ಯ ಅಷ್ಟೆ ಅಲ್ಲ ದೇಶದಾದ್ಯಂತ ಈ ಹಬ್ಬದ ಆಚರಣೆ ಜರುಗಿ ಹಿಂದೂ ಮುಸ್ಲಿಂ ಭಾವೈಕ್ಯತೆಯೊಂದಿಗೆ ನಡೆದಿರುವುದನ್ನು ಈ ಹಬ್ಬದ ಮುಖಾಂತರ ಗುರುತಿಸಿ ಕೊಳ್ಳಬಹುದಾಗಿದೆ ಎಂದರು.

ಇನ್ನೋರ್ವ ಮಾನವ ಹಕ್ಕುಗಳ ಸಂಘಟನೆಯ ಸ್ಥಳೀಯ ಅಧ್ಯಕ್ಷರಾದ ಶಮಷುದ್ದೀನ ನಾಲಬಂದ ಅವರು ಮಾತನಾಡಿ ಇಂದು ರಂಜಾನ ಹಬ್ಬದ ನಿಮಿತ್ಯವಾಗಿ ಶಾಂತಿ ಸಮಿತಿಯ ಸಭೆಯನ್ನು ಕರೆಯಲಾಗಿದೆ.

ಎಲ್ಲ ಜನತೆ ಶಾಂತಿಯಿಂದ ಜೀವನ ನಡೆಸಬೇಕೆಂಬ ಈ ಸಭೆಯ ಉದ್ದೇಶವಾಗಿದೆ ಎಂದು ಶನಿವಾರರಂದು ಜರುಗಲಿರುವ ರಂಜಾನ ಹಬ್ಬದ ಸಮಯವನ್ನು ತಿಳಿಸಿದ ಅವರು ಮುಂಜಾನೆ 8 ಘಂಟೆಗೆ ಇದಗಾ ಮೈದಾನದಲ್ಲಿ ಪ್ರಾರ್ಥನೆ (ನಮಾಜ) ಮಾಡುವ ಕಾರ್ಯಕ್ರಮ ನಡೆಯಲಿದೆ ಹಿರಿಯರು ಕೂಡ ರಂಂಜಾನ ಹಬ್ಬದ ಆಚರಣೆಯ ಕುರಿತು ವಿವ–ರಿಸಲಿದ್ದಾರೆಂದರು.

ಇನ್ನೋರ್ವ ಹಿರಿಯ ಪತ್ರಕರ್ತ ಜಿ.ಟಿ.ಘೋರ್ಪಡೆಯವರು ಮಾತನಾಡಿ ಹಬ್ಬ ಹರಿದಿನಗಳು ಜಾತ್ರೆ ಉತ್ಸವಗಳು ಎಲ್ಲ ಕೋಮಿನವರು ಆಚರಿಸಿಕೊಂಡು ಬರುವಂತವುಗಳಾಗಿವೆ ಆಹಬ್ಬದ ಉದ್ದೇಶ ಎನ್ನೆಂಬುದನ್ನು ಅರ್ಥೈಸಿಕೊಂಡು ನಡೆದರೆ ಜೀವನ ಸಾರ್ಥಕವಾಗಲಿದೆ ಎಂದರು.

ದೇವನಿಗೆ ಮಾಡುವ ಉಪವಾಸ ಎಲ್ಲ ಧರ್ಮಿಯರಲ್ಲಿ ಮಾಡಲಾಗುತ್ತದೆ ಉಪವಾಸವೆನ್ನುವುದು ದೇವನ ಒಲುಮೆಗಾಗಿ, ಸುಖ ಸಂಪತ್ತು ಲಭಿಸಲಿ ಈಡಿ ಕುಟುಂಬ ಜೀವನ ಹಾಗೂ ದೇಶದ ಸ್ಥಿತಿಗತಿ ಒಳ್ಳೆಯ ಹಾಗೂ ಯಾವುದೇ ತರಹದ ತೊಂರೆ ಇಲ್ಲದೆ ಸಾಗಲಿ ಎಂಬ ಉದ್ದೇಶವಾಗಿದೆ.

ಅಂತಹ ಉಪವಾಸದ ಹಬ್ಬ ರಂಜಾನ ಹಬ್ಬವಾಗಿದೆ ಈ ಹಬ್ಬವನ್ನು ಮುಸ್ಲಿಂ ಧರ್ಮದವರು ನಿಷ್ಠೆ ಪ್ರಾಮಾಣಿಕ ತನದಿಂದ ಮಾಡುತ್ತಾ ಸಾಗಿಬಂದವರಾಗಿದ್ದಾರೆ ಅದರಲ್ಲಿ ತಾಳಿಕೋಟೆ ಭಾಗದಲ್ಲಿ ಈ ಹಿಂದಿನಿಂದಲು ಹಿಂದೂ ಮುಸ್ಲಿಂ ಒಂದೇ ಎಂಬ ಭಾವನೆಯಿಂದ ಊಟ ಉಪಚಾರ ಹಾಗೂ ಸುರುಕುಂಬ ಕುಡಿಯುವ ಪದ್ಧತಿ ಕೂಡ ಮಾಡುತ್ತಾ ಸಾಗಿಬರಲಾಗಿದೆ ಎಂದರು.

# ಶೆಟ್ಟರ್ ಬಿಜೆಪಿ ಬಿಟ್ಟಿದ್ದು ಯಾರಿಂದ, ಏತಕ್ಕಾಗಿ?



ಮಾಜಿ ಮುಖ್ಯಮಂತ್ರಿ, ಹಿರಿಯ ಬಿಜೆಪಿ ಮುಖಂಡ ಜಗದೀಶ್ ಶೆಟ್ಟರ್ ಇಂತಹುದೊಂದು ನಿರ್ಧಾರ ಕೈಗೊಳ್ಳುತ್ತಾರೆ ಎಂದು ಯಾರೂ ನಿರೀಕ್ಷೆ ಮಾಡಿರಲಿಲ್ಲ. ಅಷ್ಟೇ ಏಕೆ? ಸ್ವತಃ ಶೆಟ್ಟರ್ ಅವರೂ ಸಹ ಇಂತಹ ಸಂದರ್ಭ ಬರುತ್ತದೆ ಎಂದು ಕನಸಿನಲ್ಲಿಯೂ ಊಹಿಸಿರಲಿಕ್ಕಿಲ್ಲ. ರಾಜಕೀಯವೇ ಹಾಗೆ? ಸಂದರ್ಭಗಳು ಅಂತಹ ಸನ್ನಿವೇಶವನ್ನು ಸೃಷ್ಟಿಸಿ ಬಿಡುತ್ತವೆ.

ವೈಯಕ್ತಿಕ ಮತ್ತು ರಾಜಕೀಯ ಜೀವನದುದ್ದಕ್ಕೂ ಬಿಜೆಪಿಯನ್ನೇ ಉಸಿರಾಡಿದ ಜಗದೀಶ್ ಶಿವಪ್ಪ ಶೆಟ್ಟರ್ ಅವರು ಬಿಜೆಪಿ ಜತೆಗಿನ ನಾಲ್ಕು ದಶಕಗಳ ಒಡನಾಟವನ್ನು ಅಂತ್ಯಗೊಳಿಸಿ ಕಾಂಗ್ರೆಸ್ ಕೈಹಿಡಿದಿದ್ದಾರೆ. ಇದು ಕೇವಲ ಶೆಟ್ಟರ್ ಒಬ್ಬರ ರಾಜಕೀಯ ಮಾತ್ರವಲ್ಲ, ರಾಜ್ಯ ರಾಜ–ಕಾರಣದ ದಿಕ್ಕನ್ನೇ ಬದಲಾಯಿಸುವ ಬೆಳವಣಿಗೆ ಎಂದರೆ ಅತಿಶಯೋಕ್ತಿಯಾಗಲಾರದು.

ಕಟ್ಟಾ ಬಿಜೆಪಿ ನಾಯಕರಾಗಿದ್ದ ಶೆಟ್ಟರ್ ಆರು ಬಾರಿ ಬಿಜೆಪಿಯಿಂದಲೇ ಶಾಸಕರಾಗಿದ್ದಾರೆ. ವಿಪಕ್ಷ ನಾಯಕ, ಸಚಿವ ಸ್ಥಾನ ಮತ್ತು ಮುಖ್ಯಮಂತ್ರಿ ಹುದ್ದೆಯನ್ನೂ ಅಲಂಕರಿಸಿದ್ದಾರೆ. ಇದೀಗ ಏಳನೇ ಬಾರಿಗೆ ಸ್ಪರ್ಧೆಗೆ ಅವಕಾಶ ಸಿಗದೆ ಕಾಂಗ್ರೆಸ್ ಕೈ ಹಿಡಿದಿದ್ದಾರೆ. ಇದು ಕೇವಲ ಒಂದು ಟಿಕೆಟ್ ವಿಷಯ ಮಾತ್ರ ಅಲ್ಲ, ಇನ್ನೂ ಏನೋ ಇದೆ ಎನ್ನುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಒಳ ರಾಜಕೀಯದ ಮರ್ಮ ಅಷ್ಟು ಬೇಗ ಹೊರ ಬರುವುದಿಲ್ಲ. ಇವರ ಮನೆಯವರೊಬ್ಬರಿಗೆ ಟಿಕೆಟ್ ಕೊಡುತ್ತೇವೆ ಎಂದರೂ ಅವರು ಒಪ್ಪಿಲ್ಲ. ತಮಗೆ ಬೇಕು ಎಂದು ಹಠ ಹಿಡಿದಿರಲು ಕಾರಣಗಳು ಇಲ್ಲದಿಲ್ಲ. ಅದೂ ಬಲವಾದ ಕಾರಣಗಳೇ ಇರುತ್ತವೆ. ಬಿಜೆಪಿಯಲ್ಲಿ ಬಹುತೇಕ ಹಳೆಯ ಮುಖಗಳು ನೇಪಥ್ಯಕ್ಕೆ ಸರಿಯುತ್ತಿವೆ. ಪಕ್ಷವನ್ನು ಕಟ್ಟಿ ಬೆಳೆಸಿದ ಹಿರಿಯ ಮುಖಂಡರನ್ನು ತೆರೆಮರೆಗೆ ಸರಿಸಲಾಗುತ್ತಿದೆ.

ಪಕ್ಷದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸ್ಥಿತಿ ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವಂತಿದೆ. ತಮ್ಮ ಪುತ್ರನೇ ತಮ್ಮ ಉತ್ತರಾಧಿಕಾರಿ ಎಂದು ಘೋಷಿಸುವಷ್ಟು ಸ್ವಾತಂತ್ರ್ಯವೂ ಇಲ್ಲದಂತಹ ಸ್ಥಿತಿಗೆ ಅವರನ್ನು ದೂಡಲಾಗಿದೆ.

ಕೆ ಎಸ್ ಈಶ್ವರಪ್ಪ ಅವರು ಎಟುಕದ ದ್ರಾಕ್ಷಿ ಹುಳಿ ಎಂದು ರಂಪಾಟವೆ ಬೇಡವೆಂದು ರಾಜ–ಕೀಯ ನಿವೃತ್ತಿ ಘೋಷಿಸಿದ್ದಾರೆ. ಬಲವಂತವಾಗಿ ಹಾಗೆ ಮಾಡಲಾಗಿದೆ ಎಂದೂ ಅವರ ಆಪ್ತರು ಹೇಳುತ್ತಾರೆ. ಅವರ ಪುತ್ರ ಕಾಂತೇಶ್ ಗೆ ಟಿಕೆಟ್ ನಿರಾಕರಿಸಲಾಗಿದೆ. ಆದರೂ ಈಶ್ವರಪ್ಪ ಮೌನಕ್ಕೆ ಜಾರಿದ್ದಾರೆ. ಲಕ್ಷ್ಮಣ ಸವದಿ ಮತ್ತು ಅನೇಕ ಮುಖಂಡರು ಕಾಂಗ್ರೆಸ್ ಇಲ್ಲವೇ ಬಿಜೆಪಿ ಕೈ ಹಿಡಿದಿದ್ದಾರೆ.

ದೇಶದ ಉದ್ದಗಲಕ್ಕೂ ಬಿಜೆಪಿ ಹೈಕಮಾಂಡ್ ಅನ್ನು, ಅದರಲ್ಲೂ ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಜೋಡಿಯನ್ನು ಎದುರು ಹಾಕಿಕೊಳ್ಳುವ ಧೈರ್ಯ ಬಿಜೆಪಿಯೊಳಗೂ ಯಾರಿಗೂ ಇಲ್ಲ. ಇತರೆ ಪಕ್ಷಗಳಿಗೂ ಇಲ್ಲ. ಸಿಬಿಐ, ಐಟಿ, ಜಾರಿ ನಿರ್ದೇಶನಾಲಯ ಇವುಗಳ ವಕ್ರದೃಷ್ಟಿ ಬಿದ್ದೀತು ಎಂಬ ಭಯದಿಂದ ಮೌನವೇ ಆಭರಣ ಎಂದು ಸುಮ್ಮನಿದ್ದರು. ಈ ಜೋಡಿಗೆ ಸೆಡ್ಡು ಹೊಡೆದು ಶೆಟ್ಟರ್, ಸವದಿ ಮುಂತಾದವರು ಬಂಡೆದ್ದಿದ್ದಾರೆ. ರಾಜ್ಯದ ಅದ್ವಿತೀಯ ನಾಯಕರಾಗಿದ್ದ ಅನಂತ ಕುಮಾರ್ ಅವರ ಪತ್ನಿಗೆ ಪ್ರತಿ ಚುನಾವಣೆಯಲ್ಲೂ ಟಿಕೆಟ್ ನಿರಾಕರಿಸುತ್ತಾ ಬರಲಾಗಿದೆ. ಆಗೊಮ್ಮೆ ಈಗೊಮ್ಮೆ ಅವರ ಪತ್ನಿ ತೇಜಸ್ವಿನಿ ಅನಂತ ಕುಮಾರ್ ಅವರು ಸೂಚ್ಯವಾಗಿ ಆ ಭಾವನೆಯನ್ನು ವ್ಯಕ್ತಪಡಿಸುತ್ತಾ ಬಂದಿದ್ದಾರೆ.

ಮುಖ್ಯಮಂತ್ರಿ ಸ್ಥಾನದಿಂದ ಬಿ.ಎಸ್. ಯಡಿಯೂರಪ್ಪ ಅವರನ್ನು ಬಲವಂತವಾಗಿ ಕೆಳಗಿಳಿಸಿದ ದಿನದಿಂದಲೇ ಹಿರಿಯ ನಾಯಕರನ್ನು ತೆರೆಮರೆಗೆ ಸೇರಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿತ್ತು. ಈಗ ಮುಂದುವರಿದಿದೆ.

ಒಟ್ಟಾರೆ ಜೋಶಿಯವರ ಆಯ್ಕೆಗೆ ಯಾವುದೇ ಅಡೆತಡೆಗಳಿಲ್ಲದ ಹಾಗೆ ಹಾದಿಯನ್ನು ಸುಗಮಗೊಳಿಸಲು ಪ್ರಯತ್ನ ನಡೆದಿದೆ ಎಂದು ಪಕ್ಷದ ಭಿನ್ನಮತೀಯರ ಅಭಿಪ್ರಾಯವಾಗಿದೆ.

ಈ ಬಾರಿಯ ಬಿಜೆಪಿ ಪಟ್ಟಿಯಲ್ಲಿ ತಮ್ಮ ಬೆಂಬಲಿಗರೇ ಹೆಚ್ಚಿನ ಸಂಖ್ಯೆಯಲ್ಲಿರುವಂತೆ ಪ್ರಹ್ಲಾದ್ ಜೋಶಿ ನೋಡಿಕೊಂಡಿದ್ದಾರೆ.

ಯಡಿಯೂರಪ್ಪ ಮತ್ತು ಶೆಟ್ಟರ್ ಅವರ ಮಕ್ಕಳಿಗೆ ಕೊಟ್ಟರೆ ಪಕ್ಷ ಮತ್ತು ವಿಧಾನಸಭೆಯಲ್ಲಿ ಕೊನೆಯ ಸಾಲಿನಲ್ಲಿ ಕುಳಿತು ಕೊಳ್ಳುತ್ತಾರೆ. ಹೊಸಬರಿಗೆ ಧ್ವನಿ ಎತ್ತಲು ಅವಕಾಶವೇ ಇರುವುದಿಲ್ಲ. ಇದು ಕೇವಲ ಬಿಜೆಪಿಗೆ ಮಾತ್ರ ಸೀಮಿತ ಅಲ್ಲ. ದೇಶದ ಎಲ್ಲ ಪಕ್ಷಗಳಲ್ಲೂ ಇಂತಹುದೇ ಸಂಚು ನಡೆಯುತ್ತಾ ಬಂದಿದೆ. ಆಗಮನ ನಿರ್ಗಮನಕ್ಕೆ ಎಲ್ಲ ಪಕ್ಷಗಳ ಬಾಗಿಲು ಸದಾ ತೆರೆದೇ ಇರುತ್ತದೆ. ಮುಂದೊಂದು ದಿನ ಶೆಟ್ಟರ್ ತವರು ಮನೆಗೆ ಮರಳಿದರೂ ಅಚ್ಚರಿ ಪಡಬೇಕಿಲ್ಲ.

ಹಿರಿತನವನ್ನು ಮುಂದೊಡ್ಡಿ ಯಾವುದೇ ಪಟ್ಟಕ್ಕೆ ಸವಾಲು ಹಾಕುವವರು ಸಚಿವರಾದ ಒಕ್ಕಲಿಗ ಸಮುದಾಯಕ್ಕೆ ಸೇರಿದ ಆರ್. ಅಶೋಕ್ ಮತ್ತು ವೀರಶೈವ ಸಮುದಾಯದ ಮುಖಂಡ ವಿ.ಸೋಮಣ್ಣ. ಇವರಿಬ್ಬರನ್ನು ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯನವರ ವಿರುದ್ಧ ಸ್ಪರ್ಧೆಗಿಳಿಸಿ ವ್ಯವಸ್ಥಿತವಾಗಿ ರಾಜ–ಕೀಯವಾಗಿ ಮುಗಿಸುವ ಹುನ್ನಾರ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆ. ಸಿದ್ದರಾಮಯ್ಯ ವಿರುದ್ಧ ಗೆದ್ದು ನಾನು ಲಿಂಗಾಯತ ಮುಖಂಡ ಎಂದೂ ಶಿವಕುಮಾರ್ ವಿರುದ್ಧ ಗೆದ್ದು ನಾನು ಒಕ್ಕಲಿಗರ ಅದ್ವಿತೀಯ ನಾಯಕ ಎಂದು ಸಾಬೀತು ಪಡಿಸಬೇಕಿದೆ. ಇದು ಎಷ್ಟರ ಮಟ್ಟಿಗೆ ಸಾಧ್ಯ ಎನ್ನುವುದನ್ನು ನೀವೇ ಊಹಿಸಿಕೊಳ್ಳಿ.

**ಶೆಟ್ಟರ್ ನಡೆ ಸರಿಯೇ**

ಶಾಲಾ ದಿನಗಳಲ್ಲಿ ಸಂಘ ಪರಿವಾರದ ನಂಟು. ಕಾಲೇಜು ಜೀವನದಲ್ಲಿ ಎಬಿವಿಪಿ, ನಂತರ ಬಿಜೆಪಿ ಮೂಲಕ ರಾಜಕೀಯ ಪ್ರವೇಶ. ಹೀಗೆ 40 ವರ್ಷಗಳ ಕಾಲ ಬಿಜೆಪಿ ಸಖ್ಯದಲ್ಲೇ ಇದ್ದವರು ಶೆಟ್ಟರ್. ಇವರ ಕುಟುಂಬವೇ ಸಂಘ ಪರಿವಾರಕ್ಕೆ ಸಮರ್ಪಣೆ ಮಾಡಿಕೊಂಡಿತ್ತು.

ಇದೀಗ ಪರಿಸ್ಥಿತಿ ಮುರುವಾಗಿದೆ. ಜೀವನದ ಸಂಧ್ಯಾಕಾಲದಲ್ಲಿ ಕಾಂಗ್ರೆಸ್ ಸೇರಿದ್ದಾರೆ. ಮುಖ್ಯಮಂತ್ರಿಯೇ ಆಗಿದ್ದ ಅವರಿಗೆ ಮತ್ತೆ ಅದೇ ಹುದ್ದೆ ಒಲಿಯುವ ಭಾಗ್ಯ ಕ್ಷೀಣ. ಆದರೂ ಸೇರ್ಪಡೆಯಾಗಿದ್ದಾರೆ.

ಬಿಜೆಪಿಯ ತಾಲೂಕು ಘಟಕದ ಅಧ್ಯಕ್ಷನಿಂದ ಹಿಡಿದು ರಾಜ್ಯದ ಮುಖ್ಯಮಂತ್ರಿ ಹುದ್ದೆಯವರೆಗೆ ಬಿಜೆಪಿ ಎಲ್ಲವನ್ನೂ ಕೊಟ್ಟಿತ್ತು. ಆದರೂ ಪಕ್ಷ ಬಿಡುವಂತಹ ಅನಿವಾರ್ಯತೆ ಸೃಷ್ಟಿಯಾಗಿತ್ತು ಎಂದು ಅವರ ಆಪ್ತ ವಲಯ ಹೇಳುತ್ತದೆ.

ಎಸ್. ಎಂ. ಕೃಷ್ಣ ಅವರಿಗೆ ಕಾಂಗ್ರೆಸ್ ಸಚಿವ, ಕೇಂದ್ರ ಸಚಿವ, ಮುಖ್ಯಮಂತ್ರಿ ರಾಜ್ಯಪಾಲ ...ಹೀಗೆ ಎಲ್ಲವನ್ನೂ ಕೊಟ್ಟಿತ್ತು. ಆದರೂ ಅವರು ಜೀವನದ ಸಂಧ್ಯಾಕಾಲದಲ್ಲಿ ಬಿಜೆಪಿ ಸೇರ್ಪಡೆಯಾದರು. ಅದರಿಂದ ಅವರಿಗೆ ಅದ ಲಾಭವೇನು ಎಂದು ಅವರೇ ಹೇಳಬೇಕು.

ಶೆಟ್ಟರ್ ಅವರು ತ್ಯಾಗ ಮನೋಭಾವವನ್ನು ಪ್ರದರ್ಶಿಸಬಹುದಿತ್ತು ಎಂದು ಕೆಲವರು ವಾದಿಸಬಹುದು. ವಯೋಮಾನದ ನೆಪವೊಡ್ಡಿ ರಾಜಕೀಯ ನಿವೃತ್ತಿ ಪಡೆಯುವಂತೆ ಶೆಟ್ಟರ್ ಅವರಿಗೆ ಸೂಚನೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ಈ ಪ್ರಸ್ತಾಪಕ್ಕೆ ಶೆಟ್ಟರ್ ಒಪ್ಪಿಗೆ ನೀಡಿಲ್ಲ. ಕೊನೆಗೆ ವರಿಷ್ಠರು ನಿಮ್ಮನ್ನು ಬಿಟ್ಟು ನಿಮ್ಮ ಪತ್ನಿ ಅಥವಾ ಮಕ್ಕಳಿಗೆ ಟಿಕೆಟ್ ನೀಡುವ ಭರವಸೆ ಮುಂದಿಟ್ಟಿದ್ದಾರೆ. ನನಗೆ ಏಕೆ ಟಿಕೆಟ್ ನಿರಾಕರಿಸಲಾಗುತ್ತಿದೆ ಎಂಬ ಒಂದೇ ಒಂದು ಪ್ರಶ್ನೆಗೆ ಉತ್ತರ ಕೊಡಿ ಎಂದಾಗ ಪ್ರಹ್ಲಾದ ಜೋಶಿ, ಬಸವರಾಜ ಬೊಮ್ಮಾಯಿ ಧರ್ಮೇಂದ್ರ ಪ್ರಧಾನ್ ನಿರುತ್ತರರಾಗುತ್ತಾರೆ.

ಈ ಮಧ್ಯೆ ಮುಖ್ಯಮಂತ್ರಿ ಹುದ್ದೆಗೆ ಪ್ರಹ್ಲಾದ ಜೋಶಿ ಅವರನ್ನು ಪ್ರತಿಷ್ಠಾಪನೆ ಮಾಡಲು ಹೈ ಕಮಾಂಡ್ ಮತ್ತು ಸಂಘ ಪರಿವಾರ ಈಗಾಗಲೇ ನಿರ್ಧಾರ ಮಾಡಿದೆ. ಇವ–ರಿಗೆ ಎದುರಾಗಬಹದಾದ ಹಿರಿಯರನ್ನು ಅಖಾಡಾದಲ್ಲಿಯೇ ಇಲ್ಲದಂತೆ ಮಾಡುವುದು ಇವರು ಹೆಣೆದಿರುವ ತಂತ್ರ ಎಂದೂ ಮೂಲಗಳು ಹೇಳುತ್ತವೆ. ನಂತರ ಪಕ್ಷದೊಳಗಿನ ವೀರಶೈವ ಲಿಂಗಾಯತ, ಒಕ್ಕಲಿಗ ಸೇರಿದಂತೆ ಎಲ್ಲ ಸಮುದಾಯಗಳ ಶಾಸಕರು ಮತ್ತು ಕಾರ್ಯಕರ್ತರು ಹೈ ಕಮಾಂಡ್ ಹೇಳಿದ್ದನ್ನು ಒಪ್ಪಿಕೊಳ್ಳಬೇಕಾಗುತ್ತದೆ. ಒಪ್ಪಿಕೊಳ್ಳಲೇಬೇಕಾದ ಅನಿವಾರ್ಯತೆ ಬೆಳೆದಿರುತ್ತದೆ. ಒಬ್ಬ ವ್ಯಕ್ತಿಗೆ ಗೆಲ್ಲಿಸುವ ಸಂಪೂರ್ಣ ಶಕ್ತಿ ಇಲ್ಲದೆ ಇರಬಹುದು. ಆದರೆ ಸೋಲಿಸುವಷ್ಟು ಸಾಮರ್ಥ್ಯ ಇದ್ದೇ ಇರುತ್ತದೆ. ಶೆಟ್ಟರ್ ಅವರ ನಿರ್ಗಮನ ನಿಶ್ಚಿತವಾಗಿ ಬಿಜೆಪಿ ಫಲಿತಾಂಶದ ಮೇಲೆ ಪರಿಣಾಮ ಬೀರದೆ ಇರದು.

**ಶೆಟ್ಟರ್ ಅವರನ್ನು ' ಕೈ ' ಹಿಡಿದಿದ್ದು ಏಕೆ?**

ಬಿಜೆಪಿ ಲಿಂಗಾಯತರಿಗೆ ಗೌರವ ಕೊಡುತ್ತಿಲ್ಲ ಎಂಬ ಸಂದೇಶ ನೀಡುವುದು ಮೊದಲ ಕಾರಣ.

ಇವರ ಸೇರ್ಪಡೆ ಗೆ ವೇದಿಕೆ ಸಿದ್ದಪಡಿಸಿದ್ದು ಹಿರಿಯ ಕಾಂಗ್ರೆಸ್ ಮುಖಂಡರಾದ ಶಾಮನೂರು ಶಿವಶಂಕರಪ್ಪ ಮತ್ತು ಎಂ. ಬಿ.ಪಾಟೀಲ್. ಶೆಟ್ಟರ ಅವರ ಪುತ್ರ ಶಾಮನೂರು ಅವರ ಮೊಮ್ಮಗಳನ್ನು ವಿವಾಹ ಮಾಡಿ ಕೊಂಡಿದ್ದಾರೆ.

ಕರ್ನಾಟಕದಲ್ಲಿ ವೀರಶೈವ ಲಿಂಗಾಯತ ಸಮುದಾಯದ ಜನಸಂಖ್ಯೆ ಶೇ.17–20 ರಷ್ಟಿದೆ. ಶೆಟ್ಟರ್, ಲಕ್ಷಣ ಸವದಿ ಮತ್ತು ಅಯನೂರು ಮಂಜುನಾಥ್ ಅವರು ಹೊರ ನಡೆದ ನಂತರ ಬಿಜೆಪಿ ಲಿಂಗಾಯತ ಸಮುದಾಯವನ್ನು ಕಡೆಗಣಿಸುತ್ತಿದೆ ಎಂಬ ಸಂದೇಶ ಹೋಗಿರುವುದಂತೂ ಸ್ಪಷ್ಟ. ಜತೆಗೆ ಯಡಿಯೂರು ಅವರ ಇಕ್ಕಟ್ಟಿನ ಪರಿಸ್ಥಿತಿ ಪುಷ್ಠಿ ನೀಡುತ್ತದೆ.

80ರ ದಶಕದಲ್ಲಿ ಲಿಂಗಾಯತ ಸಮುದಾಯ ಕಾಂಗ್ರೆಸ್ ಪರವಾಗಿತ್ತು. 1990 ರಲ್ಲಿ ಯಾವಾಗ ವೀರೇಂದ್ರ ಪಾಟೀಲರನ್ನು ಅವಮಾನಕರ ರೀತಿಯಲ್ಲಿ ಕಾಂಗ್ರೆಸ್ ಮುಖ್ಯಮಂತ್ರಿ ಪಟ್ಟ ದಿಂದ ಕೆಳಗಿಳಿಸಿತೋ ಆಗಿನಿಂದ ಈ ಸಮುದಾಯ ಕಾಂಗ್ರೆಸ್ ಪಕ್ಷದಿಂದ ದೂರವುಳಿದಿದೆ. ಈ ಆರೋಪವನ್ನು ತೊಡೆದು ಹಾಕಲು ಕಾಂಗ್ರೆಸ್ ಗೆ ಇದೊಂದು ಸುವರ್ಣಾವಕಾಶ. ಈ ನಿಟ್ಟಿನಲ್ಲಿ ಎಲ್ಲ ಪ್ರಯತ್ನ ನಡೆಸುತ್ತಿದೆ. 1989 ರಲ್ಲಿ

224ಕ್ಷೇತ್ರಗಳ ಪೈಕಿ ಪಾಟೀಲರ ನೇತೃತ್ವದಲ್ಲಿ ಕಾಂಗ್ರೆಸ್ 178 ಸ್ಥಾನಗಳಲ್ಲಿ ಭಾರಿ ದಿಗ್ವಿಜಯ ಸಾಧಿಸಿತ್ತು.

ಮುಖ್ಯಮಂತ್ರಿ ವೀರೇಂದ್ರ ಪಾಟೀಲ್ ಅನಾರೋಗ್ಯ ಕಾರಣ ಚಿಕಿತ್ಸೆ ಪಡೆಯುತ್ತಿದ್ದಾಗ ರಾಜೀವ್ ಗಾಂಧಿ ವಿಮಾನ ನಿಲ್ದಾಣದಲ್ಲಿ ಇವರನ್ನು ವಜಾ ಮಾಡಲಾಗಿದೆ ಎಂದು ಘೋಷಣೆ ಮಾಡಿದರು. ಆಗ ಬಿದ್ದ ಹೊಡೆತದಿಂದ ಕಾಂಗ್ರೆಸ್ ಚೇತರಿಸಿಕೊಳ್ಳಲು ತಿಣುಕಾಡುತ್ತಿದೆ.

ಅಂದಿನಿಂದ ಇಂದಿನವರೆಗೆ ಎರಡು ದಶಕಗಳ ಕಾಲ ಬಿಜೆಪಿ ಲಿಂಗಾಯತರ ಬೆಂಬಲದಿಂದ ರಾಜ್ಯದಲ್ಲಿ ಬೆಳೆಯಿತು. ಇದೀಗ ಆ ಸಮುದಾಯದಲ್ಲಿ ಬಿಜೆಪಿ ನಿಷ್ಠೆ ಕು–ರಿತು ಅನುಮಾನ ಉಂಟಾಗಿದೆ. ಶೆಟ್ಟರ್ ಮತ್ತು ಸವದಿ ಅವರ ನಿರ್ಗಮನದಿಂದ ಪಕ್ಷಕ್ಕೆ ಹಾನಿ ಆಗಿರುವುದನ್ನು ಯಾರೂ ನಿರಾಕರಿಸುತ್ತಿಲ್ಲ.

ಸವದಿ ಗಾಣಿಗ ಲಿಂಗಾಯತ ಸಮುದಾಯವನ್ನು ಮತ್ತು ಶೆಟ್ಟರ್ ಬಣಜಿಗ ಸಮಾಜವನ್ನು ಪ್ರತಿನಿಧಿಸುತ್ತಾರೆ. ಈ ಎರಡೂ ಸಮುದಾಯಗಳ ಜನಸಂಖ್ಯೆ ಉತ್ತರ ಕರ್ನಾಟಕದಲ್ಲಿ ಕಡಿಮೆ. ಹಾಗಾಗಿ ಅಷ್ಟೊಂದು ಪ್ರಭಾವ ಬೀರುವುದಿಲ್ಲ ಎಂದು ಬಿಜೆಪಿ ಮುಖಂಡರ ವಾದವಾಗಿದೆ.

ಮತ್ತೊಂದು ಪ್ರಬಲ ಉಪ ಪಂಗಡ ಪಂಚಮಸಾಲಿ ಸಮುದಾಯದ ಮೀಸಲಾತಿ ಬೇಡಿಕೆಯನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಿಲ್ಲ ಎಂಬ ಆರೋಪವೂ ಬಿಜೆಪಿ ಮೇಲಿದೆ.

ಲಿಂಗಾಯತ ಸಮುದಾಯದ ಅದ್ವಿತೀಯ ನಾಯಕ ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿಸಿದ ಆರೋಪದಿಂದ ಬಿಜೆಪಿ ಮುಕ್ತಿ ಪಡೆದಿಲ್ಲ. ಅಲ್ಲಲ್ಲಿ ಚರ್ಚೆ ನಡೆಯುತ್ತಲೇ ಇದೆ. ರಾಜಕಾರಣ ನಿಂತ ನೀರಲ್ಲ. ಸದಾ ಚಲನಶೀಲ ಮುಖಿಯಾಗಿರುತ್ತದೆ. ಕಟ್ಟಾ ಸಂಘ ಪರಿವಾರದಿಂದ ಬೆಳೆದು ಬಂದ ಅದೆಷ್ಟೋ ನಾಯಕರು ಎಡ ಪಂಥೀಯರಾದ ಉದಾಹರಣೆಗಳಿವೆ. ಹಾಗೆಯೇ ಜೀವನದುದ್ದಕ್ಕೂ ಎಡ ಪಂಥೀಯ ನೀತಿ ಅನುಸರಿಸಿದ ಮುಖಂಡರು ಬಿಜೆಪಿ ಸೇರ್ಪಡೆಯಾದ ನಿದರ್ಶನಗಳೂ ಕಣ್ಣ ಮುಂದಿವೆ. ಯಾರಿಗೆ ಗೊತ್ತು? ನಾಳೆ ಶೆಟ್ಟರ್ ಬಿಜೆಪಿಗೆ ಮರಳಬಹುದು, ಬೊಮ್ಮಾಯಿ ಕಾಂಗ್ರೆಸ್ ಸೇರಬಹುದು, ವಿಜಯೇಂದ್ರ ಹೊಸ ಪಕ್ಷ ಕಟ್ಟಲೂಬಹುದು.

## ಬೆನ್ನೆಲುಬು ಶಸ್ತ್ರಚಿಕಿತ್ಸೆ ಸೇವೆಯ ಲಭ್ಯತೆ

ಬೆಳಗಾವಿ: ಖ್ಯಾತ ಬೆನ್ನೆಲುಬು ಶಸ್ತ್ರಚಿಕಿತ್ಸಕರಾದ ಡಾ.ಆನಂದಖಟಾವಿ ಅವರು ಪ್ರತಿ ಮಂಗಳವಾರ ಹಾಗೂ ಗುರುವಾರದಂದು ಬೆಳಿಗ್ಗೆ 9ರಿಂದ ಮದ್ಯಾಹ್ನ 1 ಘಂಟೆ ಹಾಗೂ ಮದ್ಯಾಹ್ನ 3ರಿಂದ ಸಂಜೆ 5 ರವರೆಗೆ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಯಳ್ಳೂರ ರಸ್ತೆ ಬೆಳಗಾವಿ ಯ ಎಲುಬು ಕಿಲುಬು ವಿಭಾಗದಲ್ಲಿ ಲಭ್ಯರಿರುತ್ತಾರೆ.

ಚೆನ್ನೈ ನ ಖ್ಯಾತ ಎಲುಬು ಕೀಲು ಆಸ್ಪತ್ರೆಯಾದ ಎಮ್ಐಒಟಿ ಆಸ್ಪತ್ರೆಯಲ್ಲಿ ಮೂರು ವರ್ಷಗಳ ಅನುಭವ ಹೊಂದಿರುವ ಇವರು ಅಂಕುಡೊಂಕಾದ ಬೆನ್ನೆಲುಬು, ಬೆನ್ನೆಲುಬಿನ ಕ್ಯಾನ್ಸರ, ಬೆನ್ನೆಲುಬಿನ ಡಿಸ್ಕ ಸಮಸ್ಯೆ, ಬೆನ್ನು ನೋವು, ಕುತ್ತಿಗೆ ನೋವು, ಕೈ ಹರಿವು ಮತ್ತು ಕಾಲು ಹರಿಯುವದು, ಬೆನ್ನು ಮೂಳೆಯ ಟಿಬಿ, ಎಂಡೊಸ್ಕೋಪಿ ಕಡಿಸ್ಕ ಸರ್ಜರಿ, ಸ್ಕ್ರೂ ಹಾಘೂ ರಾಡ್ ಅಳವಡಿಕೆ, ಬೆನ್ನೆಲುಬಿನ ಎಂಡೋಸ್ಕೋಪಿಕ ಸರ್ಜರಿ, ಭುಜದ ನೋವು, ದಿರ್ಘಕಾಲೀನ ಬೆನ್ನುನೋವು, ಸಂಧಿವಾತ, ಮತ್ತಿತರೆ ಎಲುಬು ಕೀಲಿನ ಸಮಸ್ಯೆಗಳ ಪರಿಣಾಮಕಾರಿಯಾದ ಚಿಕಿತ್ಸೆ ನೀಡುವಲ್ಲಿ ಡಾ. ಆನಂದ ಖಟಾವಿ ಅವರು ನಿಪುಣರಾಗಿದ್ದಾರೆ.

ಪ್ರಸ್ತುತ ಆಸ್ಪತ್ರೆಯಲ್ಲಿರುವ ಇತರ ಸೇವೆಗಳಂತೆ ಇವರ ಸೇವೆಯೂ ಸಹ ಜನಸಾಮಾನ್ಯರಿಗೆ ಕೈಗೆಟು ಕುವದರದಲ್ಲಿ ಲಭ್ಯವಿದ್ದು ಸಾರ್ವಜನಿಕರು ಇವರ ಸೇವೆಯ ಸದುಪಯೋಗ ಪಡೆದುಕೊಳ್ಳಲು ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ದಾರವಾಡ ಅವರು ಕೋರಿದ್ದಾರೆ. ಅಧಿಕ ಮಾಹಿತಿಗಾಗಿ 8550887777,9538701437 ಮೊಬೈಲ ಸಂಖ್ಯೆಗಳ ಮೇಲೆ ಸಂಪರ್ಕಿಸಲು ಸೂಚಿಸಿದ್ದಾರೆ.

## ಬೇಸಿಗೆ ಶಿಬಿರದಡಿ ಮಕ್ಕಳಿಗೆ ವಿವಿಧ ಸೃಜನಾತ್ಮಕ, ಕ್ರಿಯಾತ್ಮಕ ಚಟುವಟಿಕೆ: ಹೆಸರು ನೋಂದಾಯಿಸಿ

ಕೊಪ್ಪಳ: 2023–24ನೇ ಸಾಲಿನ ಜಿಲ್ಲಾ ಮಟ್ಟದ ಬೇಸಿಗೆ ಶಿಬಿರ ಕಾರ್ಯಕ್ರಮದ ಅಂಗವಾಗಿ ಮಕ್ಕಳಿಗೆ ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸುವ ಮಕ್ಕಳ ಹೆಸರು ನೋಂದಾಯಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಪದ್ಮಾವತಿ ಜಿ ಅವರು ತಿಳಿಸಿದ್ದಾರೆ.

ಬಾಲಭವನ ಸೊಸೈಟಿ, ಬೆಂಗಳೂರು ಇವರು ವತಿಯಿಂದ ಜಿಲ್ಲಾ ಮಟ್ಟದ ಬೇಸಿಗೆ ಶಿಬಿರ ಆಯೋಜಿಸಿದ್ದು, ಶಿಬಿರವು 15 ದಿನಗಳ ಕಾಲ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4ರವರೆಗೆ ನಡೆಯಲಿದೆ.

ಶಿಬಿರದಲ್ಲಿ ವಿವಿಧ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ, ಕಸದಿಂದ ರಸ, ಸಮೂಹ ನೃತ್ಯ, ಸಮೂಹ ಗೀತೆ, ಕರಾಟೆ, ಯೋಗ, ಇತರೆ ಚಟುವಟಿಕೆಗಳು ನಡೆಯಲಿವೆ. ಈ ಕಾರ್ಯಕ್ರಮಕ್ಕೆ 05 ರಿಂದ 16 ವರ್ಷದ ಒಳಗಿನ ಆಸಕ್ತಿಯುಳ್ಳ ಸರಕಾರಿ ಶಾಲೆ ಅಥವಾ ಸೌಲಭ್ಯ ವಂಚಿತ ಮಕ್ಕಳು ಚಟುವಟಿಕೆಯಲ್ಲಿ ಭಾಗವಹಿಸಲು ಮೇ 01ರ ಸಂಜೆ 5.30 ಗಂಟೆಯೊಳಗಾಗಿ ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ ಕೊಪ್ಪಳ ಇವರಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಚಟುವಟಿಕೆಯಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ, ದೂರವಾಣಿ ಸಂಖ್ಯೆ 08539–222703 ಹಾಗೂ ಮೊ.ಸಂ: 9972944467ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ವ್ಯಕ್ತಿ ಕಾಣೆ



ಧಾರವಾಡ: ಧಾರವಾಡ ಜಿಲ್ಲೆಯ ಸಲಕಿನಕೊಪ್ಪ ಗ್ರಾಮದ ನಿವಾಸಿಯಾದ 30 ವರ್ಷದ ವೆಂಕಟೇಶ ಅರ್ಜುನಗೌಡ ಪಾಟೀಲ ಎಂಬ ವ್ಯಕ್ತಿ ಜೂನ್ 11, 2022 ರಂದು ಬೆಳಿಗ್ಗೆ 9 ಗಂಟೆಗೆ ಸಲಕಿನಕೊಪ್ಪ ಗ್ರಾಮದ ತನ್ನ ಮನೆಯಿಂದ ತಮ್ಮ ಬಾಬತ್ತಿನ ಹೊಲದ ಕೆಲಸಕ್ಕೆ ಹೋಗುವುದಾಗಿ ಮನೆಯಲ್ಲಿ ಹೇಳಿ ಹೋದವನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾನೆ ಎಂದು ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಎತ್ತರ 5 ಪುಟ 5 ಇಂಚು, ದುಂಡು ಮುಖ, ಗೋಧಿಕೆಂಪು ಮೈಬಣ್ಣ, ಮೈಯಿಂದ ಸಾಧಾರಣ, ತಲೆಯಲ್ಲಿ ಕರಿ ಕೂದಲು ಇದ್ದು, ಮುಖದಲ್ಲಿ ಚಿಗುರು ಮೀಸೆ ದಾಡಿಯನ್ನು ಬಿಟ್ಟಿರುತ್ತಾನೆ.

ಕಪ್ಪು ಬಣ್ಣದ ಉದ್ದ ತೋಲಿನ ಅಂಗಿ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ಹಿಂದಿ ಭಾಗಫಯನ್ನು ಮಾತನಾಡುತ್ತಾನೆ. ಇವರ ಸುಳಿವು ಸಿಕ್ಕವರು ಜಿಲ್ಲಾ ನಿಯಂತ್ರಣ ಕೊಠಡಿ– 0836–2233201 ಹಾಗೂ ಧಾರವಾಡ ಗ್ರಾಮೀಣ ಪೊಲೀಸ್ ಠಾಣೆ ಸಂಖ್ಯೆ–0836–2233215, 9480804345 ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ



ಧಾರವಾಡ: ಬೆಳಗಾವಿ ಜಿಲ್ಲೆಯ ಬೈಲ್ಹೊಂಗಲ್ ತಾಲೂಕಿನ ಗದ್ದಿ ಕರವಿನಕೊಪ್ಪ ಗ್ರಾಮದ ನಿವಾಸಿಯಾದ ಹಾಲಿ ತಿರ್ಲಾಪುರದ 42 ವರ್ಷದ ವಿಠ್ಠಲ ರುದ್ರಪ್ಪ ಮರಡಿ ಎಂಬ ವ್ಯಕ್ತಿ ಏ.13 ರ ರಾತ್ರಿ 10–30 ಗಂಟೆಯಿಂದ ಏ.14 ರ ಬೆಳಗಿನ 2–30 ಗಂಟೆಯ ಮಧ್ಯದಲ್ಲಿ ನವಲಗುಂದ ತಾಲೂಕಿನ ತಿರ್ಲಾಪುರ ಗ್ರಾಮದ ಸೋಮಪ್ಪನವರ ಜಮೀನಿನಿಂದ ಯಾರಿಗೂ ಹೇಳದೆ ಕೇಳದೆ ಎಲ್ಲಿಗೋ ಹೋಗಿ ಕಾಣೆಯಾಗಿರುತ್ತಾನೆ ಎಂದು ನವಲಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿ ಎತ್ತರ 5 ಫೂಟ್ 10 ಇಂಚು, ಮೈಯಿಂದ ಸದೃಢ, ಕೋಲು ಮುಖ, ಗೋಧಿ ಕೆಂಪು ಮೈಬಣ್ಣ ಹೊಂದಿರುತ್ತಾನೆ. ಬಿಳಿ ಲಂಡಂಗಿ, ಬಿಳಿ ಧೋತರ ಧರಿಸಿರುತ್ತಾನೆ. ಕನ್ನಡ ಭಾಗಫ ಮಾತನಾಡುತ್ತಾನೆ ಇವರ ಸುಳಿವು ಸಿಕ್ಕವರು ನವಲಗುಂದ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು ಎಂದು ನವಲಗುಂದ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

# ಜಾಹೀರಾತು ಪ್ರಸಾರಕ್ಕೆ ಮಾಧ್ಯಮ ಪ್ರಮಾಣೀಕರಣ ಕಡ್ಡಾಯ: ಜಿಲ್ಲಾಧಿಕಾರಿ

ಧಾರವಾಡ: ರಾಜಕೀಯ ಪ್ರಚಾರದ ಪತ್ರಿಕಾ ಜಾಹೀರಾತು, ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಸಾರವಾಗುವ ಜಾಹೀರಾತು ಹಾಗೂ ಸಾಮಾಜಿಕ ಜಾಲತಾಣಗಳು, ಮೊಬೈಲ್ ಎಸ್.ಎಂ.ಎಸ್., ಇ–ಪತ್ರಿಕೆಗಳಲ್ಲಿ ಪ್ರಕಟವಾಗುವ ಜಾಹೀರಾತುಗಳಿಗೆ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತುಗಳಿಗೆ ಕಡ್ಡಾಯವಾಗಿ ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ನಿಗದಿತ ನಮೂನೆ–ಎ ದಲ್ಲಿ ಅರ್ಜಿ ಸಲ್ಲಿಸಿ, ನಮೂನೆ –ಬಿ ಯಲ್ಲಿ ಅನುಮತಿ ಪಡೆಯಬೇಕು. ಜಾಹೀರಾತಿನ ವೆಚ್ಚವನ್ನು ಚುನಾವಣಾ ಅಧಿಕಾರಿಗಳಿಗೆ ಸಲ್ಲಿಸುವುದು ಕಡ್ಡಾಯವಾಗಿದೆ.

ಜಾಹೀರಾತು ಅನುಮತಿ ಹಾಗೂ ಪಾವತಿ ಸುದ್ದಿಯ (ಪೇಡ್ನ್ಯೂಸ್) ಮೇಲೆ ನಿಗಾವಹಿಸಲು ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆ. ಪಾವತಿ ಸುದ್ದಿ ಪ್ರಕಟಿಸುವುದು ಪ್ರಜಾ ಪ್ರಾತಿನಿಧಿಕ ಕಾಯ್ದೆ 1951ರಡಿ ಶಿಕ್ಷಾರ್ಹ ಅಪರಾಧವಾಗಿದೆ. ಪಾವತಿ ಸುದ್ದಿಯು (ಪೇಡ್ನ್ಯೂಸ್) ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆಗೆ ಅಪಾಯಕಾರಿಯಾಗಿದೆ. ಪಾವತಿ ಸುದ್ದಿ ಕುರಿತಂತೆ ಈಗಾಗಲೇ ಪ್ರೆಸ್ಕೌನ್ಸಿಲ್ ಆಫ್ ಇಂಡಿಯಾ, ಮಾಧ್ಯಮ ಸಂಸ್ಥೆಗಳು ಹಾಗೂ ಸುಪ್ರಿಂಕೋರ್ಟ್ ಗಂಭೀರವಾಗಿ ಪರಿಗಣಿಸಿ ಪಾವತಿ ಸುದ್ದಿ ಎಂದರೆ ಚುನಾವಣೆಗೆ ಸಂಬಂಧಿಸಿದಂತೆ ನಗದು ಅಥವಾ ಯಾವುದೇ ಉಡುಗೊರೆ ರೂಪದಲ್ಲಿ ಪಡೆದುಕೊಂಡು ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗೆ ಸಂಬಂಧಿಸಿದ ಸುದ್ದಿ ಅಥವಾ ವಿಶ್ಲೇಷಣೆ ಮಾಧ್ಯಮದಲ್ಲಿ (ಮುದ್ರಣ



ಹಾಗೂ ವಿದ್ಯುನ್ಮಾನ) ಪ್ರಕಟವಾಗಿದ್ದಲ್ಲಿ ಅದನ್ನು ಪಾವತಿ ಸುದ್ದಿ (ಪೇಡ್ನ್ಯೂಸ್) ಎಂದು ಪರಿಗಣಿಸಲಾಗುವುದೆಂದು ತಿಳಿಸಿದ್ದಾರೆ.

ಪಾವತಿ ಸುದ್ದಿ ಪ್ರಕಟವಾದರೆ ಪರಿಶೀಲಿಸಿ ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951ರನ್ವಯ ಪ್ರಕರಣ ದಾಖಲಿಸುವುದಲ್ಲದೇ ಪ್ರಜಾ ಪ್ರಾತಿನಿಧ್ಯ ಕಾಯ್ದೆ–1951ರ ಅಧ್ಯಾಯ–3ರ ಭಾಗ–7ರಂತೆ ಎರಡು ವರ್ಷಗಳ ಜೈಲು ಶಿಕ್ಷೆಗೆ ಒಳಪಡಿಸಲು ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಜಾಹೀರಾತು ಪ್ರಮಾಣೀಕರಿಸಲು ಜಿಲ್ಲಾಮಟ್ಟದ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು ಸಮಿತಿಯನ್ನು ರಚಿಸಲಾಗಿದೆ. ಎಲ್ಲ ಪತ್ರಿಕಾ, ದೃಶ್ಯ ಮಾಧ್ಯಮ ಹಾಗೂ ಸ್ಥಳೀಯ ಕೇಬಲ್ ಟಿವಿಗಳಲ್ಲಿ ಪ್ರಸಾರವಾಗುವ ಚುನಾವಣಾ ಜಾಹಿರಾತುಗಳ ಪ್ರಕಟಣೆಗೆ ಮುಂಚಿತವಾಗಿ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ ಅನುಮತಿ ಕಡ್ಡಾಯವಾಗಿರುತ್ತದೆ. ಕೇಬಲ್ ಟಿ.ವಿ., ಸಾಮಾಜಿಕ ಜಾಲತಾಣ, ಪತ್ರಿಕಾ ಹಾಗೂ ವಿದ್ಯುನ್ಮಾನ ಮಾಧ್ಯಮಗಳು ಮತ್ತು ಇ–ಪತ್ರಿಕೆಗಳ ಸುದ್ದಿಗಳ ಕುರಿತಂತೆ ನಿಗಾವಹಿಸಲು ತಂಡಗಳನ್ನು ರಚಿಸಲಾಗಿದೆ ಎಂದರು.

ಚುನಾವಣಾ ಅಭ್ಯರ್ಥಿಯ ಪರ ಅಥವಾ ವಿರುದ್ಧವಾದ ವ್ಯಕ್ತಿತ್ವ ಅಥ–'ವಾ ಸಾಧನೆಯ ಸರಿಯಾದ ಚಿತ್ರಣ ಇರದೇ ಮತ ಚಲಾಯಿಸುವುದನ್ನು ನಿರ್ಧರಿಸುವುದು, ಒಬ್ಬ ಅಭ್ಯರ್ಥಿಯ ಸಾಧನೆ ಬಗ್ಗೆ ನಿಗದಿತ ಶಬ್ದಗಳ ಬರಹವನ್ನು ನಿರಂತರವಾಗಿ ಪ್ರಕಟಿಸುವುದು.

ಒಬ್ಬನೇ ಅಭ್ಯರ್ಥಿಯ ಬಗ್ಗೆ ನಿರಂತರವಾಗಿ ಲೇಖನವನ್ನು ಬರೆದು ಪ್ರಕಟಿಸುವುದು, ಜಾತಿ, ಧರ್ಮದ ಆಧಾರದ ಮೇಲೆ ಒಬ್ಬ ವ್ಯಕ್ತಿ ಗೆಲುವು ಸಾಧ್ಯತೆ ಎಂದು ಪ್ರತಿಬಿಂಬಿಸುವುದು, ವರದಿಯ ತಲೆಬರಹದಲ್ಲಿ ನಿರ್ದಿಷ್ಟ ವ್ಯಕ್ತಿ ಗೆಲುವು ಸಾಧಿಸುತ್ತಾನೆ ಎಂದು ನಮೂದಿಸಿ ಒಳಗಿನ ಸುದ್ದಿಯಲ್ಲಿ ಕಾರಣ ಇಲ್ಲದೆ ಇರುವುದು ಇವೆಲ್ಲವೂ ಪಾವತಿಯ ಸುದ್ದಿಯ ವ್ಯಾಪ್ತಿಗೆ ಒಳಪಡುತ್ತವೆ.

ಪಾವತಿ ಸುದ್ದಿ ಪರಿಗಣಿಸಿ ಪ್ರಕಟವಾದ 96 ಗಂಟೆಯೊಳಗೆ ಸಂಬಂಧಿಸಿದ ಪಕ್ಷ ಅಥವಾ ಅಭ್ಯರ್ಥಿಗಳಿಗೆ ಸ್ಪಷ್ಟೀಕರಣ ಕೇಳಿ ನೋಟೀಸ್ ನೀಡಲಾಗುವುದು. ಅಭ್ಯರ್ಥಿಗಳು 48 ಗಂಟೆಯೊಳಗೆ ನೋಟೀಸ್ಗೆ ಉತ್ತರಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಫೇಸ್ಬುಕ್, ವಾಟ್ಸ್ಪ್, ಟ್ವಿಟರ್ ಮತ್ತು ಯೂಟ್ಯೂಬ್ನಂತಹ ಸಾಮಾಜಿಕ ಜಾಲತಾಣಗಳಲ್ಲಿ ಚುನಾವಣೆ ಮತ್ತು ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸುವುದಕ್ಕಿಂತ ಮುಂಚೆ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು ಸಮಿತಿ ವತಿಯಿಂದ ಮಾಧ್ಯಮ ಪ್ರಮಾಣೀಕರಣ ಪತ್ರ ಪಡೆಯುವುದು ಕಡ್ಡಾಯ; ಒಂದು ವೇಳೆ ಅದನ್ನು ಉಲ್ಲಂಘಿಸಿ ಪ್ರಚಾರ ಮಾಡಿದರೇ ಚುನಾವಣಾ ನೀತಿ ಸಂಹಿತೆ ಮತ್ತು ಐಟಿ ಕಾಯ್ದೆ ಉಲ್ಲಂಘನೆ ಅಡಿ ಸಂಬಂಧಿಸಿದವರ ಮೇಲೆ ಕಠಿಣ ಕ್ರಮಕೈಗೊಳ್ಳಲಾಗುವುದೆಂದು ತಿಳಿಸಿದ್ದಾರೆ.

## ಪಕ್ಷೇತರ ಅಭ್ಯರ್ಥಿಯ ಮೇಲೆ ದರ್ಪ ಮೆರೆದ ಬಿಜೆಪಿ ಶಾಸಕ

ಕೊಪ್ಪಳ: ರಾಜ್ಯದಲ್ಲಿ ಚುನಾವಣೆಯ ಕಾವು ದಿನದಿಂದ ದಿನಕ್ಕೆ ಕಾವು ಹೆಚ್ಚುತ್ತಿದ್ದು, ಈ ನಡುವೆ ಶಾಸಕರೊಬ್ಬರು ಎದುರಾಳಿ ಅಭ್ಯರ್ಥಿಯ ಮೇಲೆ ದರ್ಪ ಮೆರೆದ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ನಾಮಪತ್ರ ಸಲ್ಲಿಸಲು ಬಂದ ಅಭ್ಯರ್ಥಿಯ ಮೇಲೆ ಬಿಜೆಪಿ ಶಾಸಕ ಬಸವರಾಜ ದಡೇಸೂಗುರು ಕನಕಗಿರಿ ತಹಶೀಲ್ದಾರ್ ಕಚೇರಿಯಲ್ಲಿ ದರ್ಪ ಮೆರೆದಿದ್ದಾರೆ.

ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿರುವ ಧರ್ಮಣ್ಣ ಎಂಬವವರರು ನಾಮಪತ್ರ ಸಲ್ಲಿಸಲು ತಹಶಿಲ್ದಾರ್ ಕಚೆರಿಗೆ ತೆರಳಿದ್ದ ವೇಳೆ ಶಾಸಕ ಏಕಾಏಕಿ ಗಲಾಟೆಗೆ ಮುಂದಾಗಿದ್ದಾರೆ. ಶಾಸಕ ಗಲಾಟೆಗೆ ಮುಂದಾಗುತ್ತಿದ್ದಂತೆ ಜೊತೆಯಲ್ಲಿದ್ದ ಬೆಂಬಲಿಗರು ಅವರನ್ನು ಸಮಾಧಾನ



ಪಡೆಸಿದ್ದಾರೆ. ಪಕ್ಷೇತರವಾಗಿ ಸ್ಪರ್ಧಿಸಿದರೆ ಮತ ವಿಭಜನೆಯಾಗುತ್ತದೆ ಎಂಬ ಭೀತಿಯಲ್ಲಿ ಶಾಸಕ, ಅಭ್ಯರ್ಥಿಯನ್ನು ಹೆದರಿಸಲು ಮುಂದಾಗಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಶಾಸಕ ದರ್ಪ ಮೆರೆಯುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದು, ಶಾಸಕರ ವರ್ತನೆಗೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮಹಿಳೆಯರ ಮತವು ಅಮೂಲ್ಯವಾದದ್ದು: ಎಸ್.ಎಸ್ ಸಂಪಗಾಂವಿ

ಬೆಳಗಾವಿ: ತಾಲೂಕಾ ಸ್ವೀಪ್ ಸಮೀತಿ ಬೈಲಹೊಂಗಲ ವತಿಯಿಂದ ತಾಲೂಕಾ ಪಂಚಾಯತ ಸಭಾಂಗಣದಲ್ಲಿ ಎನ್ ಆರ್ ಎಲ್ ಎಮ್ ಮಹಿಳಾ ಒಕ್ಕೂಟದ ಸದಸ್ಯರ ಸಹಯೋಗದಲ್ಲಿ ಏಪ್ರಿಲ್.20 2023 ರಂದು ವಿಧಾನ ಸಭಾ ಚುನಾವಣೆ 2023 ರ ಅಂಗವಾಗಿ ಮಹಿಳಾ ಸಂಘದ ಸದಸ್ಯರಿಗೆ ರಂಗೋಲಿ ಸ್ಪರ್ಧೆ ಹಾಗೂ ಚರ್ಚಾ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿತ್ತು.

ಮಹಿಳೆಯರ ಮತವು ಅಮೂಲ್ಯವಾದದ್ದು ಕಡ್ಡಾಯವಾಗಿ ಮತದಾನ ಮಾಡುವುದು ನಿಮ್ಮೆಲ್ಲರ ಹೊಣೆ ಎಂದು ತಾಲೂಕಾ ಸ್ವೀಪ್ ಸಮೀತಿ ಅಧ್ಯಕ್ಷರು



ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್ ಎಸ್ ಸಂಪಗಾಂವಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿ ಮಹಿಳೆಯೂ ತನ್ನ ಕುಟುಂಬ ನಿರ್ವಹಣೆಯನ್ನು ಸ್ವಸಹಾಯ ಸಂಘದಿಂದ ಮತ್ತು ನರೇಗಾ ಯೋಜನೆಯ ಮೂಲಕ ಉದ್ಯೋಗ ಪಡೆದುಕೊಂಡು ಜೀವನ ಸಾಗಿಸಬೇಕು ಪ್ರಸ್ತುತ ನರೇಗಾ ಕೂಲಿ 316/– ಇರುತ್ತದೆ.

ಮೇ 10–2023 ರಂದು ನಡೆಯುವ ಸಾರ್ವತ್ರಿಕ ವಿಧಾನ ಸಭಾ ಚುನಾವಣೆ ಯಲ್ಲಿ ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನವನ್ನು ಮಾಡಬೇಕು ಅದು ಅತೀ ಅಮೂಲ್ಯವಾಗಿದೆ ಎಂದು ವಿಜೇತರಿಗೆ ಬಹುಮಾನ ವಿತರಣೆ ಮಾಡಿ ಕರೆ ನೀಡಿದರು.

ಸಹಾಯಕ ನಿರ್ದೇಶಕರಾದ (ಪಂ.ರಾಜ್) ರಘು ಬಿ ಎನ್, ಸಹಾಯಕ ನಿರ್ದೇಶಕರಾದ ಪ್ರಕಾಶ ಮೇಳವಂಕಿ, ಎಮ್ ತಾಪಂ ವ್ಯವಸ್ಥಾಪಕರಾದ ಎ ಇಂಚಲಮಠ, ಚುನಾವಣೆ ನೋಡಲ್ ಅಧಿಕಾರಿಯಾದ ಎಸ್ ಬಿ ಸಂಗನಗೌಡರ, ಪ್ರಕಾಶ ಗುಂಡಗಾಂವಿ, ಎಸ್ ವ್ಹಿ ಹಿರೇಮಠ, ಸಚೀನ, ನಾಗೇಂದ್ರ ಇಂಗಳಗಿ, ಆನಂದ ಮಾಲಗತ್ತಿಮಠ ಹಾಗೂ ಎನ್ ಆರ್ ಎಲ್ ಎಮ್ ಸಿಬ್ಬಂದಿಗಳು ಸಂತೋಷ, ಭಾರತಿ ಮತ್ತು ಮಹಿಳಾ ಸಂಘದ ಪ್ರತಿನಿಧಿಗಳು ಹಾಜರಿದ್ದರು.

## ಒತ್ತಡಕ್ಕೆ ಮಣಿದು ಯಾರು ಏನು ಬೇಕಾದರೂ ಮಾಡಬಹುದು: ಡಿ.ಕೆ.ಸುರೇಶ್

ಬೆಂಗಳೂರು : ಚುನಾವಣಾಧಿಕಾರಿ ಗಳು ಕೂಡಾ ಸರ್ಕಾರಿ ಅಧಿಕಾರಿಗಳೇ. ಯಾವ ಸಂದರ್ಭದಲ್ಲಿ ಯಾರು ಬೇಕಾದರೂ ಒತ್ತಡಕ್ಕೆ ಮಣಿದು ಏನು ಬೇಕಾದರೂ ಮಾಡಬಹುದು ಎಂದು ಸಂಸದ ಡಿ.ಕೆ.ಸುರೇಶ್ ಪ್ರತಿಕ್ರಿಯಿಸಿದರು.

ಕೆಪಿಸಿಸಿ ಕಚೇರಿಯಲ್ಲಿಂದು ಮಾತನಾಡಿದ ಅವರು, ಚುನಾವಣಾ ಆಯೋಗಕ್ಕೆ ಡಿಕೆಶಿ ಸಲ್ಲಿಸಿದ್ದ ಆಸ್ತಿ ವಿವರದ ಅಫಿಡವಿಟ್ ಪತ್ರವನ್ನು ಹಲವರು ಡೌನ್ಲೋಡ್ ಮಾಡುತ್ತಿದ್ದಾರೆ. ನಾಮಪತ್ರ ಪರಿಶೀಲನೆ ವೇಳೆ ಹೇಗಾದರೂ ಮಾಡಿ



ಅಡ್ಡಿ ಮಾಡಬಹುದು. ದೆಹಲಿಯಲ್ಲಿ ಕೆಲವು ಬಿಜೆಪಿಗರು ಪತ್ರಿಕಾಗೋಷ್ಠಿ ನಡೆಸಿ ಡಿಕೆಶಿಯನ್ನು ರಾಜಕೀಯವಾಗಿ ಕಟ್ಟಿ ಹಾಕಬೇಕು ಎಂದಿದ್ದಾರೆ ಎಂದು ತಿಳಿಸಿದರು.

ಜನಾಭಿಪ್ರಾಯದ ಮುಂದೆ ಬೇರೆ ಯಾರೂ ಇಲ್ಲ.

ಹಾಗಾಗಿ ನಮ್ಮನ್ನು ರಾಜಕೀಯವಾಗಿ ಮುಗಿಸಲು ಬಿಜೆಪಿಯಿಂದ ಸಾಧ್ಯವಿಲ್ಲ. ಡಿಕೆಶಿ ನಾಮಪತ್ರದಲ್ಲಿ ಯಾವುದೇ ತಾಂತ್ರಿಕ ದೋಷ ಇಲ್ಲ. ಬಿಜೆಪಿಯಿಂದ ತಂತ್ರಗಾರಿಕೆ ನಡೆಯುತ್ತಿದೆ.

ಚುನಾವಣಾ ದಿನಾಂಕ ಘೋಷಣೆ ಮಾಡುವಾಗಲೂ ಸರ್ಕಾರದ ಅನುಮತಿ ಬೇಕು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಕರ್ನಾಟಕ ಪ್ರವಾಸ ಮುಗಿದ ಬಳಿಕ ಚುನಾವಣೆ ಘೋಷಣೆ ಆಗಿರುವುದು ನಿಮಗೆಲ್ಲ ಗೊತ್ತು ಎಂದು ಟೀಕಿಸಿದರು.

ಆರ್.ಅಶೋಕ್ ಜೊತೆ ಹೊಂದಾಣಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ದ್ವೇಷದ ರಾಜಕಾರಣ ನಾವು ಮಾಡಲ್ಲ, ನಾವು ನೇರಾನೇರಾ ರಾಜಕಾರಣ ಮಾಡುತ್ತೇವೆ.

ನಮಗೆ ದ್ವೇಷದ ರಾಜಕಾರಣ ಅಗತ್ಯವಿಲ್ಲ. ಅಶೋಕ್ ಜೊತೆ ಹೊಂದಾಣಿಕೆ ಮಾಡಿಕೊಳ್ಳುವ ಗತಿ ಡಿ.ಕೆ.ಶಿವಕುಮಾರ್ಗೆ ಬಂದಿಲ್ಲ ಎಂದು ತಿರುಗೇಟು ನೀಡಿದರು.

## ಏ.23 ರಂದು ಶ್ರೀ ಬಸವೇಶ್ವರ ಜಯಂತಿ ಆಚರಣೆ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ವತಿಯಿಂದ ಏ.23 ರಂದು ಬೆಳಿಗ್ಗೆ 10–30 ಗಂಟೆಗೆ ಜಿಲ್ಲಾಧಿಕಾರಿಗಳ ನೂತನ ಸಭಾಭವನದಲ್ಲಿ ಶ್ರೀ ಬಸವೇಶ್ವರ ಜಯಂತಿಯನ್ನು ಏರ್ಪಡಿಸಲಾಗಿದೆ.

2023ರ ವಿಧಾನಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಸರಳವಾಗಿ ಏರ್ಪಡಿಸಲಾಗಿದ್ದು ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಭಾಗವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎ.ಬಿ. ಪಾಟೀಲ್ ಗೆಲುವಿಗೆ ಶ್ರಮಿಸಿ: ಸತೀಶ್ ಜಾರಕಿಹೊಳಿ

ಹುಕ್ಕೇರಿ: ಬಿಜೆಪಿ ಸರ್ಕಾರದ ಭ್ರಷ್ಟಾಚಾರಕ್ಕೆ ಜನರು ಬೇಸತ್ತಿದ್ದು, ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಚಿವ ಎ.ಬಿ. ಪಾಟೀಲ್ ಅವರನ್ನು ಭಾರೀ ಅಂತರದಿಂದ ಗೆಲ್ಲಿಸಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಕರೆ ನೀಡಿದರು.

ಹುಕ್ಕೇರಿ ವಿಧಾನಸಭಾ ಕ್ಷೇತ್ರದ ಹಿಡಕಲ್ ಡ್ಯಾಂ ನಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ, ಮಾಜಿ ಸಚಿವ ಎ.ಬಿ. ಪಾಟೀಲ ಪರ ಮತಯಾಚಿಸಿ ಅವರು ಮಾತನಾಡಿದರು.

ಸಂಕೇಶ್ವರ ಮತಕ್ಷೇತ್ರದಿಂದ ಆಯ್ಕೆಯಾಗಿದ್ದ ಸಂದರ್ಭದಲ್ಲಿ ಎ.ಬಿ. ಪಾಟೀಲರು ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಮುಂದೆಯೂ ಸರ್ವರ ಪ್ರಗತಿಗೆ ಶ್ರಮಿಸುತ್ತಾರೆ ಎಂಬ ನಂಬಿಕೆ ನಮಗಿದೆ. ಕಾರಣ ಅವರನ್ನು ಆಯ್ಕೆ ಮಾಡಿ ಮತ್ತೊಮ್ಮೆ ವಿಧಾನ ಸಭೆಗೆ ಕಳುಹಿಸಬೇಕೆಂದು ಮನವಿ ಮಾಡಿದರು.

ಮಾಜಿ ಸಚಿವ ಶಶಿಕಾಂತ ನಾಯಕ ಅವರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದು ಖುಷಿಯಾಗಿದೆ. ಅವ–



ರಿಂದ ಕಾಂಗ್ರೆಸ್ ಪಕ್ಷಕ್ಕೆ ಇನ್ನಷ್ಟು ಶಕ್ತಿ ಬಂದಂತಾಗಿದೆ. ಅವರ ಹೋರಾಟ ಹಾದಿ ಯುವಕರಿಗೆ ಸ್ಫೂರ್ತಿ. ಇಂತಹ ನಾಯಕರ ಮಾರ್ಗದರ್ಶನ ಪಡೆದು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕೆಂದು ತಿಳಿಸಿದರು.

ಈ ಭಾರೀ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನೂರಕ್ಕೆ ನೂರಷ್ಟು ಸತ್ಯ. ಅದರಲ್ಲಿ ಯಾವುದೇ ಸಂದೇಹ ಬೇಡ. ಹೀಗಾಗಿ ಪಕ್ಷಕ್ಕಾಗಿ ಕಾರ್ಯಕರ್ತರು ನಿಷ್ಠೆಯಿಂದ ದುಡಿಯಬೇಕು. ನಮ್ಮ ಅಧಿಕಾರಾದ ಅವಧಿಯಲ್ಲಿ ಆದ ಕೆಲಸಗಳನ್ನು ನೋಡಿ ಕಾಂಗ್ರೆಸ್ ಗೆ ಮತ ನೀಡಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ, ಮಾಜಿ ಸಚಿವ ಎ.ಬಿ. ಪಾಟೀಲ್, ಮಾಜಿ ಸಚಿವ ಶಶಿಕಾಂತ ನಾಯಕ ಸೇರಿದಂತೆ ನೂರಾರು ಜನ ಕಾಂಗ್ರೆಸ್ ಮುಖಂಡರು ಇದ್ದರು.

## ವಿಂಗ್ ಕಮಾಂಡರ್ ದೀಪಿಕಾ ಮಿಶ್ರಾಗೆ ಶೌರ್ಯ ಪ್ರಶಸ್ತಿ ಪ್ರದಾನ

ನವದೆಹಲಿ: ವಿಂಗ್ ಕಮಾಂಡರ್ ದೀಪಿಕಾ ಮಿಶ್ರಾ ಅವರು ಶೌರ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಈ ಗೌರವಕ್ಕೆ ಪಾತ್ರರಾದ ಭಾರತೀಯ ವಾಯುಪಡೆಯ ಮೊದಲ ಮಹಿಳಾ ಅಧಿಕಾರಿ ಎಂಬ ಹೆಗ್ಗಳಿಕೆ ದೀಪಿಕಾ ಅವರದು.

ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ವಿ.ಆರ್.ಚೌಧರಿ ಅವರು ಇಲ್ಲಿನ ಸುಬ್ರತೊ ಪಾರ್ಕ್ನಲ್ಲಿರುವ ವಾಯುಪಡೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೀಪಿಕಾ ಅವರಿಗೆ 'ವಾಯು ಸೇನಾ ಪದಕ' ಪ್ರದಾನ ಮಾಡಿದರು.

ರಾಜಸ್ಥಾನ ಮೂಲದ ದೀಪಿಕಾ ಅವರು ಹೆಲಿಕಾಪ್ಟರ್ ಪೈಲಟ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ. ಮಧ್ಯಪ್ರದೇಶದಲ್ಲಿ ಪ್ರವಾಹ ಸಂದರ್ಭದಲ್ಲಿ



ಕೈಗೊಂಡಿದ್ದ ರಕ್ಷಣಾ ಕಾರ್ಯದ ವೇಳೆ ಅಪ್ರತಿಮ ಧೈರ್ಯ ಪ್ರದರ್ಶಿಸಿದ್ದಕ್ಕಾಗಿ ದೀಪಿಕಾ ಅವರಿಗೆ ಈ ಪುರಸ್ಕಾರ ನೀಡಲಾಗಿದೆ ಎಂದು ವಾಯುಪಡೆ ತಿಳಿಸಿದೆ.

## ಜೆಡಿಎಸ್ ಸೇರಿದ ವಿವಿಧ ಗ್ರಾಮಗಳ ಯುವಕರು, ಮುಖಂಡರು

ಬೀದರ್: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಗೋವಿಂದತಾಂಡ, ಮೀನಕೇರಾ, ಕೋಳಾರ, ಬಸಲಾಪೂರ, ಪೊಲಕಪಳ್ಳಿ, ಬಗದಲ್, ಸಂಗೊಳಗಿ, ಗೋರನಳ್ಳಿ, ಯಾಕಾತಾಪೂರ ಸೇರಿದಂತೆ ವಿವಿಧ ಗ್ರಾಮಗಳ ಕಾಂಗ್ರೆಸ್, ಬಿಜೆಪಿ ಪಕ್ಷಗಳ ಪ್ರಮುಖರು, ಯುವಕರು ನೂರಾರು ಸಂಖ್ಯೆಯಲ್ಲಿ ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಬೀದರ್ ದಕ್ಷಿಣ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ತಮ್ಮ ನಿವಾಸದ ಆವರಣದಲ್ಲಿ ಸುಮಾರು 09ಕ್ಕೂ ಹೆಚ್ಚು ಗ್ರಾಮಗಳ ವಿವಿಧ ಪಕ್ಷದ ಪ್ರಮುಖರು,



ನೂರಾರು ಜನ ಯುವಕರು, ಮುಖಂಡರಿಗೆ ಶುಕ್ರವಾರ ಜೆಡಿಎಸ್ ಶಾಲು ಹೊದಿಸಿ, ಪಕ್ಷದ ಧ್ವಜ ನೀಡುವ ಮೂಲಕ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಜೆಡಿಎಸ್ ಪಕ್ಷಕ್ಕೆ ಬರಮಾಡಿಕೊಂಡರು.

ಈ ವೇಳೆ ಮಾತನಾಡಿದ ಶಾಸಕ ಬಂಡೆಪ್ಪ ಖಾಶೆಂಪುರ್ ರವರು, ಕಾಂಗ್ರೆಸ್, ಬಿಜೆಪಿ ಪಕ್ಷಗಳಲ್ಲಿ ಪ್ರಮುಖರಾಗಿದ್ದ ಅನೇಕ ಜನ ಹಿರಿಯರು, ಯುವಕರು, ಮುಖಂಡರು, ಮಹಿಳೆಯರು ಪ್ರತಿನಿತ್ಯ ನಮ್ಮ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಈ ಬಾರಿ ರಾಜ್ಯದಲ್ಲಿ ಜೆಡಿಎಸ್ ಸರ್ಕಾರ ತರಬೇಕು ಎಂದು ರಾಜ್ಯದ ಜನರು ತೀರ್ಮಾನಿಸಿದ್ದಾರೆ. ಪ್ರತಿನಿತ್ಯ ಸಾವಿರಾರು ಜನರು ನಮ್ಮ ಪಕ್ಷಕ್ಕೆ ಬರುತ್ತಿದ್ದಾರೆ ಎಂದರು.

ರಾಜ್ಯದಲ್ಲಿ ಜೆಡಿಎಸ್ ಪಕ್ಷ ಅಧಿಕಾರದಲ್ಲಿ ಇದ್ದಾಗ, ಸಮ್ಮಿಶ್ರ ಸರ್ಕಾರದ ಸಂದರ್ಭದಲ್ಲಿ ನಾವು ಅನೇಕ ಜನಪರ ಕೆಲಸಗಳನ್ನು ಮಾಡಿದ್ದೇವೆ. ಈ ಬಾರಿ ಅಧಿಕಾರಕ್ಕೆ ಬಂದರೆ ಮಾಡಲಿರುವ ಜನಪರ ಕೆಲಸಗಳ ಬಗ್ಗೆ ಕೂಡ ತಿಳಿಸಿದ್ದೇವೆ. ಪಕ್ಷದ ಮುಖಂಡರು, ಕಾರ್ಯಕರ್ತರು ಅವುಗಳ ಬಗ್ಗೆ ಪ್ರತಿಯೊಬ್ಬರಿಗೂ ತಿಳಿಸಬೇಕು. ಮನೆಮನೆಗೂ ನಮ್ಮ ಪಕ್ಷದ ಗುರಿ ಮತ್ತು ಉದ್ದೇಶಗಳ ಬಗ್ಗೆ ತಿಳಿಸುವ ಕೆಲಸ ಮಾಡಬೇಕೆಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ನೂತನವಾಗಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದವರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಸೇರಿದ ಅಶೋಕ್ ರೆಡ್ಡಿ ಪೊಲಕಪಳ್ಳಿ, ಭೀಮಷಾ ಕತ್ರಿ ಬಸಲಾಪೂರ, ಬಸವರಾಜ್ ಹುಡ್ಗಿ ಬಗದಲ್, ಕೇಶವ್ ರಾವ್ ಪಾಟೀಲ್, ಶಂಕರರಾವ್ ಪಾಟೀಲ್, ಸುನೀಲ್ ಕುಮಾರ್, ಅಜಯ್ ದೊಡ್ಡಮನಿ, ರಾಕೇಶ್ ಜಟಗೊಂಡ, ಪ್ರಜ್ವಲ್ ದೊಡ್ಡಮನಿ ಪ್ರಮುಖರಾದ ಗಣಪತಿ ಶಂಭು, ಮಹೇಶ್ ಚಿಂತಾಮಣಿ, ಚನ್ನಮಲ್ಲಪ್ಪ ಹಜ್ಜರಗಿ, ರಾಜಶೇಖರ ಜವಳೆ ಸೇರಿದಂತೆ ಅನೇಕರಿದ್ದರು.

## ಮಹಿಳಾ ಪೊಲೀಸ್ ಗೆ ಕಿರುಕುಳ: ಇಬ್ಬರು ಪೊಲೀಸರ ವಿರುದ್ಧ ದೂರು ದಾಖಲು




ಶಿವಮೊಗ್ಗ: ಪೊಲೀಸ್ ಇಲಾಖೆಯ ಅರಣ್ಯ ಸಂಚಾರಿ ದಳದ ಮಹಿಳಾ ಸಿಬ್ಬಂದಿಯ ಮೇಲೆ ಮಾನಭಂಗ ಯತ್ನ ಆರೋಪ ಹಿನ್ನೆಲೆಯಲ್ಲಿ ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯ ಇಬ್ಬರು ಸಿಬ್ಬಂದಿ ವಿರುದ್ಧ ದೂರು ದಾಖಲಾಗಿದೆ.

ನೊಂದ ಮಹಿಳಾ ಸಿಬ್ಬಂದಿ ಕಿರುಕುಳ, ಮಾನಭಂಗ ಯತ್ನ ಆರೋಪದಡಿ ಸಾಗರದ ನಗರ ಠಾಣೆಯಲ್ಲಿ ದೂರು ದಾಖಲಾಗಿದೆ. ಬೆಂಗಳೂರಿನ ಜೀವನ್ ಬಿಮಾನಗರ ಪೊಲೀಸ್ ಠಾಣೆಯಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಆನಂದ ಪಾಟೀಲ್ ಎಂಬುವನ ವಿರುದ್ಧ ಕ್ರಿಮಿನಲ್ ಪ್ರಕರಣದ ವಿಚಾರಣೆಯನ್ನು ಭದ್ರಾವತಿ ನ್ಯೂಟನ್ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿತ್ತು.

ನಾನು ಸಾಗರ ಠಾಣೆಗೆ ವರ್ಗಾವಣೆಯಾಗಿ ಬಂದ ನಂತರ ಮಾಹಿತಿ ಕಲೆ ಹಾಕಲು ಮುಂದಾದ ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯ ಇಬ್ಬರು ಸಿಬ್ಬಂದಿ ತಮ್ಮ ವಿರುದ್ಧ ಗ್ರಾಮದಲ್ಲಿ ಅಪಪ್ರಚಾರ ಮಾಡಿದ್ದಾರೆ. ವಿಚಾರಣೆಗೆ ಬಂದ ಸಂದರ್ಭದಲ್ಲಿ ಸಿಬ್ಬಂದಿಯೊಬ್ಬ ಮಾನಭಂಗಕ್ಕೆ ಯತ್ನಿಸಿದ್ದಾನೆ ಎಂದು ನಗರ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡ ಪೊಲೀಸರು ವಿಚಾರಣೆ ನಡೆಸಿದ್ದಾರೆ.

# ದಶಕಗಳ ಗಡಿ ಸಂಘರ್ಷಕ್ಕೆ ಅಂತ್ಯ ಹಾಡಿದ ಗೃಹ ಸಚಿವ ಅಮಿತ್ ಶಾ



ಸುಮಾರು 800 ಕಿ.ಮೀ ಉದ್ದದ ವಿಸ್ತಾರ ಹೊಂದಿರುವ ಅಸ್ಸಾಂ–ಅರುಣಾಚಲ ಪ್ರದೇಶದ ಅಂತರರಾಜ್ಯ ಗಡಿ ಒಪ್ಪಂದಕ್ಕೆ ಗುರುವಾರ ಸಹಿ ಹಾಕಿದ್ದು, ಗೃಹ ಸಚಿವ ಅಮಿತ್ ಶಾ ಅವರ ಈಶಾನ್ಯ ರಾಜ್ಯಗಳ ಅಭಿವೃದ್ಧಿಯ ಪರ್ವಕ್ಕೆ ಮತ್ತೊಂದು ಗರಿ ಮೂಡಿದೆ. ಈ ಐತಿಹಾಸಿಕ ಒಪ್ಪಂದವು ಎರಡು ನೆರೆಯ ರಾಜ್ಯಗಳ ನಡುವೆ ದೀರ್ಘಾವಧಿಯ ಒಪ್ಪಂದವನ್ನು ಖಚಿತಪಡಿಸುವುದಲ್ಲದೇ, ಕೆಲವು ವರ್ಷಗಳಿಂದ ಕಳೆದುಹೋಗಿದ್ದ ವೈಭವವನ್ನು ಮರಳಿ ಪಡೆಯಲು, ಮತ್ತು ಇಡೀ ಈಶಾನ್ಯ ಪ್ರದೇಶದ ಪ್ರಗತಿಗೆ ಮತ್ತಷ್ಟು ಉತ್ತೇಜನ ನೀಡಲಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾರವರ ಕನಸಿನ ಕೂಸಾದ ಈ ಒಪ್ಪಂದವು, ಯಾವುದೇ ಪ್ರದೇಶ ಅಥವಾ ಗ್ರಾಮಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ಉಭಯ ರಾಜ್ಯಗಳ ನಡುವೆ ಯಾವುದೇ ಭವಿಷ್ಯದಲ್ಲಿ ಭಿನ್ನಾಭಿಪ್ರಾಯವನ್ನು ಹೆಚ್ಚಿಸುವ ಅವಕಾಶವನ್ನು ಶಾಶ್ವತವಾಗಿ ತೆಗೆದುಹಾಕುತ್ತದೆ. ಕಳೆದ ನಾಲ್ಕು ವರ್ಷಗಳಲ್ಲಿ ಈಶಾನ್ಯ ರಾಜ್ಯಗಳಲ್ಲಿ ಮಾಡಿದ ಎಂಟನೇ ಒಪ್ಪಂದವಾಗಿದ್ದು, ಆರ್ಥಿಕ ಅಭಿವೃದ್ಧಿಗೆ ಅಗಾಧವಾದ ಸಾಮರ್ಥ್ಯವನ್ನು ಹೊಂದಿರುವ ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಶಾಶ್ವತಗೊಳಿಸುವ ಗುರಿಯನ್ನು ಹೊಂದಿದೆ.

ಶಾರವರ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಲಾಗಿದ್ದು, ಅವರು ಶಾಂತಿಯಿಲ್ಲದೆ ಅಭಿವೃದ್ಧಿಯನ್ನು ಸಾಧಿಸಲು ಸಾಧ್ಯವಿಲ್ಲ ಎಂದು ಬಲವಾಗಿ ನಂಬಿದ್ದಾರೆ. ಶಾರವರ ಪ್ರಕಾರ, ಅಭಿವೃದ್ಧಿಗೆ ಸಹಕಾರ ಮತ್ತು ಶ್ರದ್ಧೆ ಬೇಕು, ಆಂದೋಲನ ಅಥವಾ ಭಿನ್ನಾಭಿಪ್ರಾಯವಲ್ಲ.

ಈ ಸಂದರ್ಭದಲ್ಲಿ ಮಾತನಾಡಿದ ಶಾ, ಹಿಂದಿನ ಸರ್ಕಾರಗಳ ನಿಷ್ಕ್ರಿಯ ಕು–ರಿತು ಟೀಕಿಸುತ್ತಾ, ಅವರು ಈ ರೀತಿ ನಿರುತ್ಸಾಹ ತೋರಿಸದಿದ್ದರೆಮ ಇಂತಹ ವಿವಾದಗಳು ಅಂತ್ಯಗೊಳ್ಳುತ್ತಿದ್ದವು. ಆದಾಗ್ಯೂ, ಅಸ್ಸಾಂ–ಅರುಣಾಚಲ ಒಪ್ಪಂದವು ಖಂಡಿತವಾಗಿಯೂ ಈ ಇಡೀ ಪ್ರದೇಶದ ಭವಿಷ್ಯದ ಅಭಿವೃದ್ಧಿಗೆ ದಾರಿ ಮಾಡಿಕೊಡಲಿದೆ ಎಂದು ಶಾ ಹೇಳಿದರು.

ಒಂದು ಕಾಲದಲ್ಲಿ ಅಭಿವೃದ್ಧಿ ಹೊಂದುತ್ತಿರುವ ವ್ಯಾಪಾರ ಮತ್ತು ಆರ್ಥಿಕ ಕೇಂದ್ರವಾಗಿ, ಅಷ್ಟಲಕ್ಷ್ಮಿ (ಎಂಟು ರಾಜ್ಯಗಳು) ಎಂದೇ ಕರೆಯಲ್ಪಡುವ ಈಶಾನ್ಯ ಪ್ರದೇಶವು ಆಂದೋಲನ, ಜನಾಂಗೀಯ ಸಂಘರ್ಷ, ಅಶಾಂತಿ, ಉಗ್ರಗಾಮಿತ್ವ ಮತ್ತು ಪ್ರತ್ಯೇಕತಾವಾದದಿಂದ ತನ್ನ ತೆರೆಮರೆಗೆ ಸರಿಯಿತು. 2014 ರಲ್ಲಿ ಅಧಿಕಾರ ವಹಿಸಿಕೊಂಡ ತಕ್ಷಣ, ತನ್ನ "ಆಕ್ಟ್ ಈಸ್ಟ್ ಪಾಲಿಸಿ" ಅಡಿಯಲ್ಲಿ ಈ ಪ್ರದೇಶದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯ ಶಾಶ್ವತ ವಾತಾವರಣವನ್ನು ತರುವ ಕಾರ್ಯವನ್ನು ಭಾಜಪ ಸರ್ಕಾರ ಮಾಡಿತು.

ಅಮಿತ್ ಶಾ ನೇತೃತ್ವದಲ್ಲಿ ಈ ಸಮಸ್ಯೆಗಳ ಪರಿಹಾರಕ್ಕಾಗಿ ತ್ರಿಸೂತ್ರಗಳನ್ನು ಅಳವಡಿಸಿಕೊಂಡರು.ಮೊದಲನೆಯದಾಗಿ ಸ್ಥಳೀಯ ಆಡುಭಾಷೆಗಳು, ನೃತ್ಯ, ಸಂಗೀತ, ಆಹಾರ ಮತ್ತು ಸಂಸ್ಕೃತಿಗಳನ್ನು ಕಾಪಾಡುವುದು ಮತ್ತು ಅವುಗಳನ್ನು ಭಾರತದಾದ್ಯಂತ ಪ್ರಚಾರ ಮಾಡುವುದು. ಎರಡನೇಯದಾಗಿ ಈಶಾನ್ಯ ರಾಜ್ಯಗಳಲ್ಲಿನ ಎಲ್ಲಾ ಸಂಘರ್ಷಗಳಿಗೆ ಅಂತ್ಯ ಹಾಡಿ, ಅಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಹೆಚ್ಚಿಸುವುದು. ಮೂರನೇಯದು ಈ ರಾಜ್ಯಗಳ ಸಮಗ್ರ ಅಭಿವೃದ್ಧಿ.

ಅಮಿತ್ ಶಾ ಅವರ ನೇತೃತ್ವದಲ್ಲಿ, ಗೃಹ ಸಚಿವಾಲಯವು ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಉತ್ತೇಜಿಸಲು ಶ್ರದ್ಧೆಯಿಂದ ಕೆಲಸ ಮಾಡಿದೆ, ಮತ್ತು "ಪೂರ್ಣ ಸರ್ಕಾರದ" ವಿಧಾನದೊಂದಿಗೆ ಪ್ರದೇಶದ ಘನತೆ, ಸಂಸ್ಕೃತಿ, ಭಾಷೆ, ಸಾಹಿತ್ಯ ಮತ್ತು ಸಂಗೀತಕ್ಕೆ ಮಹತ್ವ ನೀಡಿದೆ. ಬಹಳ ಸಮಯದಿಂದ ದೆಹಲಿಯ ನಿರ್ಲಕ್ಷ್ಯ ಮತ್ತು ಮಲತಾಯಿ ಧೋರಣೆಗೆ ಬಲಿಯಾದ ಈಶಾನ್ಯವು ಈಗ ಹಿಂಸಾಚಾರ ಮತ್ತು ಉಗ್ರಗಾಮಿತ್ವವನ್ನು ದೂರವಿಟ್ಟು ಅಭಿವೃದ್ಧಿಯ ಮುಖ್ಯವಾಹಿನಿಗೆ ಮರಳಲು ಪ್ರಾರಂಭಿಸಿದೆ.

ಪ್ರಸ್ತುತ ಸರ್ಕಾರವು ಈ ಪ್ರದೇಶದಲ್ಲಿ ಆರ್ಥಿಕ ಅಭಿವೃದ್ಧಿಗೆ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಬಜೆಟ್ ಬೆಂಬಲವನ್ನು ದೊಡ್ಡ ರೀತಿಯಲ್ಲಿ ಹೆಚ್ಚಿಸುವುದರ ಜೊತೆಗೆ ಈಶಾನ್ಯ ಕೇಂದ್ರಿತ ವಿವಿಧ ಯೋಜನೆಗಳನ್ನು ಕೈಗೆತ್ತಿಕೊಳ್ಳುವುದರ ಹೊರತಾಗಿ, ಸರ್ಕಾರವು ಇತ್ತೀಚೆಗೆ ಈ ಪ್ರದೇಶಕ್ಕಾಗಿ ರೂ 4,800 ಕೋಟಿ ವೆಚ್ಚದಲ್ಲಿ ವೈಬ್ರೆಂಟ್ ವಿಲೇಜ್ ಪ್ರೋಗ್ರಾಂ (ವಿವಿಪಿ) ಅನ್ನು ಪ್ರಾರಂಭಿಸಿದೆ. ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮಕ್ಕೆ 2.66 ಲಕ್ಷ ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. 'DoNER' ಸಚಿವಾಲಯದ ಬಜೆಟ್ ಅನ್ನು ಸಹ ಗಣನೀಯವಾಗಿ ಹೆಚ್ಚಿಸಲಾಗಿದೆ.

2014 ಕ್ಕೆ ಹೋಲಿಸಿದರೆ, 2022 ರಲ್ಲಿ ಹಿಂಸಾಚಾರದ ಘಟನೆಗಳು 67% ರಷ್ಟು ಕಡಿಮೆಯಾಗಿದೆ.

ಅದೇ ಅವಧಿಯಲ್ಲಿ, ಭದ್ರತಾ ಪಡೆಗಳಲ್ಲಿನ ಸಾವುನೋವುಗಳು 60% ರಷ್ಟು ಕಡಿಮೆಯಾಗಿದೆ, ನಾಗರಿಕರ ಸಾವುಗಳು 85% ರಷ್ಟು ಕಡಿಮೆಯಾಗಿದೆ ಮತ್ತು 8,000 ಉಗ್ರಗಾಮಿಗಳು ಮುಖ್ಯವಾಹಿನಿಗೆ ಬಂದು ಶರಣಾಗಿದ್ದಾರೆ. ಅಂತೆಯೇ, ಈಶಾನ್ಯದಲ್ಲಿ ಸಶಸ್ತ್ರ ಪಡೆಗಳ ವಿಶೇಷ ಅಧಿಕಾರ ಕಾಯಿದೆ (AFSPA) ಪರಿಧಿಯನ್ನು ಕಡಿಮೆ ಮಾಡಲಾಗಿದೆ ಮತ್ತು ತೊಂದರೆಗೊಳಗಾದ ಪ್ರದೇಶಗಳು ಈಗ ಮಹತ್ವಾಕಾಂಕ್ಷೆಯ ವಲಯಗಳಾಗಿ ಬದಲಾಗುತ್ತಿವೆ.

## ಕಾಂಗ್ರೆಸ್ ಕಾರ್ಯಕರ್ತ ಹೃದಯಾಘಾತದಿಂದ ಸಾವು



ಅಣ್ಣಿಗೇರಿ: ಅಣಿಗೇರಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎನ್.ಎಚ್. ಕೋನರಡ್ಡಿ ಹಮ್ಮಿಕೊಂಡಿದ್ದ ಬಹಿರಂಗ ಚುನಾವಣಾ ಪ್ರಚಾರ ಸಭೆಗೆ ಆಗಮಿಸಿದ್ದ ನಲವಡಿ ಗ್ರಾಮದ ಮುಖಂಡ ದೇವನಗೌಡ ಪಾಟೀಲ (52) ಹೃದಯಾಘಾತದಿಂದ ಮೃತಪಟ್ಟ ಧಾರುಣ ಘಟನೆ ಸಂಭವಿಸಿದೆ.

ದಿ.ಎಸ್.ಎಮ್.ಪಾಟೀಲ ಸಭಾಭವನದ ಆವರಣದಲ್ಲಿ ಕಾಂಗ್ರೆಸ್ ಪಕ್ಷದಿಂದ ಸಭೆಯನ್ನು ಆಯೋಜಿಸಲಾಗಿತ್ತು. ರಾಜ್ಯ ಕಾಂಗ್ರೆಸ್ ಉಸ್ತುವಾರಿ ಹಾಗೂ ಸಂಸದ ರಣದೀಪ್‌ಸಿಂಗ್ ಸುರ್ಜೇವಾಲಾ ಹಾಗೂ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ನಲಪಾಡ್ ಉಪಸ್ಥಿತಿಯಲ್ಲಿ ಈ ಬಹಿರಂಗ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾಂಗ್ರೆಸ್ ಅಭ್ಯರ್ಥಿ ಹಾಗೂ ಮಾಜಿ ಶಾಸಕ ಎನ್.ಎಚ್.ಕೋನರಡ್ಡಿ ನಾಮಪತ್ರ ಸಲ್ಲಿಸಿದ ನಂತರ ಪಟ್ಟಣದಲ್ಲಿ ಇದೇ ಮೊದಲ ಬಹಿರಂಗ ಪ್ರಚಾರವನ್ನು ಹಮ್ಮಿಕೊಂಡಿರುವದು ವಿಶೇಷವಾಗಿತ್ತು. ದುರದೃಷ್ಟವಶಾತ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಿಗೆ ಸಭೆಯಲ್ಲಿ ಇಂತಹ ದುರ್ಘಟನೆ ಸಂಭವಿಸಿದೆ.

## ಸರ್ವರ ಪ್ರಗತಿ ಬಿಜೆಪಿಗೆ ಬೇಕಿಲ್ಲ, ಹೀಗಾಗಿ ಕಾಂಗ್ರೆಸ್‌ಗೆ ಬೆಂಬಲಿಸಿ: ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



ಯಮಕನಮರಡಿ: ಈ ಹಿಂದೆ ಬ್ರಿಟಿಷರು ದೇಶದಲ್ಲಿ ಒಡೆದು ಆಳುವ ನೀತಿ ಅನುಸರಿಸಿ ದೇಶವನ್ನು ಕೊಳ್ಳೆಹೊಡೆದರು. ಅದೇ ಮಾದರಿಯಲ್ಲಿ ಬಿಜೆಪಿ ನಡೆಯುತ್ತಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಶಿರೂರ ಹಾಗೂ ಹಗೇದಾಳ ಗ್ರಾಮಗಳಲ್ಲಿ ಮನೆ ಮನೆಗೆ ತೆರಳಿ ಮತಯಾಚಿಸಿ ಮಾತನಾಡಿದ ಅವರು, ಬಿಜೆಪಿಯವರು ಒಡೆದು ಹಾಳುವ ನೀತಿಯಲ್ಲಿಯೇ ಕೆಲಸ ಮಾಡುತ್ತಾರೆ.

ಅವರಿಗೆ ಸರ್ವರ ಪ್ರಗತಿ ಬೇಕಿಲ್ಲ ಎಂದು ವಾಗ್ದಾಳಿ ನಡೆಸಿದರು.

ದೇಶದ ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರ ಕಣ್ಣೀರು ಒರೆಸುತ್ತೇವೆಂದು ಉಚಿತ ಗ್ಯಾಸ್ ಸಿಲಿಂಡರ್ ಕೊಟ್ಟು ತದನಂತರ ಗ್ಯಾಸ್ ಸಿಲಿಂಡರ್ ಬೆಲೆ ಹೆಚ್ಚಿಸಿದ್ದಾರೆ. ಇದೀಗ ವಿದ್ಯುತ್ ಖಾಸಗೀಕರಣಗೊಳಿಸಿ ರೈತ–ರಿಗೆ ಕೊಡುವ ಉಚಿತ ವಿದ್ಯುತ್ ಹೊಡೆಯುವ ಹುನ್ನಾರ ನಡೆದಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷ ವಿಶೇಷವಾಗಿ ಹಿಂದೂಳಿದ ಜನರ ಅಭಿವೃದ್ಧಿಗೆ ಪೂರಕವಾಗಿ ಯೋಜನೆ ರೂಪಿಸುತ್ತದೆ. ಅದೇ ಬಿಜೆಪಿ ಜಾತಿ ಧರ್ಮದ ಮೇಲೆ ರಾಜ–ಕಾರಣ ಮಾಡುತ್ತಿದ್ದಾರೆ. ಇದ–ರಿಂದ ರಾಜ್ಯದ ಜನರು ಬೇಸತ್ತು ಹೋಗಿದ್ದು, ಬದಲಾವಣೆ ಬಯಸಿದ್ದಾರೆ.

ಕ್ಷೇತ್ರದ ಜನರು ಅಭಿವೃದ್ಧಿಗಾಗಿ ಮೇ 10 ರಂದು ಜರುಗಲಿರುವ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯಮಕನಮರಡಿ ಮತಕ್ಷೇತ್ರದ ಶಿರೂರ, ಹಗೇದಾಳ ಗ್ರಾಮ ನೂರಾರು ಕಾರ್ಯಕರ್ತರು ಇದ್ದರು.

## ಖಾನಾಪುರ: ಅಪರಿಚಿತ ವಾಹನ ಹರಿದು ಇಬ್ಬರು ರೈತರ ದುರ್ಮರಣ

ಬೆಳಗಾವಿ: ಹೊಲಕ್ಕೆ ಹೊರಟಿದ್ದ ನಾಲ್ವರು ರೈತರ ಮೇಲೆ ಅಪ–ರಿಚಿತ ವಾಹನ ಹರಿದ ಪರಿಣಾಮ ಇಬ್ಬರು ರೈತರು ಸ್ಥಳದಲ್ಲೇ ಮೃತಪಟ್ಟ ಘಟನೆ ಖಾನಾಪುರ ತಾಲೂಕಿನ ಗೋಧೋಳಿ ಗ್ರಾಮದ ಹೊರವಲಯದ ಧಾರವಾಡ ರಾಮನಗರ ರಾಜ್ಯ ಹೆದ್ದಾರಿಯ ಮೇಲೆ ನಡೆದಿದೆ.

ಅಪಘಾತದಲ್ಲಿ ಮೃತರನ್ನು ಗೊಧೋಳಿ ಗ್ರಾಮದ ಮಹಾಬಲೇಶ್ವರ ಶಿಂಧೆ (ವಯಸ್ಸು 65) ಮತ್ತು ಪುಂಡಲೀಕ ರೇಡೇಕರ (ವಯಸ್ಸು 72) ಎಂದು ಗುರುತಿಸಲಾಗಿದೆ. ಗೊಧೋಳಿಯ ನಾಲ್ವರು ರೈತರು ತಮ್ಮ ಜಮೀನುಗಳಲ್ಲಿ ಬೆಳೆದಿದ್ದ ಕಬ್ಬಿಗೆ ನೀರು ಹಾಯಿಸಲು ಹೊರಟಿದ್ದರು.

ಗ್ರಾಮದ ಹೊರವಲಯದಲ್ಲಿ ನಡೆದುಕೊಂಡು ಹೊಲದ ಕಡೆ ಹೊರಟಿದ್ದ ವೇಳೆ ಅಪರಿಚಿತ ವಾಹನವೊಂದು ಹಿಂಬದಿಯಿಂದ ಇವರಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಓರ್ವನಿಗೆ ಗಂಭೀರ ಗಾಯ, ಓರ್ವನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ನಂದಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವಿಧಾನಸಭಾ ಚುನಾವಣೆ: ಜೆಡಿಎಸ್ ಗೆ ಬಿಆರ್‌ಎಸ್ ಸಾಥ್



ಹೈದರಾಬಾದ್: ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ತೆಲಂಗಾಣದಲ್ಲಿ ಆಡಳಿತಾರೂಢ ಭಾರತ್ ರಾಷ್ಟ್ರ ಸಮಿತಿ (ಬಿಆರ್‌ಎಸ್) ಜೆಡಿಎಸ್‌ಗೆ ಬೆಂಬಲ ನೀಡುತ್ತಿದ್ದು, ಮೇ 10 ರಂದು ನಡೆಯಲಿರುವ ಚುನಾವಣೆಯಲ್ಲಿ ತನ್ನ ಮಿತ್ರ ಪಕ್ಷ ಕಣದಲ್ಲಿರುವ ಕಾರಣ ಯಾವುದೇ ಅಭ್ಯರ್ಥಿಯನ್ನು ಕಣಕ್ಕಿಳಿಸದಿರಲು ನಿರ್ಧರಿಸಿದೆ.

ಬಿಆರ್‌ಎಸ್, ಈ ಹಿಂದೆ ಟಿಆರ್‌ಎಸ್, ಕಳೆದ ವರ್ಷ ಡಿಸೆಂಬರ್‌ನಲ್ಲಿ ರಾಷ್ಟ್ರ ರಾಜಕಾರಣಕ್ಕೆ ಕಾಲಿಡಲು ತನ್ನ ಹೆಸರನ್ನು ಮರುನಾಮಕರಣ ಮಾಡಿತ್ತು. ಅಲ್ಲದೆ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಇಂಗಿತ ಕೂಡ ವ್ಯಕ್ತಪಡಿಸಿತ್ತು. ಆದಾಗ್ಯೂ, ಜೆಡಿ (ಎಸ್) ತನ್ನ ಸ್ನೇಹಿತ ಮತ್ತು ಚುನಾವಣೆಯಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಸಾಕಷ್ಟು ಸಮಯದ ಕೊರತೆಯಿಂದಾಗಿ ವಿಧಾನಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸದಿರಲು ಅದು ನಿರ್ಧರಿಸಿದೆ ಎಂದು ಬಿಆರ್–ಎಸ್ ಮೂಲಗಳು ಶುಕ್ರವಾರ ತಿಳಿಸಿವೆ.

ಸಾಕಷ್ಟು ಸಿದ್ಧತೆ ಮತ್ತು ಯೋಜನೆ ಇಲ್ಲದೆ ಚುನಾವಣೆ ಎದು–ರಿಸಲು ಪಕ್ಷವು ಒಲವು ಹೊಂದಿಲ್ಲ ಎಂದು ಮೂಲಗಳು ಹೇಳಿದ್ದು, ನೆರೆಯ ಮಹಾರಾಷ್ಟ್ರದಲ್ಲಿ ನೆಲೆಯೂರಲು ಬಿಆರ್‌ಎಸ್ ಸಾಕಷ್ಟು ಪ್ರಯತ್ನಗಳನ್ನು ಮಾಡುತ್ತಿದೆ. ಬಿಆರ್‌ಎಸ್ ಮುಖ್ಯಸ್ಥ ಮತ್ತು ಮುಖ್ಯಮಂತ್ರಿ ಕೆ ಚಂದ್ರಶೇಖರ್ ರಾವ್ ಅವರು ಇದುವರೆಗೆ ಮಹಾರಾಷ್ಟ್ರದ ನಾಂದೇಡ್ ಪ್ರದೇಶದಲ್ಲಿ ಎರಡು ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದ್ದಾರೆ ಮತ್ತು ಏಪ್ರಿಲ್ 24 ರಂದು ಛತ್ರಪತಿ ಸಂಭಾಜಿ ನಗರದಲ್ಲಿ (ಔರಂಗಾಬಾದ್) ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಚಂದ್ರ ಶೇಖರ ರಾವ್ ಅವರು ಜೆಡಿ (ಎಸ್) ಅಭ್ಯರ್ಥಿಗಳು ಮನವಿ ಮಾಡಿದರೆ ಅವರನ್ನು ಬೆಂಬಲಿಸಿ ಪ್ರಚಾರ ಮಾಡುವ ಬಗ್ಗೆ ಯೋಚಿಸಬಹುದು ಎನ್ನಲಾಗಿದೆ. ಅಂತೆಯೇ ಬಿಆರ್ ಎಸ್ ಸ್ಪರ್ಧೆಯಿಂದ ಬಿಜೆಪಿ ವಿರೋಧಿ ಮತಗಳ ವಿಭಜನೆಯ ನಂತರ ಕರ್ನಾಟಕದಲ್ಲಿ ಬಿಜೆಪಿಗೆ ತನ್ನ ಪ್ರಚಾರ ಲಾಭವಾಗಬಹುದು ಎಂಬ ಅಭಿಪ್ರಾಯದ ಬಗ್ಗೆ ಬಿಆರ್‌ಎಸ್ ಕಳವಳ ವ್ಯಕ್ತಪಡಿಸಿದೆ ಎಂದು ಮೂಲಗಳು ತಿಳಿಸಿವೆ.

## ಬಿಹಾರ ಮೂಲದ ಯುವತಿ ಶವವಾಗಿ ಪತ್ತೆ



ಬೆಂಗಳೂರು: ಪೀಣ್ಯ ಇಂಡಸ್ಟ್ರಿಯಲ್ ಏರಿಯಾದ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುತ್ತಿದ್ದ ಬಿಹಾರ ಮೂಲದ 22 ವರ್ಷದ ಯುವತಿಯೊಬ್ಬಳು ನಿಗೂಢ ರೀತಿಯಲ್ಲಿ ಶವವಾಗಿ ಪತ್ತೆಯಾಗಿದ್ದಾಳೆ. ಯುವತಿಯನ್ನು ರೀಮಾ ಕುಮಾರಿ ಎಂದು ಗುರ್ತಿಸಲಾಗಿದೆ. ಯುವತಿ ತಾನು ವಾಸವಿದ್ದ ಕಾರ್ಖಾನೆಗೆ ಸೇರಿದ ಹಾಸ್ಟೆಲ್‌ನ ಮೂರನೇ ಮಹಡಿಯಿಂದ ಕೆಳಗೆ ಜಿಗಿದು ಮೃತಪಟ್ಟಿರಬಹುದು ಎಂದು ಶಂಕಿಸಲಾಗಿದೆ. ಸೋಮವಾರ ರಾತ್ರಿ ಯುವತಿ ಪದೇ ಪದೇ ಟೆರೇಸ್'ಗೆ ಹೋಗುತ್ತಿರುವುದನ್ನು ಭದ್ರತಾ ಸಿಬ್ಬಂದಿಗಳು ನೋಡಿದ್ದಾರೆ. ಬಳಿಕ ಯುವತಿಯನ್ನು ರೂಮಿಗೆ ಕಳುಹಿಸಿದ್ದಾರೆ. ಆದರೆ, ಮರು ದಿನ ಯುವತಿ ಶವವಾಗಿ ಪತ್ತೆಯಾಗಿದ್ದಾಳೆ. ಘಟನೆ ನಡೆದು ಎರಡು ದಿನ ಕಳೆದರೂ ಪ್ರಕರಣವನ್ನು ಕೈಗೆತ್ತಿಕೊಳ್ಳಲು ವಿಳಂಬ ಮಾಡಿದ ಪೀಣ್ಯ ಪೊಲೀಸರ ವಿರುದ್ಧ ಗಾರ್ಮೆಂಟ್ಸ್ ಲೇಬರ್ ಯೂನಿಯನ್ (ಜಿಎಲ್‌ಯು) ಆಕ್ರೋಶ ಹೊರಹಾಕಿದ್ದು, ಮಂಗಳವಾರ ಪೊಲೀಸರೊಂದಿಗೆ ಮಾತಿನ ಚಕಮಕಿ ನಡೆಸಿತು.

## ಬಿಎಸ್‌ವೈ ನಿವಾಸಕ್ಕೆ ಶಾಸಕ ಬಸನಗೌಡ ಯತ್ನಾಳ್ ಭೇಟಿ



ಬೆಂಗಳೂರು: ಬಿಜೆಪಿಯ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಸುದೀರ್ಘ ಅವಧಿಯ ಬಳಿಕ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನಿವಾಸಕ್ಕೆ ಭೇಟಿ ನೀಡಿದ್ದರು.

ಇದಕ್ಕೆ ಕಾರಣವಾಗಿದ್ದು ಪಕ್ಷದ ಲಿಂಗಾಯತ ನಾಯಕರ ಸಭೆ. ಉತ್ತರ ಕರ್ನಾಟಕದಲ್ಲಿ ಪ್ರಭಾವ ಹೊಂದಿದ್ದ ಲಿಂಗಾಯತ ಸಮುದಾಯದ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ ಮತ್ತು ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದ–ರಿಂದ ಲಿಂಗಾಯತ ಮತಗಳು ಬಿಜೆಪಿಯಿಂದ ಚದುರದಂತೆ ತಡೆಯಲು ಅನುಸರಿಸಬೇಕಾದ ಕಾರ್ಯತಂತ್ರದ ಬಗ್ಗೆ ಚರ್ಚಿಸಲು ಯಡಿಯೂರಪ್ಪ ನೇತೃತ್ವದಲ್ಲಿ ಪಕ್ಷದ ಸಮುದಾಯದ ನಾಯಕರ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ ಪಾಲ್ಗೊಳ್ಳಲು ಯತ್ನಾಳ ಅವರು ಆಗಮಿಸಿದ್ದರು. ಹಿಂದೆ ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ ಅವರ ಬಳಿ ಹೋಗಿದ್ದ ಯತ್ನಾಳ ಅವರು ಬಳಿಕ ಅವರ ವಿರುದ್ಧವೇ ಸಮರ ಸಾರಿದ್ದರು.

## ಪ್ರಜಾಪ್ರಭುತ್ವದಲ್ಲಿ ಮತದಾರರ ಪಾತ್ರ ಮಹತ್ವದು




ಬೆಳಗಾವಿ: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೇಶದ ಬೆಳವಣಿಗೆ ಮತ್ತು ಭವಿಷ್ಯದ ದೃಷ್ಟಿಯಿಂದ ಮತದಾರರ ಪಾತ್ರ ಮುಖ್ಯವಾಗಿದೆ. ಪ್ರಜಾಪ್ರಭುತ್ವ ಉಳಿಯಲು ಮತದಾನ ಮಹತ್ವದ್ದಾಗಿದೆ. ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕು ಎಂದು ಸಹಾಯಕ ನಿರ್ದೇಶಕ ಲಿಂಗರಾಜ ಹಲಕರ್ಣಿಮಠ ಹೇಳಿದರು.

ತಾಲೂಕಿನ ಬೈಲೂರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿ ಸ್ಥಳದಲ್ಲಿ ಕೂಲಿಕಾರ–ರಿಗೆ ಮತದಾನ ಮತದಾನ ಜಾಗೃತಿಯ, ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರತಿಯೊಬ್ಬ ವ್ಯಕ್ತಿಯ ಮತವೂ ಪವಿತ್ರವಾದುದು. ಯಾವುದೇ ಆಮಿಷಗಳಿಗೆ ಒಳಗಾಗದೆ ವಿಧಾನ ಸಭೆ ಚುನಾವಣೆಯಲ್ಲಿ ಎಲ್ಲರೂ ಮತದಾನ ಮಾಡಿ ನಿಮ್ಮ ಹಕ್ಕನ್ನು ನೀವು ಚಲಾಯಿಸಿ ಎಂದರು.

ಐಇಸಿ ಸಂಯೋಜಕಿ ಎಸ್ ಬಿ ಜವಳಿ, ಬಿಎಫ್ ಟಿ ಸದ್ದಾಂ ದಾದೆಬಾಯಿ, ಜಗದೀಶ್ ಅಂಗಡಿ, ಗ್ರಾಮ ಕಾಯಕಮಿತ್ರ ಶೈಲಾ ಅಂಗಡಿ , ಡಿಇಓ ನಾಗಪ್ಪ ಇಟ್ನಾಳ ಹಾಗೂ ನರೇಗಾ ಕೂಲಿಕಾರರು ಹಾಜರಿದ್ದರು.

## ವಿಶೇಷ ಚೇತನರು ಕಡ್ಡಾಯವಾಗಿ ಮತದಾನದಲ್ಲಿ ಪಾಲ್ಗೊಳ್ಳಿ





ಬೆಳಗಾವಿ: ತಾಲೂಕಾ ಸ್ವೀಪ್ ಸಮಿತಿ ಬೈಲಹೊಂಗಲ ವತಿಯಿಂದ ತಾಲೂಕಿನ ವಿಶೇಷ ಚೇತನರು (ಅಂಗವಿಕಲರು) ಮತ್ತು ಗ್ರಾಮೀಣ ಪುರ್ನವಸತಿ ಕಾರ್ಯಕರ್ತರು ನಗರದಲ್ಲಿ ವಿಧಾನ ಸಭಾ ಚುನಾವಣೆ 2023 ರ ಮತದಾನ ಜಾಗೃತಿಯನ್ನು ಅಂಗವಿಕಲರ ಸ್ಕೂಟಿಗಳ ಮೂಲಕ ಜಾಥಾ ಹಮ್ಮಿಕೊಳ್ಳಲಾಯಿತು.

ಎಸ ಎಸ್ ಸಂಪಗಾವಿ ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾ–ರಿಗಳು ತಾಪಂ ಬೈಲಹೊಂಗಲ ರವರು ಹಸಿರು ನಿಶಾನೆ ತೋ–ರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿ ಮೇ 10–2023 ರಂದು ನಡೆಯುವ ವಿಧಾನ ಸಭಾ ಚುನಾವಣೆಯಲ್ಲಿ ಎಲ್ಲಾ ವಿಶೇಷ ಚೇತನರು ಪಾಲ್ಗೊಳ್ಳಬೇಕು ತಮಗೆಲ್ಲ–ರಿಗೂ ಮತದಾನ ಮಾಡಲು ಸರ್ಕಾರದ ಎಲ್ಲಾ ತರಹದ ಸೌಲಭ್ಯಗಳನ್ನು ಒದಗಿಸಲು ಈಗಾಗಲೇ ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಹಾಯಕ ನಿರ್ದೇಶಕರಾದ (ಗ್ರಾ.ಉ) ವಿಜಯ ಪಾಟೀಲ, ಸಹಾಯಕ ನಿರ್ದೇಶಕರಾದ (ಪಂ.ರಾಜ್) ರಘು ಬಿ ಎನ್, ಬೆಳಗಾವಿ ತಾಪಂ ಸಹಾಯಕ ನಿರ್ದೇಶಕರಾದ ಗಣೇಶ, ತಾಪಂ ವ್ಯವಸ್ಥಾಪಕರಾದ ಎಮ್ ಎ ಇಂಚಲಮಠ, ತಾಪಂ ಐಇಸಿ ಎಸ್ ವ್ಹಿ ಹಿರೇಮಠ ಚುನಾವಣೆ ನೋಡಲ್ ಅಧಿಕಾರಿ ಎಸ್ ಬಿ ಸಂಗನಗೌಡರ ತಾಂತ್ರಿಕ ಸಹಾಯಕ ನಾಗರಾಜ್ ಕಾಗತಿ, ತಾಲೂಕಾ ಎಮ್ ಆರ್ ಡಬ್ಲ್ಯೂ ಸಂಯೋಜಕ ರಾದ ಫಕ್ಕಿರಗೌಡ ಪಾಟೀಲ ಹಾಗೂ ತಾಲೂಕಿನ ಎಲ್ಲಾ ಗ್ರಾಮೀಣ ಪುನರವಸತಿ ಕಾರ್ಯಕರ್ತರು ಮತ್ತು ವಿಶೇಷ ಚೇತನರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಜನರಿಗೆ ಮೂಲಭೂತ ಸೌಲಭ್ಯ ಪಡೆಯುವುದಕ್ಕಿಂತ, ಹಣ ಪಡೆದು ಮತ ಹಾಕುವುದರಲ್ಲೇ ಆಸಕ್ತಿ; ಕರ್ನಾಟಕ ಹೈಕೋರ್ಟ್ ಕಿಡಿ




ಬೆಂಗಳೂರು: ನಮ್ಮ ಜನ–ರಿಗೆ ಮೂಲಭೂತ ಸೌಲಭ್ಯ ಪಡೆಯುವುದಕ್ಕಿಂತ ಚುನಾವಣೆ ಬಗ್ಗೆಯೇ ಹೆಚ್ಚು ಆಸಕ್ತಿ, ಅದರಲ್ಲೂ ಹಣ ಪಡೆದು ಮತ ಹಾಕುವುದರಲ್ಲೇ ಮಗ್ನರಾಗಿದ್ದಾರೆ ಎಂದು ಕರ್ನಾಟಕ ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿದೆ.

ಸಾರ್ವಜನಿಕ ಪ್ರಕಟಣೆ ನೀಡಿದ ಹೊರತಾಗಿಯೂ ಇಡೀ ರಾಜ್ಯದ ಯಾವೊಂದು ಭಾಗದಿಂದಲೂ ಸ್ಮಶಾನ ಜಾಗಕ್ಕೆ ಭೂಮಿ ಮಂಜೂರಾತಿ ಕೋರಿ ಸರ್ಕಾರಕ್ಕೆ ಜನರು ಮನವಿ ಸಲ್ಲಿಸದ ಬಗ್ಗೆ ಕರ್ನಾಟಕ ಹೈಕೋರ್ಟ್ ಕಿಡಿ ಕಾರಿದ್ದು, ನಮ್ಮ ಜನರಿಗೆ ಮೂಲಭೂತ ಸೌಲಭ್ಯ ಪಡೆಯುವುದಕ್ಕಿಂತ ಚುನಾವಣೆ ಬಗ್ಗೆಯೇ ಹೆಚ್ಚು ಆಸಕ್ತಿ, ಅದರಲ್ಲೂ ಹಣ ಪಡೆದು ಮತ ಹಾಕುವುದರಲ್ಲೇ ಮಗ್ನರಾಗಿದ್ದಾರೆ ಎಂದು ಕಿಡಿಕಾ–ರಿದ್ದಾರೆ.

ಸಾರ್ವಜನಿಕ ಪ್ರಕಟಣೆ ನೀಡಿದ ಹೊರತಾಗಿಯೂ ಇಡೀ ರಾಜ್ಯದ ಯಾವೊಂದು ಭಾಗದಿಂದಲೂ ಸ್ಮಶಾನ ಜಾಗಕ್ಕೆ ಭೂಮಿ ಮಂಜೂರಾತಿ ಕೋರಿ ರಾಜ್ಯ ಸರ್ಕಾರಕ್ಕೆ ಜನರು ಮನವಿ ಸಲ್ಲಿಸದ ಬಗ್ಗೆ ಗುರುವಾರ ತೀವ್ರ ಬೇಸರ ವ್ಯಕ್ತಪಡಿಸಿದ ಕರ್ನಾಟಕ ಹೈಕೋರ್ಟ್, "ಜನರಿಗೆ ಮೂಲಸೌಲಭ್ಯ ಪಡೆಯುವುದಕ್ಕಿಂತ ಚುನಾವಣೆ ಬಗ್ಗೆಯೇ ಹೆಚ್ಚು ಆಸಕ್ತಿ. ಮತ ಹಾಕಲು ಹಣ ವಸೂಲಿ ಮಾಡಬೇಕಲ್ಲವೇ?" ಎಂದು ಮೌಖಿ–ಕವಾಗಿ ಕಟುವಾಗಿ ನುಡಿದಿದೆ.

ರಾಜ್ಯದಲ್ಲಿ ಸ್ಮಶಾನ ಇಲ್ಲದ ಗ್ರಾಮ ಮತ್ತು ಪಟ್ಟಣ ಪ್ರದೇಶಗಳಿಗೆ ಅಗತ್ಯ ಜಮೀನು ಒದಸುವಂತೆ ಸೂಚಿಸಿ ಹೈಕೋರ್ಟ್ ಹೊರಡಿಸಿರುವ ಆದೇಶ ಜಾರಿ ಮಾಡದಿರುವುದಕ್ಕೆ ಬೆಂಗಳೂರು ನಿವಾಸಿ ಮಹಮ್ಮದ್ ಇಕ್ಬಾಲ್ ಸಲ್ಲಿಸಿರುವ ಸಿವಿಲ್ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಬಿ ವೀರಪ್ಪ ಮತ್ತು ಟಿ ವೆಂಕಟೇಶ್ ನಾಯ್ಕ್ ಅವರ ನೇತೃತ್ವದ ವಿಭಾಗೀಯ ಪೀಠವು ನಡೆಸಿತು.

ಇದಕ್ಕೂ ಮುನ್ನ, ವಿಚಾರಣೆ ವೇಳೆ ಸರ್ಕಾರಿ ವಕೀಲ ಕಿರಣ್ ಕುಮಾರ್ ಅವರು 2023ರ ಏಪ್ರಿಲ್ 19ರಂದು ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಒದಗಿಸಿರುವ ಪತ್ರ ಒಳಗೊಂಡ ಮೆಮೊವನ್ನು ಪೀಠಕ್ಕೆ ಸಲ್ಲಿಸಿದರು. 2023ರ ಏಪ್ರಿಲ್ 6ರ ಹೈಕೋರ್ಟ್ ಆದೇಶದಂತೆ ರಾಜ್ಯದಲ್ಲಿ ಸ್ಮಶಾನಕ್ಕೆ ಜಾಗವಿಲ್ಲದ ಗ್ರಾಮಕ್ಕೆ ಭೂಮಿ ಮಂಜೂರಾತಿ ಕೋರಿ ಸರ್ಕಾರಕ್ಕೆ ಮನವಿ ಸಲ್ಲಿಸಬಹುದು ಎಂದು ತಿಳಿಸಿ ಪತ್ರಿಕೆಗಳಲ್ಲಿ ಸಾರ್ವಜನಿಕ ಪ್ರಕಟಣೆ ನೀಡಲಾಗಿ–ತ್ತು. ಆದರೆ, ಸಾರ್ವಜನಿಕ ಪ್ರಕಟಣೆ ಪ್ರಕಟಿಸಿದ ಹೊರತಾಗಿಯೂ ಇಡೀ ರಾಜ್ಯದ ಯಾವುದೇ ಭಾಗದಿಂದಲೂ ಯಾವೊಬ್ಬ ಗ್ರಾಮಸ್ಥರಿಂದಲೂ ಸ್ಮಶಾನಕ್ಕೆ ಭೂಮಿ ಮಂಜೂರಾತಿ ಕೋರಿ ಮನವಿ ಬಂದಿಲ್ಲ ಎಂದು ಪತ್ರದಲ್ಲಿ ತಿಳಿಸಲಾಗಿತ್ತು.

ಈ ಪತ್ರ ನೋಡಿ ಬೇಸರಗೊಂಡ ನ್ಯಾಯಮೂರ್ತಿ ಬಿ ವೀರಪ್ಪ ಅವರು, "ಇಷ್ಟೇ ರೀ....ನಮ್ಮ ದೇಶ. ಸ್ಮಶಾನಕ್ಕೆ ಭೂಮಿ ಇತ್ಯಾದಿ ಮೂಲಸೌಲಭ್ಯ ಪಡೆಯುವುದರ ಬಗ್ಗೆ ಜನರಿಗೆ ಆಸಕ್ತಿ ಇಲ್ಲ. ಚುನಾವಣೆ ವಿಚಾರವಾಗಿ ಹೆಚ್ಚಿನ ಗಮನ ಹರಿಸುತ್ತಾರೆ. ಚುನಾವಣೆ ಬಂತಲ್ಲ; ಹಣ ವಸೂಲಿ ಮಾಡುವ ಕುರಿತು ಯೋಚಿಸುತ್ತಿದ್ದಾರೆ.

ಹಣ ಸ್ವೀಕರಿಸಿ ಮತ ಹಾಕಬೇಕಲ್ಲವೇ? ಅದುವೇ ಜನರಿಗೆ ಇಷ್ಟದ ವಿಷಯ. ಜನರೇ ಹೀಗಿದ್ದರೆ ನಾವು ಏನು (ನ್ಯಾಯಾಲಯ) ಮಾಡಲು ಸಾಧ್ಯವಿದೆ?" ಎಂದರು.

ಅಲ್ಲದೆ, ತಮಗೆ ಬೇಕಾದ ಮೂಲ ಸೌಲಭ್ಯದ ಬಗ್ಗೆ ಜನ ಆಸಕ್ತಿ ತೋರದಿರುವುದಕ್ಕೆ ನಮ್ಮ ದೇಶ ಹೀಗಿರುವುದು. ಸ್ವಾತಂತ್ರ್ಯ ಸಿಕ್ಕಿದೆ; ಎಂಜಾಯ್ ಮಾಡಬೇಕಷ್ಟೇ ಎಂಬ ಮನಸ್ಥಿತಿ ಜನರಲ್ಲಿದೆ. ಮತ್ತೆ ಸ್ವಾತಂತ್ರ್ಯ ಹೋದಾಗ ಅದರ ಮೌಲ್ಯ ತಿಳಿಯುತ್ತದೆ. ಮೊದಲು ಸಾರ್ವಜನಿಕರು ಮತ್ತು ಅವರ ಮನಸ್ಥಿತಿ ಬದಲಾಗಬೇಕು. ಪ್ರಕರಣದಲ್ಲಿ ನ್ಯಾಯಾಲಯವು ತನ್ನ ಕೆಲಸ ಮಾಡಿದೆ. ಜನರಿಗೇ ಮೂಲ ಸೌಲಭ್ಯ ಬೇಕಿಲ್ಲ ಎಂದಾದರೆ, ಈ ಪ್ರಕರಣವನ್ನು ಮುಕ್ತಾಯಗೊಳಿಸೋಣ. ಅದು ಬಿಟ್ಟು ಮತ್ತೇನು ಮಾಡೋಕೆ ಆಗುತ್ತದೆ. ನ್ಯಾಯದಾನ ಮಾಡುತ್ತೇವೆ; ಕೋರ್ಟ್‌ಗೆ ಬನ್ನಿ ಎಂದು ಸಾರಿ ಹೇಳಿದರೂ ಯಾರೊಬ್ಬರೂ ಮುಂದೆ ಬಾರದ ಪರಿಸ್ಥಿತಿ ಮನೆ ಮಾಡಿರುವುದು ವಿಷಾದನೀಯ ಎಂದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089